ಬೆಂಗಳೂರು ಸಂಪುಟ: 16 ಸಂಚಿಕೆ: 57 ಪುಟ: 06 ಗುರುವಾರ 23-01-2025

Mail:mussanje2010@gmail.com www.mussanjenews.com

# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB) Executive Editor: L P Babu Honourary Editor: Venkatesh



ತೆಲುಗು ಚಿತ್ರರಂಗದ ಪಾಲಾದ 'ಕನ್ನಡ ಚಿತ್ರರಂಗ' ಅಂದರೆ 'ಪುನೀತ್ ಸರ್'

ಪ್ಲೀಸ್ ಯಾರಿಗೂ ಹೇಳ್ಬೇಡಿ ಆಯ್ತಾ ಪುಟ 6

## ಲೋಕಾಯುಕ್ತ ವರದಿಯಲ್ಲಿ ಸಿದ್ದರಾಮಯ್ಯ ಕುಟುಂಬಕ್ಕೆ ಕ್ಲೀನ್‌ಚಿಟ್

# ಮುಡಾ: ಸಿಎಂ ಸೇಫ್!

ಬೆಂಗಳೂರು: ದೇಶವ್ಯಾಪಿ ಸುದ್ದಿಯಾಗಿದ್ದ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಹಗರಣ ತಾರ್ಕಿಕ ಅಂತ್ಯದ ಹೊಸ್ತಿಲಿಗೆ ಬಂದು ನಿಂತಿದೆ.

ಮುಡಾ ಹಗರಣದ ತನಿಖೆ ನಡೆಸಿದ್ದ ಲೋಕಾಯುಕ್ತ ಅಧಿಕಾರಿಗಳು ತನಿಖೆಯನ್ನು ಪೂರ್ಣಗೊಳಿಸಿ ವರದಿ ಸಿದ್ಧಪಡಿಸಿದ್ದು, ಇನ್ನೆರಡು ದಿನಗಳಲ್ಲಿ ನ್ಯಾಯಾಲಯಕ್ಕೆ ಸಲ್ಲಿಸಲಿದ್ದಾರೆ.

ಈ ಸಂಬಂಧ ಬಲ್ಲ ಮೂಲಗಳಿಂದ ಮಾಹಿತಿ ಲಭ್ಯವಾಗಿದ್ದು, ತನಿಖೆ ನಡೆಸಿದ್ದ ಲೋಕಾಯುಕ್ತ ಎಸ್‌ಪಿ ಟಿ.ಜೆ ಉದೇಶ್ ನೇತೃತ್ವದ ತಂಡ ನ್ಯಾಯಾಲಯಕ್ಕೆ ವರದಿ ಸಲ್ಲಿಸಲಿದೆ.

ವರದಿಯಲ್ಲಿ ಪ್ರಮುಖವಾಗಿ ಮುಖ್ಯಮಂತ್ರಿ ಅವರಿಗೆ ಕ್ಲೀನ್‌ಚಿಟ್ ದೊರೆತಿರುವ ಮಾಹಿತಿಯಿದ್ದು, ಇವರೊಂದಿಗೆ ಸಿಎಂ ಅವರ ಪತ್ನಿ ಪಾರ್ವತಿ ಕೂಡ ಆರೋಪ ಮುಕ್ತರಾಗಿದ್ದಾರೆ ಎಂದು ತಿಳಿದುಬಂದಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಕುರ್ಚಿಗೆ ಕಂಟಕ ಬರಬಹುದು ಎಂಬ ಮಟ್ಟಕ್ಕೆ ಸುದ್ದಿಯಾಗಿದ್ದ ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ಕೊನೆಗೂ ತನಿಖೆ ನಡೆದು ವರದಿ ಸಿದ್ಧಗೊಂಡಿದೆ.

ಹಗರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಅವರ ಪತ್ನಿ ಪಾರ್ವತಿ ಅವರ ಪಾತ್ರವೇನೂ ಇಲ್ಲ ಎಂಬುದನ್ನು ತನಿಖಾ ತಂಡ ದೃಢಪಡಿಸಿದೆ ಎಂದು ಮೂಲಗಳಿಂದ ತಿಳಿದುಬಂದಿದೆ.

ಮುಡಾದಲ್ಲಿ ನಡೆದಿದೆ ಎನ್ನಲಾದ ನೂರಾರು ಕೋಟಿ ರೂ. ಹಗರಣದಲ್ಲಿ ಸಿಎಂ ಅವರ ಪಾತ್ರ ಕಂಡುಬಂದಿಲ್ಲ. ಡಿ ನೋಟಿಫೈ, ಭೂ ಪರಿವರ್ತನೆ, ನಿವೇಶನ ಹಂಚಿಕೆ ಯಾವುದರಲ್ಲೂ ಮುಖ್ಯಮಂತ್ರಿಯವರಾಗಲೀ, ಅವರ ಕುಟುಂಬವಾಗಲೀ ಹಸ್ತಕ್ಷೇಪ ಮಾಡಿಲ್ಲ. ಇದು ಅಧಿಕಾರಿಗಳ




ನಿರ್ಲಕ್ಷ್ಯದಿಂದ ಆಗಿರುವ ಹಗರಣ ಎಂದು ತನಿಖಾ ವರದಿಯಲ್ಲಿ ಉಲ್ಲೇಖವಾಗಿದೆ ಎಂದು ಹೇಳಲಾಗಿದೆ. ಆಗಿನ ಮುಡಾ ಆಯುಕ್ತರು, ಕಂದಾಯ ಇಲಾಖಾಧಿಕಾರಿಗಳು ನಿಯಮವನ್ನು ಗಾಳಿಗೆ ತೂರಿರುವುದು ಕಂಡುಬಂದಿದ್ದು, ಇದು ಅಧಿಕಾರಿಗಳ ವ್ಯವಹಾರಿಕ ದಂಧೆಯೇ ಹೊರತು ಇದರಲ್ಲಿ ಸಿಎಂ ಹಾಗೂ ಅವರ ಕುಟುಂಬದವರ ಪಾತ್ರವೇನೂ ಇಲ್ಲ ಎಂಬುದನ್ನು ವರದಿ ಮೂಲಕ ನ್ಯಾಯಾಲಯದ ಗಮನಕ್ಕೆ ತರಲು ತನಿಖಾ ತಂಡ ಮುಂದಾಗಿದೆ ಎಂದು ತಿಳಿದು ಬಂದಿದೆ. ತನಿಖೆ ವೇಳೆ ಮುಡಾ ಕಚೇರಿಗೆ ತೆರಳಿದ್ದ ಉದೇಶ್ ನೇತೃತ್ವದ ತಂಡ 50:50 ಅನುಪಾತದ ಬಗ್ಗೆ ಸಭೆಯಲ್ಲಿ ಚರ್ಚೆ ಆದ ಬಗ್ಗೆ ಮಾಹಿತಿ ಸಂಗ್ರಹಿಸಿದೆ, 2020ನೇ ಸಾಲಿನ ನವೆಂಬರ್ 11ರಂದು ನಡೆದ ಸಭೆಯ ನಡವಳಿ ಪರಿಶೀಲಿಸಿ ವರದಿ ಸಿದ್ಧಪಡಿಸಿದೆ ಎಂದು ಹೇಳಲಾಗಿದೆ.

ಅಂದಿನ ಸಭೆಯಲ್ಲಿ ಮಾಜಿ ಆಯುಕ್ತ ನಟೇಶ್, ಮಾಜಿ ಅಧ್ಯಕ್ಷ ಹೆಚ್.ವಿ.ರಾಜು ಅವರುಗಳು ತೆಗೆದುಕೊಂಡ ನಿರ್ಧಾರಗಳ ಬಗ್ಗೆಯೂ ಕೂಡ ಮಾಹಿತಿ ಕಲೆಹಾಕಲಾಗಿದೆ. ಈ ಎಲ್ಲ ಮಾಹಿತಿಗಳನ್ನೊಳಗೊಂಡ ವರದಿಯನ್ನು ಲೋಕಾಯುಕ್ತ ತಂಡ ಸೋಮವಾರ ಅಥವಾ ಮಂಗಳವಾರ ನ್ಯಾಯಾಲಯಕ್ಕೆ ಸಲ್ಲಿಸು ಸಾಧ್ಯತೆಯಿದೆ.

**ಇಡಿ ತನಿಖೆ :** ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ಮತ್ತೊಂದೆಡೆ ಜಾರಿ ನಿರ್ದೇಶನಾಲಯದ ತನಿಖೆ ಕೂಡ ನಡೆಯುತ್ತಿದ್ದು, ಪ್ರಕರಣದ ತನಿಖೆಯನ್ನು ಸಿಬಿಐಗೆ ವಹಿಸಬೇಕು ಎಂದು ನ್ಯಾಯಾಲಯದ ಮೆಟ್ಟಿಲುಕೂಡ ಹತ್ತಲಾಗಿದೆ.

ಈ ವಿಚಾರಣೆಗೆ ಸಂಬಂಧಿಸಿದ ತೀರ್ಪನ್ನು ಇದೇ 27ರಂದು ನ್ಯಾಯಾಲಯ ನೀಡುವ ನಿರೀಕ್ಷೆಯಿದ್ದು, ಅದಕ್ಕೂ ಮುನ್ನವೇ ಲೋಕಾಯುಕ್ತ ಅಧಿಕಾರಿಗಳು ತನಿಖಾ ವರದಿಯನ್ನು ನ್ಯಾಯಾಲಯಕ್ಕೆ ಸಲ್ಲಿಕೆ ಮಾಡಲಿದ್ದಾರೆ ಎಂದು ಹೇಳಲಾಗಿದೆ.



ನಗರದ ಅರಮನೆ ಮೈದಾನದಲ್ಲಿ ಗುರುವಾರ ನಡೆದ ಅಂತರರಾಷ್ಟ್ರೀಯ ವಾಣಿಜ್ಯ ಮೇಳ ಸಾವಯುವ ಮತ್ತು ಸಿರಿಧಾನ್ಯ –2025 ನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಉದ್ಘಾಟನೆ ಮಾಡಿದರು. ಕಾರ್ಯಕ್ರಮದಲ್ಲಿ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ, ಡಿಸಿಎಂ ಡಿ. ಕೆ. ಶಿವಕುಮಾರ್, ಜಾರ್ಖಂಡ್ ರಾಜ್ಯದ ಕೃಷಿ ಸಚಿವೆ ಶಿಲ್ಪಿ ನೇಹಾ ಟರ್ಕಿ, ಸಚಿವರಾದ ಚೆಲುವರಾಯಸ್ವಾಮಿ, ಕೃಷ್ಣ ಭೈರೇಗೌಡ, ಭೈರತಿ ಸುರೇಶ್ ಉಪಸ್ಥಿತರಿದ್ದರು. ನಂತರ ವಸ್ತು ಪ್ರದರ್ಶನಕ್ಕೆ ಚಾಲನೆ ನೀಡಲಾಯಿತು.

## ಅಪಘಾತ; 18 ಮಂದಿಗೆ ಗಾಯ

ರಾಯಚೂರು: ಸಾರಿಗೆ ಬಸ್ ಹಾಗೂ ಟ್ರ್ಯಾಕ್ಟರ್ ನಡುವೆ ಭೀಕರ ಅಪಘಾತ ಸಂಭವಿಸಿ ಕೂಲಿ ಕಾರ್ಮಿಕ ಮಹಿಳೆ ಸ್ಥಳದಲ್ಲೇ ಸಾವನ್ನಪ್ಪಿದ್ದು 18 ಕೂಲಿಕಾರ್ಮಿಕರು ಗಾಯಗೊಂಡಿರುವ ಘಟನೆ ರಾಯಚೂರಿನ ಮುದಗಲ್ ಪಟ್ಟಣದಲ್ಲಿರುವ ಸಮೀಪದಲ್ಲಿ ಇಂದು ಜರುಗಿದೆ.

ನಸುಕಿನ ಜಾವ ಜಿಲ್ಲೆಯ ಲಿಂಗಸೂಗೂರು ತಾಲೂಕಿನ ಮುದಗಲ್ ಪಟ್ಟಣದ ಬಳಿ ಬನ್ನಿಗೋಳದ ಗ್ರಾಮದ ಹೊರವಲಯದಲ್ಲಿ ಈ ದುರ್ಘಟನೆ ಸಂಭವಿಸಿದೆ. ಟ್ರ್ಯಾಕ್ಟರ್‌ನಲ್ಲಿದ್ದ ಶ್ರೀದೇವಿ (19) ಮೃತ ಮಹಿಳೆಯೆಂದು ಗುರುತಿಸಲಾಗಿದೆ. ಇತ್ತೀಚಿಗಷ್ಟೇ ಶ್ರೀದೇವಿ ಅವರ ಮದುವೆ ಆಗಿತ್ತು ಎಂದು ತಿಳಿದುಬಂದಿದೆ. ಇನ್ನುಳಿದ 18 ಜನ ಕೂಲಿ ಕಾರ್ಮಿಕರಿಗೆ ಗಾಯಗಳು ಆಗಿದ್ದು, ಗಾಯಾಳುಗಳನ್ನು ಲಿಂಗಸೂಗೂರು ತಾಲೂಕು ಆಸ್ಪತ್ರೆಗೆ ಚಿಕಿತ್ಸೆಗೆ ರವಾನಿಸಲಾಗಿದೆ. ಪುಟ 2

## ಸಿಎಂ ಬದಲಾವಣೆ ವಿಚಾರದಲ್ಲಿ ಹೈಕಮಾಂಡ್ ತೀರ್ಮಾನವೇ ಅಂತಿಮ ಸಿಎಂ

**ಬೆಂಗಳೂರು:** ಸಿಎಂ ಬದಲಾವಣೆ ವಿಚಾರದಲ್ಲಿ ಪಕ್ಷದ ಹೈಕಮಾಂಡ್ ತೀರ್ಮಾನವೇ ಅಂತಿಮ ಎಂದು ಸಿಎಂ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ.

ವಿಧಾನಸೌಧದಲ್ಲಿ ಮಾತನಾಡಿದ ಅವರು, ಡಿಸಿಎಂ ಡಿ.ಕೆ.ಶಿವಕುಮಾರ್ ಹಾಗೂ ಸಚಿವ ಸತೀಶ್ ಜಾರಕಿಹೊಳಿ ಅವರನ್ನು ಅಭಿಮಾನಿಗಳು ಮುಖ್ಯ ಮಂತ್ರಿ ಗಳಾಗುವಂತೆ ಆಶಿಸುತ್ತಿರುವ ಬಗ್ಗೆ ಪ್ರತಿಕ್ರಿಯಿಸಿದರು. ಈ ಬಗ್ಗೆ ಪಕ್ಷದ ವರಿಷ್ಠರ ತೀರ್ಮಾನವೇ ಅಂತಿಮವಾಗಿದೆ ಎಂದರು.

ನಿಗಮ ಹಾಗೂ ಮಂಡಳಿಗಳಿಗೆ ಅನುದಾನ ಬಿಡುಗಡೆ ಮಾಡುತ್ತಿಲ್ಲವೆಂಬ ಬಿಜೆಪಿಗರ ಆರೋಪಕ್ಕೆ ಪ್ರತಿಕ್ರಿಯಿಸಿ,



ಬಿಜೆಪಿಯವರು ಸುಳ್ಳು ಆರೋಪಗಳನ್ನು ಮಾಡುತ್ತಿದ್ದಾರೆ. ಅವರ ಆರೋಪಗಳು ರಾಜಕೀಯ ಪ್ರೇರಿತವಾಗಿವೆ ಎಂದರು.

**ನನಗೆ ಮಾಹಿತಿ ಇಲ್ಲ :** ಮುಡಾ ಪ್ರಕರಣದಲ್ಲಿ ಸಿದ್ದರಾಮಯ್ಯ ಹಾಗೂ ಕುಟುಂಬದವರಿಗೆ ಲೋಕಾ ಯುಕ್ತದವರು ಕ್ಲೀನ್ ಚಿಟ್ ನೀಡಿರುವ ಬಗ್ಗೆ ಮಾತನಾಡಿದ ಸಿಎಂ, ಪುಟ 2

## ಮೈಕ್ರೋ ಫೈನಾನ್ಸ್ ನಿಯಂತ್ರಣ ಮಾಡುವಲ್ಲಿ ಸರ್ಕಾರ ವಿಫಲ


**ಹುಬ್ಬಳ್ಳಿ:** ರಾಜ್ಯದಲ್ಲಿ ಹೆಣ್ಣು ಮಕ್ಕಳ ತಾಳಿ ಕಿತ್ತುಕೊಳ್ಳುತ್ತಿರುವ ಮೈಕ್ರೋ ಫೈನಾನ್ಸ್ ಮೇಲೆ ಸರ್ಕಾರದ ನಿಯಂತ್ರಣ ತಪ್ಪಿದೆ. ಬಹಳಷ್ಟು ಕುಟುಂಬಗಳು ಮನೆ ಬಿಟ್ಟು ಹೋಗಿ ಆತ್ಮಹತ್ಯೆ ಮಾಡಿಕೊಳ್ಳುವಂತಹ ಪರಿಸ್ಥಿತಿ ನಿರ್ಮಾಣ ಆಗಿದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಆರೋಪಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕಾನೂನು ಇದ್ದರೂ ಕೂಡ ಸರ್ಕಾರ ಕಾನೂನಿನ ಪ್ರಯೋಗ ಮಾಡುತ್ತಿಲ್ಲ. ಯಾರಿಗೂ ಭಯ ಇಲ್ಲ. ವಸೂಲಿಗೆ ರೌಡಿಗಳನ್ನು ಬಿಟ್ಟಿದ್ದಾರೆ. ಸರ್ಕಾರ ಒಂದು ಕಡೆ ಮಹಿಳೆಯರಿಗೆ ಕಾರ್ಯಕ್ರಮ ಮಾಡುತ್ತೇನೆ ಎಂದು ಹೇಳುತ್ತಾರೆ. ಇನ್ನೊಂದು ಕಡೆ ಮಹಿಳೆಯರ ತಾಳಿ ಪುಟ 2

## ರವಿಗೆ ಹೈಕೋರ್ಟ್ ರಿಲೀಫ್

**ಬೆಂಗಳೂರು:** ವಿಧಾನಪರಿಷತ್ತಿನಲ್ಲಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ವಿರುದ್ಧ ಅವಾಚ್ಯ ಶಬ್ದಗಳಿಂದ ನಿಂದಿಸಿದ ಆರೋಪದಲ್ಲಿ ಬಿಜೆಪಿ ಎಂಎಲ್‌ಸಿ ಸಿಟಿ ರವಿಗೆ ಕರ್ನಾಟಕ ಹೈಕೋರ್ಟ್ ಗುರುವಾರ ಬಿಗ್ ರಿಲೀಫ್ ನೀಡಿದೆ. ಸಿಟಿ ರವಿ ವಿರುದ್ಧ ಫೆ.30ರವರೆಗೆ ಬಲವಂತದ ಕ್ರಮ ಕೈಗೊಳ್ಳದಂತೆ ಹೈಕೋರ್ಟ್ ಸೂಚಿಸಿದೆ. ಶಾಸಕರ ನಡುವೆ ಸದನದಲ್ಲಿ ನಡೆದ ವಿಚಾರಕ್ಕೆ ವಿನಾಯಿತಿ ಇದೆ ಪುಟ 2

## ಯುದ್ಧ ನಿಲ್ಲಿಸಿ ಇಲ್ಲದಿದ್ದರೆ ಹೊಸ ನಿರ್ಬಂಧ ಎದುರಿಸಿ


**ವಾಷಿಂಗ್ಟನ್:** ಉಕ್ರೇನ್ ಮೇಲೆ ನಡೆಸುತ್ತಿರುವ 'ಹಾಸ್ಯಾಸ್ಪದ ಯುದ್ಧ'ವನ್ನು ಅಂತ್ಯಗೊಳಿಸಿ ಅಥವಾ ಹೊಸ ನಿರ್ಬಂಧಗಳನ್ನು ಎದುರಿಸಿ ಎಂದು ಅಮೇರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ರಷ್ಯಾಗೆ ನೇರಎಚ್ಚರಿಕೆ ನೀಡಿದ್ದಾರೆ



ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಗೆ ನೇರ ಎಚ್ಚರಿಕೆ ನೀಡಿರುವ ಡೊನಾಲ್ಡ್ ಟ್ರಂಪ್, ಕೂಡಲೇ ಯುದ್ಧ ನಿಲ್ಲಿಸಿ ಇಲ್ಲವೇ ಪರಿಣಾಮ ಎದುರಿಸಲು ಸಜ್ಜಾಗಿ ಎಂದು ಗುಡುಗಿದ್ದಾರೆಉಕ್ರೇನ್‌ನಲ್ಲಿ ನಡೆಯುತ್ತಿರುವ ಯುದ್ಧವನ್ನು ಕೊನೆಗೊಳಿಸಲು ವಿಫಲವಾದರೆ ರಷ್ಯಾದ ಮೇಲೆ ಹೆಚ್ಚಿನ ಸುಂಕ ಮತ್ತು ಹೆಚ್ಚಿನ ನಿರ್ಬಂಧಗಳನ್ನು ವಿಧಿಸುವುದಾಗಿ ಎಚ್ಚರಿಕೆ ನೀಡಿದ್ದಾರೆ. ತಮ್ಮದೇ ಆದ ಸಾಮಾಜಿಕ ಮಾಧ್ಯಮ ಪ್ಲಾಟ್‌ಫಾರ್ಮ್ ಟ್ರೂತ್ ಪುಟ 2

## ನಾನಿಲ್ಲದಿದ್ದರೇ ರಾಮುಲು ಕೊಲೆಗಾರನಾಗುತ್ತಿದ್ದ: ರೆಡ್ಡಿ

**ಬೆಂಗಳೂರು:** ನಾನು ಬಳ್ಳಾರಿಯಲ್ಲಿ ಶ್ರೀರಾಮುಲು ಅವರನ್ನು ರಕ್ಷಣೆ ಮಾಡದೇ ಇದ್ದಿದ್ದರೆ ಆತನೊಬ್ಬ ಕೊಲೆಗಾರನಾಗುತ್ತಿದ್ದ ಎಂದು ರಾಮುಲು ಆಪ್ತಮಿತ್ರ ಜನಾರ್ಧನ ರೆಡ್ಡಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ.



ಶ್ರೀರಾಮುಲು ನನ್ನ ಬಳಿ ಬರುವುದಕ್ಕೂ ಮೊದಲು ಆತನ ಹಿಂದೆ ಇದ್ದದ್ದೆಲ್ಲ ಪಟಾಲಂಗಳೇ, ಅವನನ್ನು ನಾನು ಕರೆತಂದು ಸುಸಂಸ್ಕೃತನನ್ನಾಗಿ ಮಾಡಿದ್ದೇನೆ ಎಂದು ಕೊಂಡಿದ್ದೆ ಆದರೆ ಅವನು ಸುಸಂಸ್ಕೃತನಲ್ಲ ಎಂದು ಜನಾರ್ಧನ ರೆಡ್ಡಿ ಸುದ್ದಿಗೋಷ್ಠಿಯಲ್ಲಿ ರಾಮುಲು ವಿರುದ್ಧ ಹರಿಹಾಯ್ದಿದ್ದಾರೆ.

ಪಕ್ಷದ ಕೆಲ ಅಭ್ಯರ್ಥಿಗಳ ಸೋಲಿಗೆ ಶ್ರೀರಾಮುಲು ಕಾರಣ ಎಂಬ ವಿಷಯಕ್ಕೆ ಸಂಬಂಧಿಸಿದಂತೆ ಮೊನ್ನೆ ನಡೆದ ಕಾರ್ಯಕಾರಿಣಿ ಸಭೆಯಲ್ಲಿ ತಮ್ಮ ಗೆಳೆಯನ ವಿರುದ್ಧ ಅಸಮಾಧಾನ ತೋಡಿಕೊಂಡು ಸುದ್ದಿಮಾಡಿದ್ದ ವಿಷಯಕ್ಕೆ ಸಂಬಂಧಿಸಿದಂತೆ ಜನಾರ್ಧನ ರೆಡ್ಡಿ ಇಂದು ಪ್ರತಿಕ್ರಿಯೆ ನೀಡಿದ್ದಾರೆ ಬೆಂಗಳೂರಿನಲ್ಲಿ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದ ಅವರು, ರಾಮುಲು ವಿರುದ್ಧ ಕೊಲೆ ಆರೋಪ ಬಂದಾಗ ಆತನ ಜೊತೆ ನಾನು ನಿಂತೆ, ಈ ವೇಳೆ ನನ್ನ ತಾಯಿಯ ಬಳಿ ವಿರೋಧಿ ಗುಂಪುಗಳು ಅವನ ಸಹವಾಸ ಮಾಡದಂತೆ ತಿಳಿ ಹೇಳಿ ಎಂದು ಹೇಳಿದ್ದರು, ಆದರೂ ಕೂಡ ನಾನು ಅವನನ್ನು ಬಿಡದೆ ಆತನೊಂದಿಗೆ ಇದ್ದೆ ನಾನು ಇರದಿದ್ದರೆ ಶ್ರೀರಾಮುಲು ಕೊಲೆಗಾರನಾಗುತ್ತಿದ್ದ ಎಂದಿದ್ದಾರೆ

ನನ್ನ ಹಾಗೂ ಶ್ರೀರಾಮುಲು ಸ್ನೇಹ ಎಂತಹದ್ದು ಎಂದು ಇಡೀ ಬಳ್ಳಾರಿ ಜನತೆಗೆ ಗೊತ್ತಿದೆ, ನಿಜಕ್ಕೂ ರಾಮುಲು ಇಂತಹ ಹೇಳಿಕೆ ನೀಡುತ್ತಾರೆ ಎಂದು ಅಂದುಕೊಂಡಿರಲಿಲ್ಲ ಆತನ ಮಾವನ ಕೊಲೆಯ ವೇಳೆ ಆ ರೌಡಿಗಳ ಗುಂಪಿನಲ್ಲಿ ಇವರು ಕೂಡ ಇದ್ದರು, ಅಷ್ಟೇ ಅಲ್ಲದೆ ರಾಘವೇಂದ್ರ ಕೊಲೆ ಆರೋಪ ಕೂಡ ರಾಮುಲು ಮೇಲೆ ಬಂದಿತ್ತು.

ಆಗ ಅವರ ರಕ್ಷಣೆಗೆಂದು ಮಚ್ಚು ಚಾಕು, ಕೊಡಲಿಗಳನ್ನು ಇಟ್ಟುಕೊಂಡು ಸುತ್ತಾಡುತ್ತಿದ್ದರು, ಅಂತಹ ವ್ಯಕ್ತಿಯನ್ನು ನಮ್ಮ ಜೊತೆ ಸೇರಿಸಿಕೊಂಡು ಆತನಿಗೆ ಒಳ್ಳೆಯ ಪುಟ 2

## ಶ್ರೀರಾಮುಲುಗೆ ಡಿಕೆಶಿ ಗಾಳ

**ಬೆಂಗಳೂರು:** ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷದಲ್ಲಿ ಎಸ್‌ಟಿ ಸಮುದಾಯದ ನಾಯಕ ಸತೀಶ್ ಜಾರಕಿಹೊಳಿ ಅವರನ್ನ ಮಣಿಸಲು ಶ್ರೀರಾಮುಲು ಅವರನ್ನ ಸೆಳೆಯಲು ಡಿಕೆ ಶಿವಕುಮಾರ್ ಯತ್ನಿಸುತ್ತಿದ್ದಾರೆ ಎಂದು ಶಾಸಕ ಜನಾರ್ಧನ ರೆಡ್ಡಿ ಹೊಸ ಬಾಂಬ್ ಸಿಡಿಸಿದ್ದಾರೆ.


ಸತೀಶ್ ಜಾರಕಿಹೊಳಿ ಮಣಿಸಲು ಶ್ರೀರಾಮುಲು ಅವರನ್ನ ಡಿಕೆ ಶಿವಕುಮಾರ್ ಬೆಳೆಸುತ್ತಿದ್ದಾರೆ. ರಾಮುಲುರನ್ನ ಕಾಂಗ್ರೆಸ್ ಗೆ ತರಲು ಡಿಕೆ ಶಿವಕುಮಾರ್ ಯತ್ನಿಸುತ್ತಿದ್ದಾರೆ. ಸತೀಶ್ ಜಾರಕಿಹೊಳಿ ವಿರುದ್ಧ ಎಸ್ ಟಿ ನಾಯಕನ ಎತ್ತಿಕಟ್ಟಲು ಯತ್ನಿಸುತ್ತಿದ್ದಾರೆ ಎಂದರು. ಶ್ರೀರಾಮುಲು ಪಕ್ಷ ಬಿಟ್ಟು ಹೋಗುತ್ತಾರೆ ಎಂದರೆ ಅದು ಹೊಸದಲ್ಲ. ಈ ಹಿಂದೆ ಬಿಎಸ್ ಆರ್ ಕಾಂಗ್ರೆಸ್ ಪಕ್ಷ ಮಾಡುವಾಗಲೇ ನಾನು ಬಿಜೆಪಿ ಪಕ್ಷ ಬಿಡಬೇಡ ಅಂತ ಹೇಳಿದ್ದೆ. ಆಗ ನನ್ನ ಸಿಬಿಐ ಅರೆಸ್ಟ್ ಮಾಡ್ತಾರೆ. ಪುಟ 2

## ಮುಖ್ಯಮಂತ್ರಿಗಳ ಒತ್ತಡಕ್ಕೆ ಮಣಿದು ಲೋಕಾಯುಕ್ತದಿಂದ ಕ್ಲೀನ್ ಚಿಟ್?

**ಶಿವಮೊಗ್ಗ:** ಮುಡಾ ವಿಚಾರದಲ್ಲಿ ಮುಖ್ಯಮಂತ್ರಿಗಳ ಒತ್ತಡಕ್ಕೆ ಮಣಿದು ಲೋಕಾಯುಕ್ತದವರು ಕ್ಲೀನ್ ಚಿಟ್ ಕೊಟ್ಟಿರುವ ಸಾಧ್ಯತೆ ಇದೆ. ಕ್ಲೀನ್ ಚಿಟ್ ಕೊಟ್ಟಿದ್ದರೆ, ಇದರ ವಿರುದ್ಧ ನಾವು ಹೋರಾಟ ಮಾಡುತ್ತೇವೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ತಿಳಿಸಿದ್ದಾರೆ.

ಇಂದು ಇಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಮಾಧ್ಯಮಗಳಲ್ಲಿ ವರದಿಯಾದಂತೆ ಲೋಕಾಯುಕ್ತ ತನಿಖಾ ಸಂಸ್ಥೆಯು ಮುಡಾ ಹಗರಣದಲ್ಲಿ ಮುಖ್ಯಮಂತ್ರಿಗಳಿಗೆ ಕ್ಲೀನ್ ಚಿಟ್ ಕೊಟ್ಟಿದ್ದೇ ಆದರೆ, ಲೋಕಾಯುಕ್ತ ತನಿಖೆ ಸರಿಯಾಗಿ ಆಗುತ್ತಿಲ್ಲ; ಸಿಎಂ ಒತ್ತಡಕ್ಕೆ ಮಣಿದಿದ್ದಾರೆ ಎಂದು ಬಿಜೆಪಿ ಹಲವು ದಿನಗಳಿಂದ ವ್ಯಕ್ತಪಡಿಸಿದ ಅನುಮಾನಗಳು ಸತ್ಯವಾದಂತೆ ಎಂದು ವಿಶ್ಲೇಷಿಸಿದರು. ಮೊನ್ನೆ ಜಾರಿ ನಿರ್ದೇಶನಾಲಯವು (ಇ.ಡಿ.) ಪ್ರೆಸ್ ನೋಟನ್ನೂ ಬಿಡುಗಡೆ ಮಾಡಿದೆ. ಮುಡಾದಲ್ಲಿ ಎಷ್ಟು ಕೋಟಿ ಹಗರಣ ನಡೆದಿದೆ ಎಂಬುದನ್ನು ಮಾಧ್ಯಮಗಳಿಗೆ ತಿಳಿಸಿದ್ದಾರೆ. ಮತ್ತೊಂದು ಕಡೆ ರಾಜ್ಯ ಹೈಕೋರ್ಟ್ ಕೂಡ ಮೈಸೂರಿನ ಮುಡಾ ಹಗರಣವನ್ನು ಎಳೆಎಳೆಯಾಗಿ ಬಿಚ್ಚಿಟ್ಟಿದೆ. ಇದರ ನಡುವೆ ಮುಖ್ಯಮಂತ್ರಿಗಳೂ ಸೇರಿ ರಾಜ್ಯ ಸರಕಾರವು ಮಾನ್ಯ ರಾಜ್ಯಪಾಲರನ್ನು ಅವಹೇಳನಕಾರಿಯಾಗಿ ನಿಂದಿಸುವ ಪ್ರಯತ್ನ ಮಾಡಿದ್ದಾರೆ ಎಂದು ಆಕ್ಷೇಪಿಸಿದರು.

ಹೈಕೋರ್ಟ್ ತೀರ್ಪು ಬರುವ ಸಂದರ್ಭದಲ್ಲೇ ಲೋಕಾಯುಕ್ತ ವರದಿ ನೀಡಿದ್ದು ಸತ್ಯವಾದರೆ, ಇದು ಖಂಡಿತ ಸರಿಯಲ್ಲ. ಇದಕ್ಕೆ ಯಾವುದೇ ರೀತಿಯ ಪಾವಿತ್ರ್ಯತೆ ಇರುವುದಿಲ್ಲ ಎಂದು ತಿಳಿಸಿದರು.



ಮುಖ್ಯಮಂತ್ರಿಗಳ ಒತ್ತಡಕ್ಕೆ ಮಣಿದು ಕ್ಲೀನ್ ಚಿಟ್ ಕೊಡಲಾಗಿದೆ ಎಂಬುದು ನಮ್ಮೆಲ್ಲರ ಸ್ಪಷ್ಟ ಅಭಿಪ್ರಾಯ ಎಂದು ನುಡಿದರು.

ಪ್ರಶ್ನೆಗೆ ಉತ್ತರಿಸಿದ ಅವರು, ಇ.ಡಿ. ಆಧಾರರಹಿತವಾಗಿ ಮಾಧ್ಯಮಗಳಿಗೆ ಹೇಳಿಕೆ ನೀಡಲು ಸಾಧ್ಯವಿಲ್ಲ; ಮುಡಾ ಹಗರಣ ಆಗಿದೆ ಎಂದಿದ್ದರೆ ಅದಕ್ಕೆ ಆಧಾರಗಳಿರುತ್ತವೆ. ಇ.ಡಿ. ವರದಿ ಹಿನ್ನೆಲೆಯಲ್ಲಿ ಮುಖ್ಯಮಂತ್ರಿಗಳು ಆತುರಾತುರವಾಗಿ ಕ್ಲೀನ್ ಚಿಟ್ ಪಡೆಯುವ ಕೆಲಸ ಮಾಡಿದ್ದಾರೆ. ಇದರಲ್ಲಿ ಯಾವುದೇ ಅನುಮಾನ ಬೇಡ ಎಂದು ಹೇಳಿದರು.

ರಾಜ್ಯಾಧ್ಯಕ್ಷರ ವಿಚಾರಕ್ಕೆ ಬಂದರೆ, ಯಾರೋ ಒಂದಾರು ಜನ ಪ್ರಮುಖರು ನನ್ನ ವಿರುದ್ಧ ಹೇಳಿಕೆ ಕೊಡುತ್ತಿದ್ದಾರೆ. ರಾಜ್ಯದ ಉಸ್ತುವಾರಿಗಳೂ ಆದ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ರಾಧಾಮೋಹನ್ ದಾಸ್, ಸಹ ಉಸ್ತುವಾರಿ ಸುಧಾಕರ ರೆಡ್ಡಿ, ಪೊನ್ನು ರಾಧಾಕೃಷ್ಣ ಅವರು ಮೊನ್ನೆ ಸಭೆಯಲ್ಲಿದ್ದರು. 55– 60 ಜನ ಶಾಸಕರು, ವಿಧಾನಪರಿಷತ್ ಸದಸ್ಯರು, ಸಂಸದರು ಇದ್ದ ಸಭೆ ಅದಾಗಿತ್ತು. ಶೇ 80– 90 ಜನರು ರಾಜ್ಯದ ಅಧ್ಯಕ್ಷರು ಚೆನ್ನಾಗಿ ಕೆಲಸ ಮಾಡುತ್ತಿದ್ದಾರೆ; ವಿಜಯೇಂದ್ರರನ್ನು ಮುಂದುವರೆಸಬೇಕೆಂದು ಅಭಿಪ್ರಾಯ ನೀಡಿದ್ದಾಗಿ ಪತ್ರಿಕೆಗಳಲ್ಲೂ ಬಂದಿದೆ; ಮಾಧ್ಯಮಗಳಲ್ಲೂ ಬಂದಿದೆ ಎಂದು ಗಮನ ಸೆಳೆದರು.

ಕಾರ್ಯಕರ್ತರು ನನ್ನ ಕೆಲಸದ ಬಗ್ಗೆ ಮೆಚ್ಚುಗೆ ಸೂಚಿಸುತ್ತಿದ್ದಾರೆ. ಕೆಲವರು ಅಸಮಾಧಾನ ವ್ಯಕ್ತಪಡಿಸುವುದು ಸಹಜ. ಅವರ ಅಸಮಾಧಾನ ಇರುವುದು ಅಧ್ಯಕ್ಷಗಿರಿ ಬಗ್ಗೆ ಅಲ್ಲ. ನಮ್ಮದು ಪ್ರಜಾಪ್ರಭುತ್ವ ವ್ಯವಸ್ಥೆ; ಜಿಲ್ಲಾಧ್ಯಕ್ಷರ ಚುನಾವಣೆಗಳು ಈಗಾಗಲೇ ನಡೆಯುತ್ತಿವೆ. ರಾಜ್ಯದ ಅಧ್ಯಕ್ಷರ ಹುದ್ದೆಗೂ ಚುನಾವಣೆ ನಡೆಯಲಿದೆ; ಎಲ್ಲದಕ್ಕೂ ಮುಂದಿನ ದಿನಗಳಲ್ಲಿ ಸಮರ್ಪಕ ಉತ್ತರ ಲಭಿಸುತ್ತದೆ ಎಂದು ಪ್ರಶ್ನೆಗೆ ಉತ್ತರ ನೀಡಿದರು.

ಸ್ಥಳೀಯ ಚುನಾವಣೆಗಳು ಬರುವ ಮುಂಚಿತವಾಗಿ ಪಕ್ಷದ ವರಿಷ್ಠರು ಪುಟ 2

ಮೊದಲ ಪುಟದಿಂದ

## 18 ಮಂದಿಗೆ ಗಾಯ

ಈ ಪೈಕಿ ಗಂಭೀರವಾಗಿ ಗಾಯಗೊಂಡಿರುವ ನಾಲ್ವರನ್ನು ಬಾಗಲಕೋಟೆಯ ಆಸ್ಪತ್ರೆಗೆ ಸಾಗಿಸಲಾಗಿದೆ. ಸಾರಿಗೆ ಬಸ್ ಚಾಲಕನಿಗೂ ಗಾಯಗೊಂಡಿದ್ದು, ಪ್ರಯಾಣಿಕರಿಗೆ ಕೆಲವೊಂದು ಸಣ್ಣಪುಟ್ಟ ಗಾಯಗಳಾಗಿವೆ ಅವರನ್ನೂ ಆಸ್ಪತ್ರೆಗೆ ದಾಖಲಿಸಲಾಗಿದೆ.

ಬನ್ನಿಗೋಳ ಗ್ರಾಮದ ಕೂಲಿಕಾರ್ಮಿಕರು ಕೆಲಸಕ್ಕಾಗಿ ಟ್ರ್ಯಾಕ್ಟರ್‌ನಲ್ಲಿ ತೆರಳುತ್ತಿದ್ದರು. ಅಂಕಲಿಮಠದಿಂದ ಮುದಗಲ್ ಪಟ್ಟಣದ ಕಡೆ ಬಸ್ ಬರುತ್ತಿತ್ತು. ಈ ವೇಳೆ ಮಾರ್ಗಮಧ್ಯೆ ಘಟನೆ ಜರುಗಿದೆ ಎಂದು ತಿಳಿದು ಬಂದಿದೆ.

ವಿಷಯ ತಿಳಿದು ಸ್ಥಳಕ್ಕೆ ಮುದುಗಲ್ ಠಾಣೆ ಪಿಎಸ್‌ಐ ವೆಂಕಟೇಶ ಮಡಿಕೇರಿ, ಪಿಎಸ್‌ಐ ಛತ್ರಪ್ಪ ರಾಥೋಡ್ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಅಪಘಾತದ ಸುದ್ದಿ ತಿಳಿಯುತ್ತಿದ್ದಂತೆ ಬನ್ನಿಗೋಳ ಗ್ರಾಮಸ್ಥರು ಗಾಯಗೊಂಡವರನ್ನು ಆಸ್ಪತ್ರೆಗೆ ರವಾನಿಸಿದರು. ಘಟನೆಯಿಂದ ಕೆಲಕಾಲ ಸಂಚಾರದಲ್ಲಿ ವ್ಯತ್ಯ ಉಂಟಾಯಿತು.

## ಒತ್ತಡಕ್ಕೆ ಮಣಿದು ಕ್ಲೀನ್ ಚಿಟ್?

ಪಕ್ಷದೊಳಗಿನ ಬೆಳವಣಿಗೆಗಳ ಕುರಿತು ಗಮನಿಸಬೇಕೆಂಬ ಅಪೇಕ್ಷೆ ನನ್ನದು ಮತ್ತು ಕಾರ್ಯಕರ್ತರದು. ಬಿಜೆಪಿಯೊಳಗಿನ ಬೆಳವಣಿಗೆಗಳು ನನಗೂ, ಕಾರ್ಯಕರ್ತರಿಗೂ ಸಂತೋಷ ತಂದಿಲ್ಲ ಎಂದು ಪ್ರಶ್ನೆಗೆ ಉತ್ತರಿಸಿದರು. ಮಾಜಿ ಮುಖ್ಯಮಂತ್ರಿಗಳು, ಹೋರಾಟಗಾರ ಯಡಿಯೂರಪ್ಪನವರ ಬಗ್ಗೆ ಕೆಲವು ಮುಖಂಡರು ಅಪಮಾನ ಮಾಡುವ ರೀತಿಯಲ್ಲಿ ಒಂದು ವರ್ಷದಿಂದ ಹೇಳಿಕೆ ಕೊಡುತ್ತಿದ್ದಾರೆ. ಕಾರ್ಯಕರ್ತರು ಇದರಿಂದ ನೊಂದಿದ್ದಾರೆ ಎಂದು ತಿಳಿಸಿದರು. ಎಲ್ಲ ವಿಷಯಗಳನ್ನು ಸರಿಪಡಿಸುವ ಬಗ್ಗೆ ರಾಷ್ಟ್ರೀಯ ನಾಯಕರ ಗಮನಕ್ಕೆ ತರುವುದಾಗಿ ಹೇಳಿದರು.

ಶ್ರೀರಾಮುಲು ಅವರ ವಿಚಾರದಲ್ಲಿ ಮೊನ್ನೆ ಕೋರ್ ಕಮಿಟಿಯಲ್ಲಿ ಏನು ಚರ್ಚೆ ಆಗಿದೆಯೋ ಅದರ ಕುರಿತ ಶ್ರೀರಾಮುಲು ಅವರ ಮಾತುಗಳನ್ನು ಮಾಧ್ಯಮಗಳಲ್ಲಿ ಗಮನಿಸಿದ್ದೇನೆ. ಶ್ರೀರಾಮುಲು ಅವರು ಹಿರಿಯರಿದ್ದು ಅವರ ಬಗ್ಗೆ ಗೌರವವಿದೆ. ಒಳಗಡೆ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ರಾಧಾಮೋಹನ್ ದಾಸ್ ಅವರ ಉಪಸ್ಥಿತಿಯಲ್ಲಿ ನಾವೆಲ್ಲರೂ ಒಗ್ಗಟ್ಟಾಗಬೇಕೆಂಬ ಚರ್ಚೆ ನಡೆದಿದೆ.

ಬಿಜೆಪಿಯನ್ನು ಬಹುಮತದಿಂದ ಅಧಿಕಾರಕ್ಕೆ ತರಬೇಕೆಂಬ ದೃಷ್ಟಿಯಿಂದ ಕೆಲವೊಂದು ಚರ್ಚೆಗಳು ನಡೆದಿವೆ ಎಂದು ಮತ್ತೊಂದು ಪ್ರಶ್ನೆಗೆ ಉತ್ತರ ಕೊಟ್ಟರು. ಅದನ್ನು ನಾವು ಬಹಿರಂಗವಾಗಿ ಮಾತನಾಡುವುದಿಲ್ಲ. ಶ್ರೀರಾಮುಲು ಅವರು ಕೂಡ ಅಪಾರ್ಥಕ್ಕೆ ಅವಕಾಶ ಮಾಡಿಕೊಡಬಾರದು; ನಾವೆಲ್ಲರೂ ಒಟ್ಟಾಗಿ ಹೋಗೋಣ ಎಂದರು.

## ತೀರ್ಮಾನವೇ ಅಂತಿಮ ಸಿಎಂ

ಈ ಬಗ್ಗೆ ತನಗೆ ಮಾಹಿತಿ ಇಲ್ಲವೆಂದು ತಿಳಿಸಿದರು.

ದಾವೋಸ್‌ಗೆ ಹೋಗುತ್ತಿಲ್ಲ : ದಾವೋಸ್ ಶೃಂಗಸಭೆಯಲ್ಲಿ ಭಾಗವಹಿಸುವ ಬಗ್ಗೆ ಪ್ರತಿಕ್ರಿಯೆ ನೀಡಿ, ಈ ಸಾಲಿನ ಆಯವ್ಯಯದ ಸಿದ್ಧತೆಯಲ್ಲಿ ತೊಡಗಿಸಿಕೊಳ್ಳಬೇಕಾಗಿರುವುದರಿಂದ 2025 ರ ದಾವೋಸ್ ಶೃಂಗಸಭೆಯಲ್ಲಿ ಪಾಲ್ಗೊಳ್ಳಲು ಸಾಧ್ಯವಾಗುತ್ತಿಲ್ಲ ಎಂದು ಹೇಳಿದರು.

**ಸುಭಾಷ್ ಚಂದ್ರ ಬೋಸ್ ಅಪ್ರತಿಮ ದೇಶಭಕ್ತ** : ನೇತಾಜಿ ಸುಭಾಷ್ ಚಂದ್ರ ಬೋಸ್ ಅವರ ಜನ್ಮ ದಿನದ ಅಂಗವಾಗಿ ವಿಧಾನಸೌಧದಲ್ಲಿನ ಅವರ ಪ್ರತಿಮೆಗೆ ಸಿಎಂ ಸಿದ್ದರಾಮಯ್ಯ ಮಾಲಾರ್ಪಣೆ ಮಾಡಿದರು. ಈ ವೇಳೆ ಮಾತನಾಡಿದ ಸಿಎಂ, ಸುಭಾಷ್ ಚಂದ್ರ ಬೋಸ್ ಅವರು ಭಾರತವನ್ನು ಬ್ರಿಟಿಷರ ಆಳ್ವಿಕೆಯಿಂದ ಮುಕ್ತಗೊಳಿಸಿ, ಭಾರತೀಯರನ್ನು ಬ್ರಿಟಿಷರ ಗುಲಾಮಗಿರಿಯಿಂದ ಸ್ವತಂತ್ರರಾಗಿಸುವ ಹೆಗ್ಗುರಿಯಿಂದ ಹೋರಾಡಿ, ದೇಶಕ್ಕಾಗಿ ತಮ್ಮ ಪ್ರಾಣವನ್ನೇ ತ್ಯಾಗ ಮಾಡಿದ ಅಪ್ರತಿಮ ದೇಶಭಕ್ತ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಬಣ್ಣಿಸಿದರು.

ಇಂದು ನೇತಾಜಿ ಸುಭಾಷ್ ಚಂದ್ರ ಬೋಸ್ ಅವರ 128 ನೇ ಜನ್ಮ ದಿನ. ಅವರು ದೇಶದ ಬಗ್ಗೆ ಅಪಾರ ಗೌರವಾಭಿಮಾನ ಹೊಂದಿದ್ದ ಮಹಾನ್ ದೇಶಭಕ್ತ. ಈಗಿನ ಐಎಎಸ್‌ನಂತೆ ಬ್ರಿಟಿಷರ ಕಾಲದಲ್ಲಿದ್ದ ಐಸಿಎಸ್ ಪರೀಕ್ಷೆಯಲ್ಲಿ ಉತ್ತೀರ್ಣರಾಗಿದ್ದರು. ಆದರೆ ತಮ್ಮ ಉಜ್ವಲ ಭವಿಷ್ಯವನ್ನು ತ್ಯಾಗ ಮಾಡಿ ದೇಶದ ಸ್ವಾತಂತ್ರ್ಯಕ್ಕಾಗಿ ತಮ್ಮ ಬದುಕನ್ನು ಮೀಸಲಾಗಿಟ್ಟರು. ಮಹಾತ್ಮ ಗಾಂಧಿಯವರು ಪ್ರತಿಪಾದಿಸುತ್ತಿದ್ದ ಸತ್ಯ ಹಾಗೂ ಅಹಿಂಸೆಯ ಮಾರ್ಗದಲ್ಲಿ ನಡೆದು ಭಾರತ ಸ್ವಾತಂತ್ರ್ಯ ಹೊಂದುವುದು ಕಷ್ಟಸಾಧ್ಯ ಎಂಬುದು ಸುಭಾಷರ ಅಭಿಪ್ರಾಯವಾಗಿತ್ತು. ಆದ್ದರಿಂದ ಶಸ್ತ್ರಾಸ್ತ್ರಗಳನ್ನು ಬಳಸಿಯೇ ಬ್ರಿಟಿಷರನ್ನು ಭಾರತದಿಂದ ಹೊರದೂಡುವ ಉದ್ದೇಶದಿಂದ ಐಎನ್‌ಎ (ಇಂಡಿಯನ್ ನ್ಯಾಷನಲ್ ಆರ್ಮಿ) ಸ್ಥಾಪಿಸಿದರು.

ನೇತಾಜಿ ಸುಭಾಷ್ ಚಂದ್ರ ಬೋಸ್ ಅವರ ಜನ್ಮದಿನದಂದು ಅವರ ಜೀವನ–ಸಾಧನೆಗಳನ್ನು ಸ್ಮರಿಸುವ ಜೊತೆಗೆ ಅವರ ಆದರ್ಶಗಳ ಹಾದಿಯಲ್ಲಿ ನಡೆಯುವ ಸಂಕಲ್ಪ ಮಾಡಬೇಕಿದೆ. ಈ ದಿಸೆಯಲ್ಲಿ ಸರ್ಕಾರ ಈ ಮಹಾನ್ ನಾಯಕನಿಗೆ ಗೌರವ ಸಲ್ಲಿಸಿದೆ ಎಂದರು.

## ಶ್ರೀರಾಮುಲುಗೆ ಡಿಕೆಶಿ ಗಾಳ

ಬಹಳ ಕಷ್ಟ ನಮಗೆ ಇದೆ ಎಂತಲೂ ಹೇಳಿ, ಸುಮ್ಮನಿರುವಂತೆ ತಿಳಿಸಿದ್ದೆನು. ಆದರೂ ರಾಜಕೀಯ ಸಂಕಷ್ಟದ ಪರಿಸ್ಥಿತಿಯಲ್ಲಿ ನನ್ನ ಮಾತನ್ನು ಕೇಳಲಿಲ್ಲ. ಇದೀಗ ಯಾರದ್ದೋ ಮಾತು ಕೇಳಿಕೊಂಡು ಅವರು ಪಕ್ಷ ಬಿಡೋದಾದ್ರೆ ಬಿಡಲಿ. ಆದರೆ ನನ್ನ ಆರೋಪ ಮಾಡಿ ಹೋಗೋದು ಬೇಡ. ಬಳ್ಳಾರಿ ಭಾಗದಲ್ಲಿ ಅವರು ಪಕ್ಷ ಬಿಡ್ತಾರೆ ಅಂತ ಚರ್ಚೆ ಆಗ್ತಾ ಇದೆ ಎಂದು ಜನಾರ್ಧನ ರೆಡ್ಡಿ ತಿಳಿಸಿದರು.

## ರಾಮುಲು ಕೊಲೆಗಾರನಾಗುತ್ತಿದ್ದ

ಮಾರ್ಗದರ್ಶನ ನೀಡಿದ್ದೇವು. ರಾಮುಲು ಪರ ನಾನೇ ಪತ್ರಿಕಾಗೋಷ್ಠಿ ನಡೆ ಸತ್ಯಾಂಶವನ್ನು ತಿಳಿಸಿದೆ ಎಂದು ಜನಾರ್ಧನ ರೆಡ್ಡಿ ತಿಳಿಸಿದರು.

ಅಂದು ಶ್ರೀರಾಮುಲು ಮಾವನ ಕೊಲೆ ಮಾಡಲು ಸೂರ್ಯನಾರಾಯಣ ರೆಡ್ಡಿ ಫೈನಾನ್ಸ್ ಮಾಡಿದ್ದರು, ಹಾಗೂ ದಿವಾಕರ್ ಬಾಬುನೇ ಕೊಲೆ ಮಾಡಿದ್ದು, ಅಂತ ಎಲ್ಲರಿಗೂ ಗೊತ್ತಿತ್ತು ಈ ವೇಳೆ ರಾಮುಲು ನಿರಪರಾಧಿ ಎಂದು ಮನವರಿಕೆ ಮಾಡಿದ್ರೆ ಆದರೆ ಅದೇ ಈಗ ನಮಗೆ ತೊಂದರೆ ಆಯ್ತನೋ ಎಂದು ಕಳವಳ ವ್ಯಕ್ತಪಡಿಸಿದರು.

1999 ನೇ ಇಸವಿಯಲ್ಲಿ ಶ್ರೀರಾಮುಲು ಎಂಎಲ್‌ಎ ಟಿಕೆಟ್ ಪಡೆಯುವಾಗ ಕಣ್ಣೀರು ಹಾಕಿದ್ದ. ಅದಕ್ಕೆ ಮುಖ್ಯ ಕಾರಣ ಬಿಜೆಪಿಯ ಸಿಂಬಲ್. ಇದು ಅವರಿಗೆ ನೆನಪು ಇದಿಯೋ ಇಲ್ಲವೋ ಗೊತ್ತಿಲ್ಲ, ನಂಗಂತೂ ತುಂಬಾ ಚೆನ್ನಾಗಿ ನೆನಪಿದೆ, ಈ ವಿಚಾರ ಬಳ್ಳಾರಿ ಜನರಿಗೆ ಕೂಡ ಗೊತ್ತಿಲ್ಲ ಎಂದು ರೆಡ್ಡಿ ಹೇಳಿದರು.

ಅಷ್ಟೇ ಅಲ್ಲದೆ ಸಂಡೂರು ಉಪಚುನಾವಣೆ ವಿಚಾರದಲ್ಲಿ ಪಕ್ಷ ಯಾರಿಗೆ ಟಿಕೆಟ್ ಕೊಟ್ರ ಕೆಲಸ ಮಾಡೇನೆ ಅಂತ ಹೇಳಿದ್ದೆ ಅದರಂತೆ ನಾನು ಸೇರಿದಂತೆ ಪಕ್ಷದ ಎಲ್ಲಾ ನಾಯಕರು ಬಂದು ಪ್ರಚಾರ ಮಾಡಿದ್ದರು, ಆದರೆ ರಾಮುಲು ಮಾತ್ರ ಮೂರು ದಿನ ಕೂಡ ತಡವಾಗಿ ಬಂದು ಪ್ರಚಾರ ನಡೆಸಿದ್ದರು.

ಇದಕ್ಕೆ ಯಾರು ಕೂಡ ಮಾತನಾಡಿಲ್ಲ, ಅಲ್ಲದೇ ಉಪಚುನಾವಣೆಯಲ್ಲಿ ಯಾಕೆ ಸೋಲಾಯಿತು ಎಂದು ಕೂಡ ಎಲ್ಲರಿಗೆ ಗೊತ್ತು, ಈಗ ಅದೇ ವಿಚಾರವನ್ನು ಇಟ್ಟುಕೊಂಡು ಹಗೆ ಸಾಧಿಸುವುದು ತಪ್ಪು, ಕಾಂಗ್ರೆಸ್ ಕೋಟಿ ಕೋಟಿ ಹಣ ಸುರಿದ ಕಾರಣವೇ ಬಿಜೆಪಿ ಸೋತಿದ್ದು ಎಂದು ಜನಾರ್ಧನ ರೆಡ್ಡಿ ಹೇಳಿದರು.

ರಾಜ್ಯದಲ್ಲಿ ಬಿಜೆಪಿ ಅಧಿಕಾರಕ್ಕೆ ಬಂದಾಗ ನಾನೇ ಸ್ವತಃ ಯಡಿಯೂರಪ್ಪ ಅವರಿಗೆ ನನಗೆ ಮಂತ್ರಿಗಿರಿ ಬೇಡ ಶ್ರೀರಾಮುಲು ಗೆ ನೀಡಿ ಎಂದು ಹೇಳಿದ್ದೆ ನಾನು ಪಕ್ಷದಲ್ಲಿ ಇಲ್ಲದಾಗ, ಬಹಳ ಬೆಳವಣಿಗೆ ನಡೆಯಿತು. ಮೊಳಕಾಲ್ಮೂರು ಕ್ಷೇತ್ರದಲ್ಲಿ ರಾಮುಲು ಕಣಕ್ಕಿಳಿದಾಗ, ಹಾಲಿ ಶಾಸಕರ ಕಡೆಯವರು ಚಪ್ಪಲಿ, ಕಲ್ಲು ಹೊಡೆದರು ಆಗ ನಾನೇ ಹೋಗಿ ಸಮಾಧಾನ ಮಾಡಿದ್ದೆ..

ಇಷ್ಟೆಲ್ಲಾ ಮಾಡಿದರೂ ಕೂಡ ಇಂದು ಆತ ನನ್ನ ಮೇಲೆ ಹಗೆ ಸಾಧಿಸುತ್ತಿದ್ದಾನೆ, ಎಲ್ಲೋ ತಾಯಿ ಮಗುವಿನ ರೀತಿಯಲ್ಲಿ ಅವನನ್ನು ನಾವು ನೋಡಿಕೊಂಡಿದ್ದೇವೆ. ಆದರೆ ತಾಯಿ ಎದೆ ಹಾಲು ಕುಡಿದು ಎದೆಗೆ ಒದ್ದ ಅನುಭವ ಆಗಿದೆ ಎಂದು ಜನಾರ್ಧನ್ ರೆಡ್ಡಿ ಬೇಸರ ವ್ಯಕ್ತಪಡಿಸಿದರು.

# ಬ್ಯಾಂಕ್ ದರೋಡೆ: ಶಾಮೀಲಾದ ಸ್ಥಳೀಯರಿಗೆ ರಾಜಕೀಯ ಬೆಂಬಲ



**ಮಂಗಳೂರು:** ಮಂಗಳೂರು ಕೋಟೆಕಾರು ಬ್ಯಾಂಕ್ ದರೋಡೆಯಲ್ಲಿ ಶಾಮೀಲಾದ ಸ್ಥಳೀಯರಿಗೆ ರಾಜಕೀಯ ಬೆಂಬಲವಿದೆ ಎಂಬ ಗಂಭೀರ ಆರೋಪ ಕೇಳಿಬಂದಿದೆ. ಬ್ಯಾಂಕ್ ದರೋಡೆಯಲ್ಲಿ ಸ್ಥಳೀಯರ ಕೈವಾಡವನ್ನು ಮುಚ್ಚಿ ಹಾಕುವ ಪ್ರಯತ್ನ ನಡೆಯುತ್ತಿದೆ ಎಂದು ಬಿಜೆಪಿ ಶಾಸಕ ಭರತ್ ಶೆಟ್ಟಿ ಗಂಭೀರ ಆರೋಪ ಮಾಡಿದ್ದಾರೆ.

ಮಂಗಳೂರಿನಲ್ಲಿ ಮಾತನಾಡಿದ ಅವರು, ನಮಗೆ ಮಾಹಿತಿ ಬಂದಿದೆ. ದರೋಡೆ ಪ್ರಕರಣದಲ್ಲಿ ಶೇಕಡಾ 100 ರಷ್ಟು ಸ್ಥಳೀಯರು ಇದ್ದಾರೆ. ದರೋಡೆಕೋರರನ್ನ ಬಂಧಿಸಿದ್ದಾರೆ ಆದರೆ ಪ್ಲಾನಿಂಗ್ ಮಾಡಿದವರನ್ನು, ಕುಮ್ಮಕ್ಕು ನೀಡಿದವರನ್ನು ಬಚಾವ್ ಮಾಡಲಾಗುತ್ತಿದೆ ಎಂದಿದ್ದಾರೆ.

ಸ್ಥಳೀಯರನ್ನು ಯಾರೋ ಬಚಾವ್ ಮಾಡುತ್ತಿದ್ದಾರೆ. ರಾಜ್ಯದಲ್ಲಿ ಕಾಂಗ್ರೆಸ್ ಆಡಳಿತ ಇದೆ. ನೈಜ ಆರೋಪಿಗಳನ್ನು ಬಯಲಿಗೆ ತನ್ನಿ. ದರೋಡೆಕೋರರಿಗೆ ರಾಜಕೀಯ ಬೆಂಬಲ ಇದೆ. ಅವರನ್ನು ರಕ್ಷಣೆ ಮಾಡುವ ಕಾರ್ಯ ನಡೆಯುತ್ತಿದೆ. ಬೇರೆ ಪ್ರಕರಣಗಳಲ್ಲಿ ಶಾಮೀಲಾದವರೂ ದರೋಡೆ ಪ್ರಕರಣದಲ್ಲಿದ್ದಾರೆ ಎಂದು ಭರತ್ ಶೆಟ್ಟಿ ಆರೋಪಿಸಿದ್ದಾರೆ.

ಕೋಟೆಕಾರು ವ್ಯವಸಾಯ ಸೇವಾ ಸಹಕಾರಿ ಬ್ಯಾಂಕ್ ದರೋಡೆ ಮಾಡಿದ ಮೂವರ ಬಂಧನ ಈಗಾಗಲೇ ಆಗಿದೆ. ಮುಂಬೈನ ಕಣ್ಣನ್ ಮಣಿ ಗುಂಡೇಟು ತಿಂದು ಪೊಲೀಸರ ವಶದಲ್ಲಿದ್ದರೆ, ಕಿಂಗ್‌ಪಿನ್ ತಮಿಳುನಾಡಿನ ಮುರುಗನ್ ಡಿ ದೇವರ್, ಸಹಚರ ರಾಜೇಂದ್ರನ್‌ನನ್ನ ನಿನ್ನೆ ಮಂಗಳೂರಿಗೆ ಸ್ಥಳಾಂತರ ಮಾಡಲಾಗಿದೆ.

ನಿನ್ನೆ ತಮಿಳುನಾಡಿನ ತಿರುನನ್ವೇಲಿ ಜಿಲ್ಲೆಯ ಅಂಬಸಮುದ್ರಂ ಕೋರ್ಟ್‌ಗೆ ಆರೋಪಿಗಳನ್ನು ಹಾಜರುಪಡಿಸಲಾಗಿತ್ತು. ಈ ವೇಳೆ ಫಿಯೆಟ್ ಕಾರು, 2 ಪಿಸ್ತೂಲ್, 4 ಜೀವಂತ ಗುಂಡು, 3 ಲಕ್ಷ ನಗದು ಮತ್ತು 2 ಕೇಜಿ ಚಿನ್ನ ವಶಪಡಿಸಿಕೊಂಡಿದ್ದಾಗಿ ಪೊಲೀಸರು ಕೋರ್ಟ್‌ಗೆ ಮಾಹಿತಿ ನೀಡಿದ್ದರು.

ಇಂದು ಮಂಗಳೂರು ಕೋರ್ಟ್‌ಗೆ ಹಾಜರುಪಡಿಸಿ ಮತ್ತೆ ಖಾಕಿ ವಶಕ್ಕೆ ಪಡೆಯಲಿದೆ.

ಬಳಿಕ ಇಂದೇ ಕೋಟೆಕಾರು ಬ್ಯಾಂಕ್‌ನಲ್ಲಿ ಮಹಜರು ನಡೆಸೋ ಸಾಧ್ಯತೆಯಿದೆ. ಈ ಸಂದರ್ಭದಲ್ಲಿಯೇ ಗಂಭೀರ ಆರೋಪ ಕೇಳಿಬಂದಿದೆ.

# ಸಿಎಂ ಜತೆ ಸ್ಯಾಫ್ರಾನ್ ಕಂಪನಿ ಅಧ್ಯಕ್ಷ ರಾಸ್ ಭೇಟಿ



**ಬೆಂಗಳೂರು:** ರಾಜ್ಯದಲ್ಲಿ ವೈಮಾಂತರಿಕ್ಷ ಮತ್ತು ರಕ್ಷಣಾ ವಲಯದಲ್ಲಿ ಹೂಡಿಕೆ ಮಾಡಿರುವ ಜಾಗತಿಕ ಶ್ರೇಣಿಯ ಸ್ಯಾಫ್ರಾನ್ ಸಮೂಹದ ಅಧ್ಯಕ್ಷ ರಾಸ್ ಮ್ಯಾಕಲ್ನೆಸ್ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಗುರುವಾರ ವಿಧಾನಸೌಧದ ಕಚೇರಿಯಲ್ಲಿ ಭೇಟಿಯಾದರು. ಈ ಸೌಜನ್ಯದ ಭೇಟಿ ಸಂದರ್ಭದಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ ಕೂಡ ಉಪಸ್ಥಿತರಿದ್ದರು.

ಭೇಟಿಯ ವೇಳೆಯಲ್ಲಿ ರಾಜ್ಯದ ಕೈಗಾರಿಕಾಸ್ನೇಹಿ ನೀತಿ, ಹೂಡಿಕೆ ಕಾರ್ಯಪರಿಸರ, ವಿಷನ್ ಗ್ರೂಪ್ ಚಟುವಟಿಕೆಗಳು ಇತ್ಯಾದಿಗಳನ್ನು ಕುರಿತು ವಿಚಾರ ವಿನಿಮಯ ನಡೆಸಲಾಯಿತು.

ಕಂಪನಿಯು ಬೆಂಗಳೂರಿನಲ್ಲಿ ಹೊಂದಿರುವ ಸ್ಯಾಫ್ರಾನ್ ಡೇಟಾ ಸಿಸ್ಟಮ್ಸ್ ಮತ್ತು ಸ್ಯಾಫ್ರಾನ್ ಹೆಲಿಕಾಪ್ಟರ್ ಎಂಜಿನ್ಸ್ ಕಚೇರಿಗಳು ನಡೆಸುತ್ತಿರುವ ಚಟುವಟಿಕೆಗಳ ಬಗ್ಗೆ ರಾಸ್ ಅವರು ಈ ಸಂದರ್ಭದಲ್ಲಿ ವಿಸ್ತೃತ ಮಾಹಿತಿ ನೀಡಿದರು.

ಕೃಷಿ ಸಚಿವ ಚೆಲುವರಾಯಸ್ವಾಮಿ, ಮುಖ್ಯಮಂತ್ರಿಯವರ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಎಲ್.ಕೆ.ಅತೀಕ್, ಕೈಗಾರಿಕಾ ಇಲಾಖೆ ಆಯುಕ್ತೆ ಗುಂಜನ್ ಕೃಷ್ಣ ಸೇರಿದಂತೆ ಇತರರು ಇದ್ದರು.



**ನಗರದ ಫೀಲ್ಡ್ ಮಾರ್ಷಲ್ ಮಾಣಿಕ್ ಷಾ ಪೆರೇಡ್ ಗೌಂಡ್‌ನಲ್ಲಿ ನಡೆಯುವ ರಾಜ್ಯಮಟ್ಟದ ಗಣರಾಜ್ಯೋತ್ಸವ ಕಾರ್ಯಕ್ರಮಕ್ಕೆ ಮುಖ್ಯ ಆಯುಕ್ತರಾದ ತುಷಾರ್ ಗಿರಿನಾಥ್ ರವರು ಗೌರವಾನ್ವಿತ ರಾಜ್ಯಪಾಲರನ್ನು ಭೇಟಿ ನೀಡಿ ಗಣರಾಜ್ಯೋತ್ಸವ ಕಾರ್ಯಕ್ರಮಕ್ಕೆ ಆಹ್ವಾನಿಸಿದರು. ಈ ವೇಳೆ ಬೆಂಗಳೂರು ನಗರದ ಜಿಲ್ಲಾಧಿಕಾರಿಯಾದ ಜಗದೀಶ್ ಹಾಗೂ ಇನ್ನಿತರರು ಉಪಸ್ಥಿತರಿದ್ದರು.**

## ದರೋಡೆ: ಓರ್ವ ಶಂಕಿತ ಅರೆಸ್ಟ್

**ಮೈಸೂರು:** ಮೈಸೂರಿನಲ್ಲಿ ಕಾರನ್ನು ಅಡ್ಡಗಡ್ಡಿ ದರೋಡೆ ಮಾಡಿದ ಪ್ರಕರಣ ಸಂಬಂಧ ಪೊಲೀಸರು ಕಾರಿನ ನಂಬರ್ ಆಧರಿಸಿ ಮಾಲೀಕನ ಪತ್ತೆ ಕಾರ್ಯ ಮಾಡಿದ್ದು, ಎರಡೂ ಕಾರುಗಳ ಮಾಲೀಕರ ಪತ್ತೆಯಾಗಿದ್ದಾರೆ ಎನ್ನಲಾಗಿದೆ.

ಕೃತ್ಯಕ್ಕೆ ದುಷ್ಕರ್ಮಿಗಳು ಬಳಸಿದ ಇನ್ನೋವಾ ಕಾರು ಮಾಲೀಕ ಪತ್ತೆಯಾಗಿದ್ದು, ಕಾರನ್ನ ಮೂವರು ದುಷ್ಕರ್ಮಿಗಳು ಬಾಡಿಗೆಗೆ ಪಡೆದು ಕೊಂಡಿದ್ದರೆಂದು ಪೊಲೀಸರ ವಿಚಾರಣೆಯಿಂದ ಮಾಹಿತಿ ತಿಳಿದು ಬಂದಿದೆ.

ಕಾರಿನ ಮಾಲೀಕನನ್ನ ಪೊಲೀಸರು ತೀವ್ರ ವಿಚಾರಣೆಗೆ ಒಳಪಡಿಸಿದ್ದು, ಸಂತ್ರಸ್ತರ ಫೋರ್ಡ್ ಸ್ಪೋರ್ಟ್ ಕಾರು ಮಾಲೀಕನ ಹೇಳಿಕೆ ದಾಖಲಿಸಿಕೊಂಡಿದ್ದಾರೆ.

**ಓರ್ವ ಶಂಕಿತ ವಶಕ್ಕೆ:** ಮೈಸೂರು ರೋಡ್ ರಾಬರಿ ಪ್ರಕರಣಕ್ಕೆ ಸಂಬಂಧಿಸಿದಂತೆ ಜಯಪುರ ಠಾಣಾ ಪೊಲೀಸರು ಓರ್ವ ಶಂಕಿತ ವ್ಯಕ್ತಿಯನ್ನ ವಶಕ್ಕೆ ಪಡೆದಿದ್ದಾರೆ. ಶಂಕಿತ ವ್ಯಕ್ತಿ ಮೈಸೂರಿನ ಬಡಾವಣೆಯೊಂದರ ನಿವಾಸಿಯಾಗಿದ್ದು, ತೀವ್ರ ವಿಚಾರಣೆಗೆ ಒಳಪಡಿಸಿದ್ದಾರೆ ಎನ್ನಲಾಗಿದೆ.

## ಸಾಲಬಾಧೆ: ದಂಪತಿ ಆತ್ಮಹತ್ಯೆ

**ಬಾಗಲಕೋಟೆ:** ಸಾಲಬಾಧೆ ತಾಳಲಾರದೆ ದಂಪತಿ ಆತ್ಮಹತ್ಯೆಗೆ ಶರಣಾಗಿರುವ ಘಟನೆ ಬಾಗಲಕೋಟೆ ಜಿಲ್ಲೆ ಮುಧೋಳ ತಾಲ್ಲೂಕಿನಲ್ಲಿ ನಡೆದಿದೆ.ಸೋರಗಾವಿ ಗ್ರಾಮದ ನಿವಾಸಿಗಳಾದ ಮಲ್ಲಪ್ಪ ಲಾಳಿ(55), ಮಾದೇವಿ ಲಾಳಿ(50) ಮೃತಪಟ್ಟವರು. ಮುಧೋಳ ಯಾದವಾಡ ರಸ್ತೆ ಘಟಪ್ರಭಾ ನದಿಯ ಸೇತುವೆ ಕಬ್ಬಿಣದ ಪೈಪ್ ಗೆ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾರೆ ಎನ್ನಲಾಗಿದೆ.ಮೆಟಗುಡ್ಡದಲ್ಲಿ ಕಿರಾಣಿ ಅಂಗಡಿ ನಡೆಸುತ್ತಿದ್ದರು. ಈ ಮಧ್ಯೆ 20 ಜನರ ಬಳಿ ಕೈಸಾಲ ಮಾಡಿದ್ದರು. ಕಿರಾಣಿ ಅಂಗಡಿಯಿಂದ ತಿಂಗಳಿಗೆ 20 ಸಾವಿರ ಆದಾಯವಿದ್ದು ಈ ಹಿನ್ನೆಲೆಯಲ್ಲಿ ಸಾಲ ವಾಪಸ್ ನೀಡುವಂತೆ ಸಾಲಗಾರರು ಕಿರುಕುಳ ನೀಡುತ್ತಿದ್ದರು ಎನ್ನಲಾಗಿದೆ. ಇದರಿಂದ ಮನನೊಂದು ಡೆತ್ ನೋಟ್ ಬರೆದಿಟ್ಟು ಆತ್ಮಹತ್ಯೆಗೆ ಶರಣಾಗಿದ್ದಾರೆ ಎನ್ನಲಾಗಿದೆ.

# ತೋಟದ ಮನೆಗಳಿಗೂ ನಿರಂತರ ಜ್ಯೋತಿ ಸಂಪರ್ಕಕ್ಕೆ ಕ್ರಮ

**ಬಾಗಲಕೋಟೆ::** ತೋಟದಲ್ಲಿರುವ ರೈತರ ಮನೆಗಳಿಗೂ ನಿರಂತರ ಜ್ಯೋತಿ ಸಂಪರ್ಕ ಕಲ್ಪಿಸುವ ಚಿಂತನೆ ಇದೆಯೆಂದು ಇಂಧನ ಸಚಿವರಾದ ಕೆ.ಜೆ.ಜಾರ್ಜ್ ಹೇಳಿದರು.

ನೂತನ ಜಿಲ್ಲಾ ಪಂಚಾಯತ ಸಭಾ ಭವನದಲ್ಲಿ ಬುಧವಾರ ಜರುಗಿದ ಇಂಧನ ಇಲಾಖೆ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

"ಈ ಭಾಗದಲ್ಲಿ ಕೃಷ್ಣಾ ಮೇಲ್ದಂಡೆ ಯೋಜನೆಯಿಂದ ಮುಳುಗಡೆಗೊಂಡ ಸಂತ್ರಸ್ತರು ತಮ್ಮ ತೋಟಗಳಲ್ಲಿ ಮನೆಗಳನ್ನು ಕಟ್ಟಿಕೊಂಡು ವಾಸಿಸುತ್ತಿದ್ದಾರೆ. ಆ ಮನೆಗಳಿಗೂ ನಿರಂತರ ಜ್ಯೋತಿ ಮೂಲಕ ವಿದ್ಯುತ್ ಸಂಪರ್ಕ ಅಗತ್ಯವಿದದೆ. ಈ ಬಗ್ಗೆ ಚರ್ಚಿಸಿ ಕ್ರಮವಹಿಸಲಾಗುವುದು," ಎಂದು ತಿಳಿಸಿದರು.

"ತೋಟದ ಮನೆಗಳಿಗೆ ಸದ್ಯ 7 ಗಂಟೆ ತ್ರೀ ಫೇಸ್ ವಿದ್ಯುತ್ ಸರಬರಾಜು ಮಾಡಲಾಗುತ್ತಿದ್ದು, ಉಳಿದಂತೆ ಸಂಜೆ 6 ರಿಂದ ಬೆಳಗ್ಗೆ 6 ಗಂಟೆವರೆಗೆ ಸಿಂಗಲ್ ಫೇಸ್ ಓಪನ್ ಡೆಲ್ಟಾ ಮಾದರಿಯಲ್ಲಿ ವಿದ್ಯುತ್ ಪೂರೈಸಲಾಗುತ್ತಿದೆ," ಎಂದು ತಿಳಿಸಿದರು.

"ರಾಜ್ಯದಲ್ಲಿ ಕಳೆದ ವರ್ಷದ ಬೇಸಿಗೆಯಲ್ಲಿ ಒಂದು ತಿಂಗಳು ಮಾತ್ರ ವಿದ್ಯುತ್ ಸಮಸ್ಯೆಯಿತ್ತು. ಆದರೂ ಜನರಿಗೆ ಹಾಗೂ ರೈತರಿಗೆ ಯಾವುದೇ ತೊಂದರೆಯಾಗದಂತೆ ನೋಡಿಕೊಳ್ಳಲಾಯಿತು. ಪಂಜಾಬ್ ಹಾಗೂ ಉತ್ತರ ಪ್ರದೇಶಗಳ ಜತೆ ವಿದ್ಯುತ್ ವಿನಿಮಯ ಒಪ್ಪಂದ ಮಾಡಿಕೊಳ್ಳಲಾಗಿತ್ತು. ಮುಂಬರುವ ಬೇಸಿಗೆಯಲ್ಲೂ ಜನರಿಗೆ ವಿದ್ಯುತ್ ಪೂರೈಸಲು ಇಲಾಖೆ ಸನ್ನದ್ದವಾಗಿದೆ," ಎಂದರು.

**ಸಚಿವರಿಗೆ ಮನವಿ**

ಹುನಗುಂದ ಮತಕ್ಷೇತ್ರ ವ್ಯಾಪ್ತಿಯಲ್ಲಿ ಮರೋಳ – ರಾಮಥಾಳ ಏತ ನೀರಾವರಿ, ನಂದವಾಡಗಿ ಏತ ನೀರಾವರಿ ಇರುವದರಿಂದ ಈ ಭಾಗದಲ್ಲಿ 220 ಕೆವಿ ಸಬ್ ಸ್ಟೇಷನ್ ಅಗತ್ಯವಿದೆ. ಇದಕ್ಕೆ ಅನುಮೋದನೆ ದೊರೆತಿದ್ದರೂ ಕಾಮಗಾರಿ ಪ್ರಾರಂಭವಾಗಿಲ್ಲ. ಈ ನಿಟ್ಟಿನಲ್ಲಿ ಕ್ರಮವಹಿಸಬೇಕು. ಹಾಗೂ, ಇಳಕಲ್ಲ ನಗರದಲ್ಲಿ 6 ಎಕರೆ ಜಾಗದಲ್ಲಿ ಸುಸಜ್ಜಿತವಾದ ಕ್ರೀಡಾಂಗಣ ನಿರ್ಮಿಸಲಾಗುತ್ತಿದ್ದು,



ಅದರ ಮೇಲೆ ಹಾದುಹೋಗಿರು ಹೈ ಓಲ್ಟೇಜ್ ಲೈನ್ ತೆರವುಗೊಳಿಸುವಂತೆ ಎಂದು ಹುನಗುಂದ ಶಾಸಕ ವಿಜಯಾನಂದ ಕಾಶಪ್ಪನವರು ಸಚಿವರಲ್ಲಿ ಮನವಿ ಮಾಡಿದರು. ಸಬ್ ಸ್ಟೇಷನ್ ಕಾಮಗಾರಿ ಶೀಘ್ರದಲ್ಲಿ ಪ್ರಾರಂಭಿಸುವುದರ ಜತೆಗೆ ಇತರೆ ಸಮಸ್ಯೆಗಳನ್ನು ತುರ್ತಾಗಿ ಬಗೆಹರಿಸಲು ಸಚಿವ ಜಾರ್ಜ್ ಅಧಿಕಾರಿಗಳಿಗೆ ಸೂಚಿಸಿದರು.

ಬಾದಾಮಿ ಶಾಸಕ ಭೀಮಸೇನ ಚಿಮ್ಮನಕಟ್ಟಿ ಮಾತನಾಡಿ, " ಐತಿಹಾಸಿಕ ಪ್ರವಾಸಿ ತಾಣ ಬಾದಾಮಿಯಲ್ಲಿ ಕೈಗಾರಿಕೆಗಳು ಅದರಲ್ಲೂ ವಿಶೇಷವಾಗಿ ಗುಳೇದಗುಡ್ಡ, ಕೆರೂರ ಭಾಗದಲ್ಲಿ ಫವರ್ ಲೂಮ್ ಹೆಚ್ಚಿವೆ. ಹಾಗಾಗಿ ಇಲ್ಲಿ 220 ಕೆ.ವಿ ವಿದ್ಯುತ್ ಉಪಕೇಂದ್ರ ಅಗತ್ಯವಿದ್ದು, ಅದಕ್ಕೆ ಅವಶ್ಯವಾಗಿರುವಷ್ಟು ಭೂಮಿಯನ್ನು ನೀಡಲಾಗುವುದು.

ಈ ಭಾಗದ ಬೇಲೂರ, ನಂದಿಕೇಶ್ವರ 33/11 ಕೆ.ವಿಯಿಂದ 110 ಕೆವಿ ಮೇಲ್ದರ್ಜೆಗೆ ಏರಿಸಬೇಕಾಗಿದೆ. ಅಲ್ಲದೇ, ಬಾದಾಮಿ ಹಾಗೂ ಗುಳೇದಗುಡ್ಡ ಉಪ ವಿಭಾಗಗಳನ್ನು ಸೇರಿಸಿ ಬಾದಾಮಿಯಲ್ಲಿ ನೂತನ ವಿಭಾಗೀಯ ಕಚೇರಿ ಅಗತ್ಯವಾಗಿದೆ," ಎಂದು ಮನವಿ ಮಾಡಿದರು. ಬೀಳಗಿ ಶಾಸಕ ಜೆ.ಟಿ.ಪಾಟೀಲ ಮಾತನಾಡಿ, "ಬೀಳಗಿಯ 220 ಕೆವಿ ಹಾಗೂ 110 ಕೆ.ವಿ ಸುನಗ ವಿದ್ಯುತ್ ವಿತರಣಾ ಕೇಂದ್ರಗಳ ಕಾಮಗಾರಿಗಳು ಪ್ರಗತಿಯಲ್ಲಿದ್ದು, ಕೂಡಲೇ ಪೂರ್ಣಗೊಳಿಸಿ ಚಾಲನೆಗೊಳಿಸಲು ಕ್ರಮವಹಿಸುವಂತೆ ಸಚಿವರಲ್ಲಿ ಮನವಿ ಮಾಡಿಕೊಂಡರು.

ಅಲ್ಲದೇ ಸಿದ್ದಾಪೂರ, ಅರಕೇರಿ, ಚಿಕ್ಕಹಂಚಿನಾಳ ಮತ್ತು ಚಿಕ್ಕಾಲಗುಂಡಿಯಲ್ಲಿ ಹೊಸದಾಗಿ 110 ಕೆವಿ ವಿದ್ಯುತ್ ಕೇಂದ್ರ ಕೇಂದ್ರಗಳನ್ನು ಸ್ಥಾಪಿಸಲು ಪ್ರಸ್ತಾವನೆ ಸಲ್ಲಿಸಿರುವುದಾಗಿ ತಿಳಿಸಿದರು. ಈ ಕುರಿತು ಸಂಬಂಧಪಟ್ಟ ಅಧಿಕಾರಿಗಳು ಕ್ರಮವಹಿಸುವಂತೆ ಸಚಿವ ಜಾರ್ಜ್ ಸೂಚಿಸಿದರು.

ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಮಾತನಾಡಿ, ಎಚ್.ಟಿ. ಹಾಗೂ ಎಲ್‌ಟಿ ಮಾರ್ಗದ ವಾಹನ ಬದಲಾವಣೆ ಕಾಮಗಾರಿಗಳು ಮಂಜೂರಾಗಿದ್ದು, ಆದ್ಯತೆ ಮೇರೆಗೆ ಕಾಮಗಾರಿ ಕೈಗೆತ್ತಿಗೊಳ್ಳಬೇಕಿದೆ. ಅಲ್ಲದೇ ಹೆಚ್ಚುವರಿಯಾಗಿ ಪರಿವರ್ತಕಗಳನ್ನು ಸಹ ಅಳವಡಿಸಲು ಬಾಕಿ ಇದ್ದು, ತುರ್ತಾಗಿ ಕ್ರಮವಹಿಸಲು ಅಧಿಕಾರಿಗಳಿಗೆ ಸೂಚಿಸಲು ಇಂಧನ ಸಚಿವರಿಗೆ ತಿಳಿಸಿದರು.

ಈ ಬಗ್ಗೆ ಆದ್ಯತೆ ಮೇರೆಗೆ ಕ್ರಮವಹಿಸಲು ಜಾರ್ಜ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಭೆಯಲ್ಲಿ ಸಂಸದ ಪಿ.ಸಿ.ಗದ್ದಿಗೌಡರ, ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ, ಹೆಸ್ಕಾಂ ಅಧ್ಯಕ್ಷರಾದ ಸೈಯದ್ ಅಜೀಮ್‌ಪೀರ್ ಖಾದ್ರಿ, ನಗರಸಭೆ ಅಧ್ಯಕ್ಷೆ ಸವಿತಾ ಲೆಂಕನ್ನವರ, ಜಿಲ್ಲಾಧಿಕಾರಿ ಜಾನಕಿ ಕೆ.ಎಂ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ, ಹೆಸ್ಕಾಂ ವ್ಯವಸ್ಥಾಪಕ ನಿರ್ದೇಶಕರಾದ ವೈಶಾಲಿ ಎಂ.ಎಲ್, ಕೆಪಿಟಿಸಿಎಲ್‌ನ ವ್ಯವಸ್ಥಾಪಕ ನಿರ್ದೇಶಕರಾದ ಪಂಕಜಕುಮಾರ ಪಾಂಡೆ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಮೊದಲ ಪುಟದಿಂದ

## ಹೊಸ ನಿರ್ಬಂಧ ಎದುರಿಸಿ

ಸೋಷಿಯಲ್‌ನಲ್ಲಿ ಮಾಹಿತಿ ಹಂಚಿಕೊಂಡಿರುವ ಡೊನಾಲ್ಡ್ ಟ್ರಂಪ್ ಯುದ್ಧವನ್ನು ಇತ್ಯರ್ಥಗೊಳಿಸಲು ಕೈಗೊಳ್ಳಬೇಕಾದ ಎಲ್ಲಾ ಅಗತ್ಯ ಕ್ರಮ ಕೈಗೊಳ್ಳಿ ಎಂದು ತಿಳಿಸಿದ್ದಾರೆ.

2022ರ ಫೆಬ್ರವರಿಯಲ್ಲಿ ಪ್ರಾರಂಭವಾದ ರಷ್ಯಾದ ಪೂರ್ಣ ಪ್ರಮಾಣದ ಆಕ್ರಮಣಕ್ಕೆ ಒಂದೇ ದಿನದಲ್ಲಿ ಮಾತುಕತೆ ನಡೆಸುವುದಾಗಿ ಡೊನಾಲ್ಡ್ ಟ್ರಂಪ್ ಈ ಹಿಂದೆ ಹೇಳಿದ್ದರು.

ಅಮೆರಿಕಾ ಆಧ್ಯಕ್ಷರ ನೇರ ಎಚ್ಚರಿಕೆಗೆ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಯಾವುದೇ ಪ್ರತಿಕ್ರಿಯೆ ನೀಡಿಲ್ಲ. ಆದರೆ ಹಿರಿಯ ಅಧಿಕಾರಿಗಳು ಇತ್ತೀಚಿನ ದಿನಗಳಲ್ಲಿ ಅಮೇರಿಕಾದ ಹೊಸ ಆಡಳಿತವನ್ನು ಎದುರಿಸಲು ಮಾಸ್ಕೋಗೆ ಸಣ್ಣ ಅವಕಾಶವಿದೆ ಎಂದು ಹೇಳಿದ್ದಾರೆ.

ವ್ಲಾಡಿಮಿರ್ ಪುಟಿನ್ ಅವರು 2014 ರಲ್ಲಿ ಮೊದಲ ಬಾರಿಗೆ ಪ್ರಾರಂಭವಾದ ಯುದ್ಧದ ಅಂತ್ಯಕ್ಕೆ ಮಾತುಕತೆ ನಡೆಸಲು ಸಿದ್ಧರಾಗಿದ್ದರು ಆದರೆ ಉಕ್ರೇನ್ ರಷ್ಯಾದ ಪ್ರಾದೇಶಿಕ ಲಾಭಗಳ ವಾಸ್ತವತೆ ಒಪ್ಪಿಕೊಳ್ಳಬೇಕು, ಅದು ಪ್ರಸ್ತುತ ತನ್ನ ಭೂಮಿಯಲ್ಲಿ ಸುಮಾರು ಶೇಕಡಾ 20 ರಷ್ಟು ಭೂಭಾಗವನ್ನು ಉಕ್ರೇನ್ ವಶಪಡಿಸಿಕೊಂಡಿದೆ ಹೀಗಿರುವಾಗ ಸುಮ್ಮನೆ ಇರಲು ಸಾಧ್ಯವೇ ಇಲ್ಲ ಎಂದಿದ್ದಾರೆ

ಕೈವ್ ತನ್ನ ಪ್ರದೇಶವನ್ನು ಬಿಟ್ಟುಕೊಡಲು ಬಯಸುವುದಿಲ್ಲ, ಆದಾಗ್ಯೂ ಅಧ್ಯಕ್ಷ ವೊಲೊಡಿಮಿರ್ ಜೆಲೆನ್ಸ್ಕಿ ಅವರು ಪ್ರಸ್ತುತ ಆಕ್ರಮಿಸಿಕೊಂಡಿರುವ ಕೆಲವು ಭೂಮಿಯನ್ನು ತಾತ್ಕಾಲಿಕವಾಗಿ ಬಿಟ್ಟುಕೊಡಬೇಕಾಗಬಹುದು ಎನ್ನಲಾಗಿದೆ

ಅಮೇರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಶೀಘ್ರದಲ್ಲೇ ರಷ್ಯಾದ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ಅವರೊಂದಿಗೆ ಮಾತನಾಡುವ ಸಾಧ್ಯತೆ ಇದೆ ಎಂದು ಮೂಲಗಳು ತಿಳಿಸಿವೆ.

ನಮ್ಮ ಕೋರಿಕೆಗೆ ಮನ್ನಿಸದಿದ್ದರೆ ಭವಿಷ್ಯದಲ್ಲಿ ಅದರ ಪರಿಣಾಮ ಎದರಿಸಲು ರಷ್ಯಾ ಸಿದ್ದರಾಗಬೇಕು ಎಂದು ಅಮೇರಿಕಾ ಎಚ್ಚರಿಕೆ ನೀಡಿದೆ ಈ ನಿಟ್ಟಿನಲ್ಲಿ ರಷ್ಯಾ ನಡೆ ಏನಿರಲಿದೆ ಎನ್ನುವುದು ತೀವ್ರ ಕುತೂಹಲ ಕೆರಳಿಸಿದೆ..

## ರವಿಗೆ ಹೈಕೋರ್ಟ್ ರಿಲೀಫ್

ಎಂದು ಸಿಟಿ ರವಿ ಪರವಾಗಿ ಹಿರಿಯ ವಕೀಲ ಸಿವಿ ನಾಗೇಶ್ ವಾದ ಮಂಡಿಸಿದರು. ಇದಕ್ಕೆ ಪ್ರತಿಯಾಗಿ ಕ್ರಿಮಿನಲ್ ಕೃತ್ಯಗಳಿಗೆ ವಿನಾಯಿತಿ ಇಲ್ಲವೆಂದು ಎಸ್‌ಪಿಪಿ ಬಿಎ ಬೆಳ್ಳಿಯಪ್ಪ ವಾದ ಮಂಡಿಸಿದರು.

ಸಿಟಿ ರವಿ ವಾಯ್ಸ್ ಸ್ಯಾಂಪಲ್ ತೆಗೆದುಕೊಳ್ಳಬೇಕಿದೆ ಎಂದು ಎಸ್‌ಪಿಪಿ ವಾದ ಮಂಡಿಸಿದರು. ಆದಾಗ್ಯೂ ಮುಂದಿನ ಪ್ರಶ್ನೆ ಬಗ್ಗೆ ತೀರ್ಮಾನಿಸುವವರೆಗೆ ಕಾಯುವಂತೆ ಹೈಕೋರ್ಟ್ ಸೂಚನೆ ನೀಡಿತು.

## ಸರ್ಕಾರ ವಿಫಲ

ಕಿತ್ತುಕೊಳ್ಳುತ್ತಿರುವಂತಹ ಮೈಕ್ರೊ ಫೈನಾನ್ಸ್ ನಿಯಂತ್ರಣ ಮಾಡಲು ಸರ್ಕಾರಕ್ಕೆ ಸಾಧ್ಯವಾಗುತ್ತಿಲ್ಲ ಎಂದು ದೂರಿದರು.

ಹಿಂದೆ ಎಚ್.ಡಿ.ಕುಮಾರಸ್ವಾಮಿಯವರು ಮುಖ್ಯಮಂತ್ರಿ ಆಗಿದ್ದಾಗ ಹೆಚ್ಚು ಬಡ್ಡಿ ವಸೂಲಿ ಮಾಡುವವರ ನಿಯಂತ್ರಣಕ್ಕೆ ಕಾನೂನು ತಂದಿದ್ದರು. ಅದು ಕೋರ್ಟ್‌ನಲ್ಲಿ ಸ್ಟೇ ಆಗಿದೆ. ಈ ಸರ್ಕಾರ ಕೂಡಲೇ ಅದನ್ನು ತೆರವುಗೊಳಿಸಿ ಕಠಿಣ ಕ್ರಮ ಕೈಗೊಳ್ಳುವ ಅಧಿಕಾರ ಪಡೆದು, ಮೈಕ್ರೊ ಫೈನಾನ್ಸ್ ಗಳನ್ನು ನಿಯಂತ್ರಿಸಬೇಕು ಎಂದು ಆಗ್ರಹಿಸಿದರು.

# ಜಮೀನಿಗೆ ಕೆರೆ ಮಣ್ಣು ಪಡೆಯಲು ಮುಕ್ತ ಅವಕಾಶ ನೀಡಿ



**ಮುಳಬಾಗಿಲು:** ರೈತರ ಕೃಷಿ ಜಮೀನಿಗೆ ಅವಶ್ಯಕತೆಯಿರುವ ಮಣ್ಣಿಗೆ ಕೆರೆಗಳಲ್ಲಿ ಮಣ್ಣು ತೆಗೆದುಕೊಳ್ಳಲು ಮುಕ್ತ ಅವಕಾಶ ನೀಡಬೇಕೆಂದು ರೈತ ಸಂಘದಿಂದ ತಾಲ್ಲೂಕು ದಂಡಾದಿಕಾರಿಗಳಿಗೆ ಮನವಿ ನೀಡಿ ಒತ್ತಾಯಿಸಲಾಯಿತು.

ಹೆಚ್ಚಾಗಿ ರಾಸಾಯನಿಕ ಗೊಬ್ಬರಗಳು ಕೀಟನಾಶಕಗಳು ಉಪಯೋಗಿಸುವ ಜೊತೆಗೆ ಕೂಲಿಕಾರ್ಮಿಕರ ಅಭಾವದಿಂದ ತೋಟಗಳಲ್ಲಿ ಕಳೆ ತೆಗೆಯಲು ಸಾದ್ಯವಾಗದೆ ಎರೆಹುಳ ಹಾಗೂ ಮಣ್ಣಿಗೆ ಮಾರಾಕವಾಗುವ ಕಳೆ ಔಷದಿಯನ್ನು ನಿರಂತರವಾಗಿ ಭೂಮಿ ಮೇಲೆ ಸಿಂಪರಣೆ ಮಾಡುತ್ತಿರುವುದರಿಂದ ಭೂಮಿಯ ಪಲವತ್ತತೆ ಸಂಪೂರ್ಣವಾಗಿ ಕಳೆದುಕೊಂಡಿದ್ದು ಲಕ್ಷಾಂತರ ರೂಪಾಯಿ ಬಂಡವಾಳ ಹಾಕಿ ಬೆಳೆಯುತ್ತಿರುವ ಬೆಳೆ ಬಾರದೆ ನಾನಾ ರೋಗಗಳಿಗೆ ತುತ್ತಾಗಿ ಹಾಕಿದ ಬಂಡವಾಳ ಕೈಗೆ ಸಿಗದೆ ನಷ್ಟದ ಹಾದಿ ಹಿಡಿಯುತ್ತಿರುವ ರೈತರಿಗೆ ಕೆಟ್ಟ ಮೇಲೆ ಬುದ್ದಿ ಬಂದಾಂತಾಗಿದೆ ಆದರೆ ಕೃಷಿ ಬೂಮಿ ರಕ್ಷಣೆ ಮಾಡಲು ಅಧಿಕಾರಿಗಳು ಅಡ್ಡಗಾಲು ಹಾಕುತ್ತಿದ್ದಾರೆಂದು ತಾಲ್ಲೂಕಾಡಳಿತ ವಿರುದ್ದ ರೈತ ಸಂಘದ ರಾಜ್ಯ ಉಪಾದ್ಯಕ್ಷ ಕೆ.ನಾರಾಯಣಗೌಡ ಆಕ್ರೋಶ ವ್ಯಕ್ತಪಡಿಸಿದರು.



ಮಣ್ಣಿನ ಪಲವತ್ತತೆ ನಾಶವಾಗಿ ಭೂಮಿಯ ಸ್ನೆಹಮಯಿ ಎರೆಹುಳಗಳು ಸಂಪೂರ್ಣವಾಗಿ ರೈತರಿಂದ ದೂರವಾಗಿ ಕಣ್ಣೀರಿನಲ್ಲಿ ಕೈ ತೊಳೆಯುತ್ತಿರುವ ರೈತರಿಗೆ ಮತ್ತೆ ಬುದ್ದಿ ಬಂದತೆ ಕೃಷಿ ಜಮೀನನ್ನು ಪಲವತ್ತತೆ ಹೆಚ್ಚಿಸಲು ಅವಶ್ಯಕತೆ ಇರುವ ಮಣ್ಣಿನ ಕಡೆ ಹೊರಟಿರುವ ರೈತರಿಗೆ ಕೆರೆಯಲ್ಲಿ ಕೃಷಿ ಭೂಮಿಗೆ ಮಣ್ಣು ತೆಗೆಯಲು ಆಯಾ ವ್ಯಾಪ್ತಿಯ ಪಂಚಾಯಿತಿ ಹಾಗೂ ಸಂಬಂಧಪಟ್ಟ ಸಣ್ಣ ನೀರಾವರಿ ಇಲಾಖೆ ಅಧಿಕಾರಿಗಳು ನೂರೊಂದು ನೆಪ ಹೇಳಿ ಪ್ರತಿ ಟ್ರಾಕ್ಟರ್‌ಗೆ 100 ರೂ ರಾಜ ಧನ ಕಟ್ಟುವ ಆದೇಶ ಮಾಡಿ ಈಗಾಗಲೇ ಸಂಕಷ್ಟದಲ್ಲಿರುವ ರೈತರ ಮೇಲೆ ಅಧಿಕಾರಿಗಳು ಬ್ರಹ್ಮಾಸ್ತ್ರ ಉಪಯೋಗಿಸುತ್ತಿರುವುದು ಯಾವ ನ್ಯಾಯ ಎಂದು ಪ್ರಶ್ನೆ ಮಾಡಿದರು.

ತಾಲ್ಲೂಕಾದ್ಯಕ್ಷ ಯಲುವಳ್ಳಿ ಪ್ರಭಾಕರ್ ಮಾತನಾಡಿ ಇಟ್ಟಿಗೆ ಕಾರ್ಖಾನೆ, ಲೇಔಟ್, ಹಾಗೂ ಬೆಂಗಳೂರು ಮೂಲದ ಭೂಗಳ್ಳರು ಕೃಷಿಯೇ ಮಾಡದ ಜೊತೆಗೆ ಕೃಷಿ ಭೂಮಿ ಹೆಸರಿನಲ್ಲಿ ರಾಜರೋಷವಾಗಿ ಕಾನೂನಿನ ಭಯವಿಲ್ಲದೆ ಕೆರೆ ಮಣ್ಣನ್ನು ಲೂಟಿ ಮಾಡುತ್ತಿದ್ದರೆ ಅವರಿಗೆ ಯಾವುದೇ ರಾಜದನವಿಲ್ಲ ಮತ್ತು ಕೆರೆ ಮಣ್ಣನ್ನು ಆಕ್ರಮವಾಗಿ ಹೊರ ರಾಜ್ಯಕ್ಕೆ ಮಾರಾಟ ಮಾಡುತ್ತಿರುವ ದಂದೆ ಕೋರರಿಗೆ ನಿಯಂತ್ರಣವಿಲ್ಲ. ಆದರೆ ರೈತರಿಗೆ ಮಾತ್ರ ನೂರೊಂದು ಕಾನೂನು ಜಾರಿ ಮಾಡುತ್ತಿರುವುದು ರೈತ ವಿರೋದಿ ನೀತಿ ಅಲ್ಲವೇ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ರೈತರ ಕೃಷಿ ಜಮೀನಿಗೆ ಅವಶ್ಯಕತೆಯಿರುವ ಮಣ್ಣು ತೆಗೆಯಲು ರೈತರಿಂದ ಕೃಷಿ ಜಮೀನಿಗೆ ಸಂಬಂಧಪಟ್ಟ ದಾಖಲೆಗಳನ್ನು ಪರಿಶೀಲನೆ ಮಾಡಿ ಕೆರೆಗಳಲ್ಲಿ ಉಚಿತವಾಗಿ ಮಣ್ನು ತೆಗೆಯಲು ಮುಕ್ತ ಅವಕಾಶ ನೀಡಬೇಕು ಯಾವುದೆ ಕಾರಣಕ್ಕೂ ರೈತರಿಂದ ರಾಜಧನ ಸಂಗ್ರಹಿಸಬಾರದೆಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಬೇಕೆಂದು ಮನವಿ ಮಾಡಿದರು

ಮನವಿ ಸ್ವೀಕರಿಸಿ ಮಾತನಾಡಿದ ತಾಲ್ಲೂಕು ದಂಡಾಧಿಕಾರಿಗಳು ಸಂಭಂಧಪಟ್ಟ ಅಧಿಕಾರಿಗಳನ್ನು ಸಭೆ ಕರೆದು ರೈತರಿಗೆ ತೊಂದರೆ ಆಗದ ರೀತಿ ಕ್ರಮ ವಹಿಸುವ ಭರವಸೆಯನ್ನು ನೀಡಿದರು.

ಮನವಿ ನೀಡುವಾಗ ರಾಜೇಶ್,ವಿಜಿ ಪಾಲ್. ಶಿವಾ. ಪಾರುಕ್‌ಪಾಷ, ಅಂಬ್ಲಿಕಲ್ ಮಂಜುನಾಥ್, ಸುಪ್ರೀಂಚಲ, ಭಾಸ್ಕರ್, ಶ್ರೀನಿವಾಸ್, ಸುನಿಲ್‌ಕುಮಾರ್, ಜುಬೇರ್ ಪಾಷ, ಮಂಗಸಂದ್ರ ತಿಮ್ಮಣ್ಣ, ಗಿರೀಶ್, ಮುಂತಾದವರಿದ್ದರು

# ಅಂಬಿಗರ ಚೌಡಯ್ಯರ ಸಾಮಾಜಿಕ ಮೌಢ್ಯತೆಗಳನ್ನು ಮುರಿದುಹಾಕಿದ ವ್ಯಕ್ತಿ



**ಶಿಡ್ಲಘಟ್ಟ:** ಜನರಿಗೆ ನವಜೀವನದ ದಾರಿ ತೋರಿಸಿದ ನಿಜಶರಣ ಅಂಬಿಗರ ಚೌಡಯ್ಯನವರ ಸಾಧನೆ ಅಮೂಲ್ಯ ಮತ್ತು ಆದರ್ಶಪ್ರಾಯವಾಗಿದೆ ಎಂದು ತಹಶೀಲ್ದಾರ್ ಬಿ.ಎನ್. ಸ್ವಾಮಿ ಹೇಳಿದರು.

ನಗರದ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ತಾಲ್ಲೂಕು ಆಡಳಿತದ ವತಿಯಿಂದ ಆಯೋಜಿಸಲಾದ ನಿಜಶರಣ ಅಂಬಿಗರ ಚೌಡಯ್ಯ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಅವರು ಭಾಗವಹಿಸಿ ಮಾತನಾಡಿದರು.

ವಚನ ಸಾಹಿತ್ಯದ ಮೂಲಕ ಸಾಮಾಜಿಕ ಮೌಢ್ಯತೆಗಳನ್ನು ಮುರಿದುಹಾಕಿ 300ಕ್ಕೂ ಹೆಚ್ಚು ವಚನಗಳನ್ನು ರಚಿಸಿದ ಅಂಬಿಗರ ಚೌಡಯ್ಯನವರು, ತಮ್ಮ ವಚನಗಳ ಮೂಲಕ ಸಾಮಾಜಿಕ ಪರಿವರ್ತನೆಗೆ ಶ್ರಮಿಸಿದ ಮಹಾನ್ ಶರಣರಾಗಿದ್ದರು ಎಂದು ಹೇಳಿದರು.

ನೇರ ನಡೆ, ನುಡಿಗೆ ಹೆಸರಾಗಿದ್ದ ಚೌಡಯ್ಯನವರು 'ನಿಜ ಶರಣ' ಎಂಬ ಖ್ಯಾತಿ ಪಡೆದಿದ್ದರು ಎಂದು ಹೇಳಿದರು.

ಜಿಲ್ಲಾ ಜಾಗೃತಿ ಸಮಿತಿ ಸದಸ್ಯರಾದ ಮಂಜುನಾಥ್ ಮಾತನಾಡಿ, ನಿಜಶರಣ ಅಂಬಿಗರ ಚೌಡಯ್ಯನವರ ಆದರ್ಶ ಮತ್ತು ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಂಡಾಗ, ಸುಸಂಸ್ಕೃತ ಹಾಗೂ ಮೌಲ್ಯಯುತ ಸಮಾಜದ ನಿರ್ಮಾಣ ಸಾಧ್ಯ ಅವರ ವಚನಗಳು ಬಡವರ ಮತ್ತು ಶೋಷಿತರಿಗಾಗಿ ಹೊಸ ದಿಕ್ಕು ತೋರಿಸಿತು ಎಂದು ನುಡಿದರು.

ಈ ವೇಳೆ ಎಸ್ಸೆಸ್ಸೆಲ್ಸಿ ಮತ್ತು ಪಿಯುಸಿ ಪರೀಕ್ಷೆಗಳಲ್ಲಿ ಉತ್ತಮ ಅಂಕ ಪಡೆದ ಸಮುದಾಯದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಪ್ರತಿಭಾ ಪುರಸ್ಕಾರ ನೀಡಲಾಯಿತು.

ಈ ಸಂದರ್ಭದಲ್ಲಿ ತಾಲ್ಲೂಕು ಬೆಸ್ತರ ಸಂಘದ ಅಧ್ಯಕ್ಷ ಡಿ.ಎನ್. ಶಿವಣ್ಣ, ಸಮುದಾಯದ ಮುಖಂಡರಾದ ಲಕ್ಷ್ಮೀನಾರಾಯಣ್(ಲಚ್ಚಿ), ಗೋಪಾಲ್,ಡಿ.ಎಚ್. ನಾಗರಾಜ್ ಮತ್ತಿತರರು ಭಾಗವಹಿಸಿದ್ದರು.

# ಪಿಎಲ್‌ಡಿ ಬ್ಯಾಂಕ್‌ಗೆ ಅಧ್ಯಕ್ಷ-ಉಪಾಧ್ಯಕ್ಷರ ಆಯ್ಕೆ

**ಕೊರಟಗೆರೆ:** ಕೊರಟಗೆರೆತಾಲ್ಲೂಕಿನ ಪಿಎಲ್‌ಬ್ಯಾಂಕ್‌ನ ನೂತನಅಧ್ಯಕ್ಷರಾಗಿಎನ್. ಚಿಕ್ಕರಂಗಯ್ಯ ಹಾಗೂ ಉಪಾಧ್ಯಕ್ಷರಾಗಿ ಬಿ.ಡಿ.ನಾಗರಾಜಯ್ಯಆಯ್ಕೆಯಾಗಿದ್ದಾರೆ.



ತಾಲ್ಲೂಕಿನ ಪ್ರಾಥಮಿಕ ಸಹಕಾರ ಕೃಷಿ ಮತ್ತುಗ್ರಾಮೀಣಅಭಿವೃದ್ಧಿ ಬ್ಯಾಂಕ್‌ನಲ್ಲಿಒಟ್ಟು 14 ಸದಸ್ಯರಿದ್ದುಒಬ್ಬರು ಸರ್ಕಾರದ ನಾಮನಿರ್ದೇಶನ ಸದಸ್ಯರಿರುತ್ತಾರೆ. ಬುಧವಾರದಂದು ಪಟ್ಟಣದ ಪಿಎಲ್‌ಡಿ ಬ್ಯಾಂಕ್‌ಕಛೇರಿಯಲ್ಲಿ ನಡೆದ ಅಧ್ಯಕ್ಷ ಮತ್ತುಉಪಾಧ್ಯಕ್ಷ ಚುನಾವಣೆಯಲ್ಲಿಎನ್.ಡಿ.ಎ. ಪಕ್ಷದ ಬೆಂಬಲಿತಅಭ್ಯರ್ಥಿಚಿಕ್ಕರಂಗಯ್ಯ 8 ಮತಗಳನ್ನು ಪಡೆದುಅಧ್ಯಕ್ಷರಾಗಿಕಾಂಗ್ರೆಸ್ ಬೆಂಬಲಿತಅಭ್ಯರ್ಥಿಕೆ. ಎಲ್. ಆನಂದ್‌ರವರನ್ನು 1 ಮತಗಳ ಅಂತರದಿಂದ ಸೋಲಿಸಿದರು.

ಅದೇರೀತಿಉಪಾಧ್ಯಕ್ಷ ಸ್ಥಾನಕ್ಕೆ ಎನ್.ಡಿ.ಎ. ಬೆಂಗಲಿತಅಭ್ಯರ್ಥಿಬಿ.ಡಿ.ನಾಗರಾಜಯ್ಯ8 ಮತಗಳನ್ನು ಪಡೆದುಕಾಂಗ್ರೆಸ್ ಬೆಂಬಲಿತಅಭ್ಯರ್ಥಿಕೆಂಚಮ್ಮರವರನ್ನು 1 ಮತಗಳ ಅಂತರದಿಂದ ಸೋಲಿಸಿದರು.

ಪಿಲ್‌ಡಿ ಬ್ಯಾಂಕ್‌ನಲ್ಲಿ ಕಾಂಗ್ರೆಸ್‌ಬೆಂಬಲಿತ ಅಭ್ಯರ್ಥಿಗಳು ನಾಮನಿರ್ದೇಶನ ಅಭ್ಯರ್ಥಿಯು ಸೇರಿ 9 ಜನರಿದ್ದುಒಟ್ಟು 15 ಸ್ಥಾನಗಳಲ್ಲಿ ಹೆಚ್ಚಿನ ಸ್ಥಾನದಲ್ಲಿದ್ದರು ಆದರೆ ಚುನಾವಣಾ ಸಂಧರ್ಭದಲ್ಲಿಕಾಂಗ್ರೆಸ್ ಪಕ್ಷದ ಮುಖಂಡರುಗಳಾದ ಚಿಕ್ಕರಂಗಯ್ಯ ಮತ್ತು ಬಿ.ಡಿ.ನಾಗರಾಜಯ್ಯಎನ್‌ಡಿಎಕೂಟ ಸೇರಿ 6 ಮತ್ತು 2 ಮತಗಳನ್ನು ಹೆಚ್ಚಿಗೆ ಮಾಡಿಕೊಂಡು ಬಂಡಾಯ ಬಾವುಟ ಆರಿಸಿ ಅಧ್ಯಕ್ಷ ಮತ್ತು ಉಪಾಧ್ಯಕ್ಷರುಗಳಾದರು. ಕಾಂಗ್ರೆಸ್ ಪಕ್ಷದ ಬ್ಲಾಕ್‌ಕಾಂಗ್ರೆಸ್ ಹಾಗೂ ಮುಖಂಡರಅತಿಯಾದಆತ್ಮ ವಿಶ್ವಾಸ ತಳಮಟ್ಟದಲ್ಲಿ ಕೆಲಸ ನಿರ್ವಹಿಸದೇ ಇರುವುದಕ್ಕೆ ಈ ಸೋಲಾಗಿದ್ದುಇದೇ ಸೋಲು ತುಮಕೂರು ಹಾಲು ಉತ್ಪಾಧಕರ ಸಹಕಾರ ಸಂಘದ ನಿರ್ದೇಶಕರಚುನಾವಣೆಯಲ್ಲೂ ಸಹ ಉಂಟಾಗಿದೆಎಂದು ಕೆಲವು ಕಾರ್ಯಕರ್ತರುದೂರಿದ್ದಾರೆ.

ಈ ಸಂಧರ್ಭದಲ್ಲಿಮಾಜಿ ಶಾಸಕ ಸುಧಾಕರ್‌ಲಾಲ್ ಮಾತನಾಡಿ, ನಮ್ಮ ಮುಖಂಡರಒಗ್ಗಟ್ಟು ಮತ್ತು ಶ್ರಮದಿಂದ ಹಾಗೂ ಬ್ಯಾಂಕ್‌ನ ನಿರ್ದೇಶಕರ ಬೆಂಬಲದಿಂದ ನಾವು ಈ ಚುನಾವಣೆಯಲ್ಲಿ ಜಯಗಳಿಸಿದ್ದು ರೈತರಿಗೆ ಹತ್ತಿರವಾದ ಈ ಬ್ಯಾಂಕ್‌ನಿಂದ ಹಲವು ಸೇವೆ ಸಲ್ಲಿಸಲಾಗುವುದು ಎಂದರು.

ಜಿಲ್ಲಾಜೆಡಿಎಸ್ ಅಧ್ಯಕ್ಷಅಂಜಿನಪ್ಪ ಮಾತನಾಡಿ, ನಮ್ಮಎನ್‌ಡಿಎ ಮೈತ್ರಿಕೂಟ ಕೊರಟಗೆರೆಯಲ್ಲಿ ನಡೆಯುತ್ತಿರುವ ಹಲವು ಚುನಾವಣೆಗಳಲ್ಲಿ ಜಯಗಳಿಸುತ್ತಿದ್ದು ಮುಂಬರುವಎಲ್ಲಾಚುನಾವಣೆಯಲ್ಲೂ ಸಹ ನಮ್ಮಕಾರ್ಯಕರ್ತರ ಬಲದಿಂದಜಯ ಗಳಿಸುತ್ತೇವೆ ಅದೇರೀತಿರಾಜ್ಯದಲ್ಲಿ ವ ಎತ್ತುತುಮಕೂರುಜಿಲ್ಲೆಯಲ್ಲಿಕಾಂಗ್ರೆಸ್ ಪಕ್ಷದ ಬಲ ಕ್ಷೀಣಿಸುತ್ತಿದ್ದುಎನ್‌ಡಿಎ ಬಲ ಹೆಚ್ಚುತ್ತಿದೆಎಂದರು.

ನೂತನಅಧ್ಯಕ್ಷಚಿಕ್ಕರಂಗಯ್ಯ ಮಾತನಾಡಿ, ನನ್ನ ಈ ನಿರ್ಧಾರಕ್ಕೆಕಾಂಗ್ರೆಸ್ ಪಕ್ಷದ ಕೆಲವು ಮುಖಂಡರುಗಳು ಕಾರಣವಾಗಿದ್ದು ಈ ಹಿಂದೆಚೆನ್ನಿಗಪ್ಪನವರಕಾಲದಲ್ಲಿ ಸಕ್ರಿಯವಾಗಿಜೆಡಿಎಸ್ ನಲ್ಲಿದ್ದೆ ಬದಲಾದಕಾಲದಲ್ಲಿಕಾಂಗ್ರೆಸ್‌ಗೆ ಬಂದು ಈಗ ಮತ್ತೆಜೆ.ಡಿ.ಎಸ್ ಸೇರಿಕೊಂಡಿದ್ದೇನೆಮುಂದೆ ಬ್ಯಾಂಕ್‌ನಲ್ಲಿಅಧ್ಯಕ್ಷನಾಗಿ ನಿಷ್ಟೆಯಿಂದ ಕೆಲಸ ನಿರ್ವಹಿಸುತ್ತೇನೆಎಂದರು.

ಉಪಾಧ್ಯಕ್ಷ ಬಿ.ಡಿ.ನಾಗರಾಜು ಮಾತನಾಡಿ, ಬ್ಲಾಕ್‌ಕಾಂಗ್ರೆಸ್ ಅಧ್ಯಕ್ಷರುಗಳ ನಿರ್ಲಕ್ಷ ಮತ್ತು ನನಗೆ ಗೌರವ ನೀಡದಿದ್ದಕ್ಕೆ ಮೂಲ ಕಾಂಗ್ರೆಸಿಗನಾದ ನಾನು ಜೆಡಿಎಸ್ ಪಕ್ಷ ಸೇರಿಕೊಂಡಿದ್ದುಉಪಾಧ್ಯಕ್ಷನಾಗಿ ನನ್ನ ಕೆಲಸ ಮಾಡುತ್ತೇನೆಎಂದರು.

ಈ ಸಂದರ್ಭದಲ್ಲಿತುಮುಲ್ ನಿರ್ದೇಶಕ ಸಿದ್ದಗಂಗಯ್ಯ, ನಿರ್ದೇಶಕರುಗಳಾದಲ ಕ್ಷ್ಮೀನಾರಾಯಣ್, ಪ್ರಕಾಶ್, ಕಾಮಣ್ಣ, ರಂಗಯ್ಯ, ನೇತ್ರಾವತಿ, ರವೀಂದ್ರ ಹಾಗೂ ಮುಖಂಡರುಗಳಾದ ಕಾಮರಾಜು, ಮಾವತ್ತೂರುಮಂಜುನಾಥ್, ಸಿದ್ದಮಲ್ಲಯ್ಯ, ಅಶ್ವತ್ಥನಾರಾಯಣ್‌ರಾಜು, ಬೋರ್‌ವೆಲ್ ರಮೇಶ್, ಕಾಕಿಶಿವಣ್ಣ, ಸಿದ್ದರಾಜು, ಅಣ್ಣಪ್ಪ, ವಿನಯ್‌ಕುಮಾರ್, ದೊಡ್ಡಯ್ಯ, ಮಧುಸೂದನ್ ಸೇರಿದಂತೆ ಇತರರು ಹಾಜರಿದ್ದರು.

# ಸರಳ ವ್ಯಕ್ತಿ ನಿಖಿಲ್‌ಕುಮಾರಸ್ವಾಮಿ

**ಕೆ.ಆರ್.ಪೇಟೆ:** ರಾಜಕೀಯ ಪಕ್ವತೆ, ಮುಂದಾಲೋಚನೆ, ಎಲ್ಲರೊಂದಿಗೆ ಬೆರೆಯುವ ಗುಣ, ಆಡಂಬರವಿಲ್ಲದ ಸರಳ ಸ್ವಭಾವದಿಂದಾಗಿ ನಿಖಿಲ್ ಕುಮಾರಸ್ವಾಮಿ ಜನರ ಮನಸ್ಸಿನಲ್ಲಿ ಸದಾ ಉಳಿಯುತ್ತಾರೆ ಎಂದು ಶಾಸಕ ಹೆಚ್.ಟಿ.ಮಂಜು ಅಭಿಪ್ರಾಯಪಟ್ಟರು.



ಅವರು ಪಟ್ಟಣದ ದುಂಡಶೆಟ್ಟಿಲಕ್ಷ್ಮಮ್ಮ ಸಾರ್ವಜನಿಕ ಆಸ್ಪತ್ರೆಯಲ್ಲಿ ಜೆಡಿಎಸ್ ಯುವ ಜನತಾದಳದ ರಾಜ್ಯಾದ್ಯಕ್ಷ ನಿಖಿಲ್‌ಕುಮಾರಸ್ವಾಮಿಯವರ 37 ನೇ ಹುಟ್ಟುಹಬ್ಬದ ಪ್ರಯುಕ್ತ ಒಳರೋಗಿಗಳಿಗೆ ಹಣ್ಣುಹಂಪಲು ವಿತರಿಸಿ ಮಾತನಾಡಿದರು.

ರಾಜಕೀಯ ಹೊರತುಪಡಿಸಿ ನೋಡಿದಾಗ ನಿಖಿಲ್ ಕುಮಾರಸ್ವಾಮಿಯವರು ಒಬ್ಬ ಉತ್ತಮ ಹೃದಯವಂತ, ತಂದೆಯಂತೆ ಬಡವರ, ಸಂಕಷ್ಟದಲ್ಲಿರುವವರ ನೆರವಿಗೆ ಬರುವ ಸುಸಂಸ್ಕೃತ ವ್ಯಕ್ತಿತ್ವ ಹೊಂದಿರುವ ವ್ಯಕ್ತಿ. ಅವರು ಎಲ್ಲರೊಡನೆ ಬೆರೆಯುವ ಅವರ ಗುಣಗಳು ಜನರ ಮೆಚ್ಚುಗೆಗೆ ಪಾತ್ರವಾಗಿವೆ. ಅವರಲ್ಲಿ ತಂದೆಯಂತೆ ಬಹಳ ತಾಳ್ಮೆಯಿದೆ. ಸರಳತೆಯಿದೆ. ಮಾಜಿ ಪ್ರಧಾನಿಯ ಮೊಮ್ಮೊಗ ಎಂಬ ಆಡಂಬರವಿಲ್ಲದೇ ಸರ್ವರನ್ನೂ ಸತ್ಕರಿಸಿ ಸಮನಾಗಿ ಕಾಣುವ ಲಕ್ಷಣಗಳು ಅವರಲ್ಲಿ ಅಡಕವಾಗಿವೆ. ಅವರು 37ನೇ ವಸಂತಕ್ಕೆ ಕಾಲಿಡುತ್ತಿರುವ ಈ ಸಂದರ್ಭದಲ್ಲಿ ಅವರಿಗೆ ದೇವರು ಉತ್ತಮ ಆರೋಗ್ಯ, ಆಯಸ್ಸು, ರಾಜಕೀಯ ಸ್ಥಾನಮಾನಗಳನ್ನು ದೊರಕಿಸಲಿ ಎಂದು ಪ್ರಾರ್ಥಿಸಿದರು.

ಇದೇ ಸಂದರ್ಭದಲ್ಲಿ ತಾಲ್ಲೂಕು ಜೆಡಿಎಸ್ ಅಧ್ಯಕ್ಷ ಜಾನಕೀರಾಮು, ಪುರಸಭಾ ಸದಸ್ಯ ಗಿರೀಶ್, ವೀರಶೈವ ಮುಖಂಡ ತೋಟಪ್ಪಶೆಟ್ಟಿ. ಶಾಸಕರ ಸಹೋದರ ಹೆಚ್.ಟಿ.ಲೋಕೇಶ್, ಟಿಎಪಿಸಿಎಂಎಸ್ ನಿರ್ದೇಶಕ ಬಲದೇವ, ಹೋಬಳಿ ಜೆಡಿಎಸ್ ಅಧ್ಯಕ್ಷರಾದ ರವಿಕುಮಾರ್, ಬಸವಲಿಂಗಪ್ಪ, ಶೀಳನೆರೆ ಗ್ರಾಪಂ ಸದಸ್ಯ ಹಾಗೂ ಜೆಡಿಎಸ್ ಮುಖಂಡ ಸಿದ್ದೇಶ್, ವಡ್ಡರಹಳ್ಳಿಮಹದೇವ್, ಚಿಕ್ಕೊಸಳ್ಳಿನಾಗೇಶ್, ಡಾ.ಶಶಿಧರ್, ಶಾಸಕರ ಆಪ್ತ ಸಹಾಯಕರಾದ ಪ್ರತಾಪ್, ಕುಮಾರಸ್ವಾಮಿ, ದೃವ, ಜೀವನ್, ಸಚ್ಚಿನ್ ಸೇರಿದಂತೆ ನೂರಾರು ಕಾರ್ಯಕರ್ತರಿದ್ದರು.

# ವೈದ್ಯರ ವೃತ್ತಿ ಪವಿತ್ರ: ಸಿದ್ದಲಿಂಗಸ್ವಾಮೀಜಿ

**ಮಾಗಡಿ:** ವೈದ್ಯರ ವೃತ್ತಿ ಪವಿತ್ರವಾದ ವೃತ್ತಿ ಎಂದು ಚಕ್ರಭಾವಿ ಜಂಗಮ ಮಠದ ಸಿದ್ದಲಿಂಗಸ್ವಾಮೀಜಿ ಹೇಳಿದರು.



ತಾಲೂಕಿನ ಚಕ್ರಭಾವಿ ಜಂಗಮ ಮಠದಲ್ಲಿ ಚಕ್ರಭಾವಿ ಪ್ರಾಥಮಿಕ ಕೇಂದ್ರದ ವೈದ್ಯೆ ಡಾ.ದೀಪು ಅವರು ಉನ್ನತ ವಿದ್ಯಾಭ್ಯಾಸಕ್ಕೆ [ಎಂಡಿ] ತೆರಳುತ್ತಿರುವ ವೇಳೆ ಬೀಳ್ಕೊಡುಗೆ ಸಮಾರಂಭದಲ್ಲಿ ಮಾತನಾಡಿದ ಅವರು, ಗ್ರಾಮೀಣ ಭಾಗದ ಜನರು ವೈದ್ಯರನ್ನು ದೇವರಂತೆ ಭಗವಂತ ಜೀವವನ್ನು ಉಳಿಸುವ ಶಕ್ತಿ ನೀಡಿದ್ದಾನೆ, ಕೆಲವರ ಹಸ್ತ ಮುಟ್ಟಿದರೆ ಸಾಕು ಕಬ್ಬಿಣವು ಚಿನ್ನವಾಗುತ್ತದೆ ಅದೇ ರೀತಿ ವೈದ್ಯೆ ಡಾ. ರೋಗಿಗಳನ್ನು ಮುಟ್ಟಿದರೆ ಸಾಕು ಕಾಯಿಲೆ ವಾಸಿಯಾಗುತ್ತದೆ ಜಗತ್ತಿನಲ್ಲಿ ಏನೆಲ್ಲಾ ಗೆಲ್ಲಬಹುದು ಮನುಷ್ಯನ ಮನಸ್ಸು ಗೆಲ್ಲುವುದು ಕಷ್ಟ ಆದರೆ ಆ ಗುಣ ಇವರಲ್ಲಿದೆ. ಮತಷ್ಟು ಜನರ ಜೀವವನ್ನು ಉಳಿಸುವ ಶಕ್ತಿ ಅವರಿಗೆ ಲಭಿಸಲಿ, ಜಗತ್ತು, ಜನ ಮೆಚ್ಚುವಂಥಹ ರಾಷ್ಟ್ರಪಶಸ್ತಿಗಳು ಇವರಿಗೆ ಲಭಿಸಲಿ ಎಂದು ಶುಭಹಾರೈಸಿದರು.

ಕಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಶಿವಕುಮಾರು ಮಾತನಾಡಿ, ಡಾ. ದೀಪು ಅವರು ಚಕ್ರಭಾವಿ ಪ್ರಾಥಮಿಕ ಆರೋಗ್ಯ ಕೇಂದ್ರದಕ್ಕೆ ಬಂದು ವರ್ಷಕಳೆದಿದೆ, ಈ ಒಂದು ವರ್ಷದಲ್ಲಿ ಜನರಿಗೆ ಉತ್ತಮ ಆರೋಗ್ಯ ಸೇವೆ ನೀಡಿ ಮನೆಮಾತಾಗಿದ್ದಾರೆ. ಇವರ ಆರೋಗ್ಯ ಸೇವೆ ಮೆಚ್ಚಿ ದೂರದ ಕುಣಿಗಲ್, ರಾಮನಗರ, ಮಾಗಡಿ ಸೇರಿದಂತೆ ನೆರೆ ಜಿಲ್ಲೆಗಳಿಂದ ಹಲವಾರು ಕಾಯಿಲೆಗಳಿಗೆ ಚಿಕಿತ್ಸೆ ಪಡೆಯಲು ಆಗಮಿಸುತ್ತಿದ್ದಾರೆ, ನಮ್ಮ ದೂರದೃಷ್ಟ ಅವರಿಗೆ ಪಿಜಿ ಸೀಟು ಸಿಕ್ಕಿರುವುದರಿಂದ ಹೆಚ್ಚಿನ ವಿದ್ಯಾಭ್ಯಾಸಕ್ಕೆ ತೆರಳುತ್ತಿದ್ದಾರೆ. ಈ ಸಂಬಂಧ ಆರೋಗ್ಯ ಕೇಂದ್ರದ ಸಿಬ್ಬಂದಿಗಳು, ಆಶಾ ಕಾರ್ಯಕರ್ತರು, ಗ್ರಾಮಸ್ಥರು ಸೇರಿ ಬಿಳ್ಕೊಡುಗೆ ಸಮಾರಂಭ ನೆರವೇರಿಸಲಾಗಿದೆ, ಡಾ.ದೀಪು ಅವರು ಎಂಡಿ ಉನ್ನತ ವಿದ್ಯಾಭ್ಯಾಸ ಮುಗಿಸಿ ಮತ್ತೆ ಮಾಗಡಿ ಜನರಿಗೆ ಸೇವೆ ನೀಡಲಿ ಎಂದರು.

ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಶ್ರೀನಿವಾಸ್, ಕೌಶಿಕ್, ಪಿಎಚ್‌ಸಿಓ ಶಶಿಕಲಾ, ರಾಧ, ಕವಿತ, ದುಡ್ಡಪ್ಪ, ಆಶಾ ಕಾರ್ಯಕರ್ತೆಯರಾದ ವಿಜಯಲಕ್ಷ್ಮಿ, ಟಿಎಸ್.ವಿಜಯಲಕ್ಷ್ಮಿ, ಕಮಲ, ಶೋಭ, ಲಲಿತ, ವಿಜಯಕುಮಾರಿ, ಪ್ರೇಮ, ರಶ್ಮಿ ಇತರರು ಇದ್ದರು.

# ಏಕಸ್ ಕಂಪನಿ ಹತ್ತಿರ ಎರಡನೇ ಕೌಶಲ್ಯ ಕೇಂದ್ರ ನಿರ್ಮಾಣ

**ಕುಕನೂರು:** 2025–26 ನೇ ಸಾಲಿನ ಹಣಕಾಸು ವರ್ಷದ ಬಜೆಟ್ ಗಾತ್ರ 4 ಲಕ್ಷ ಕೋಟಿ ರೂ ಮೀರಲಿದೆ,ಗ್ಯಾರಂಟಿ ಯೋಜನೆಗಳು ಯಥಾವತ್ತಾಗಿ ಮುಂದುವರೆಯುತ್ತವೆ,ಇವುಗಳಿಂದ ಯಾವುದೇ ಆರ್ಥಿಕ ಹೊರೆ ಆಗಿಲ್ಲ ಎಂದು ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರ, ಶಾಸಕ ಬಸವರಾಜ್ ರಾಯರಡ್ಡಿ ಹೇಳಿದ್ದಾರೆ.

ತಾಲೂಕಿನ ಸಿದ್ನೇಕೊಪ್ಪ, ಸೋಂಪುರ, ನಿಟ್ಟಾಲಿ ಗ್ರಾಮಗಳಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳ ಭೂಮಿಪೂಜೆ ನಂತರ ಮಾತನಾಡಿದ ಶಾಸಕ ರಾಯರಡ್ಡಿ, ಪ್ರಸಕ್ತ ಹಣಕಾಸು ವರ್ಷದ ಬಜೆಟ್ ನ ಮಿತಿ 3 ಲಕ್ಷ 73 ಸಾವಿರ ಕೋಟಿ ಇದ್ದು. ಮುಂದಿನ ಹಣಕಾಸು ವರ್ಷದ ಮುಂಗಡಪತ್ರದ ಗಾತ್ರವು ಸುಮಾರು 4 ಲಕ್ಷ ಕೋಟಿಗೂ ಅಧಿಕವಾಗಿರಲಿದೆ ಎಂದಿದ್ದಾರೆ.

ಕುಕನೂರು ತಾಲೂಕಿನ ಏಕಸ್ ಕಂಪನಿ ಹತ್ತಿರ ಮತ್ತೊಂದು ಕೌಶಲ್ಯ ಅಭಿವೃದ್ಧಿ ಕೇಂದ್ರ ಮಂಜೂರಾಗಿದ್ದು ಇದಕ್ಕಾಗಿ 150 ಕೋಟಿ ರೂ ಅನುದಾನ ದೊರೆತಿದೆ. ಸಂಪುಟದಲ್ಲಿ ಅನುಮೋದನೆ ಸಿಕ್ಕಿದ್ದು ಟೆಂಡರ್ ಪ್ರಕ್ರಿಯೆ ಮಾತ್ರ ಬಾಕಿ ಇದೆ. ಮುಂದಿನ ಎರಡು ವರ್ಷಗಳಲ್ಲಿ ಕೌಶಲ್ಯ ಕೇಂದ್ರ ಪ್ರಾರಂಭವಾಗಲಿದ್ದು ಇದರಿಂದ ಎರಡೂವರೆ ಸಾವಿರ ಉದ್ಯೋಗಾ ಕಾಂಕ್ಷಿಗಳಿಗೆ ಅನುಕೂಲವಾಗಲಿದೆ ಎಂದು ರಾಯರಡ್ಡಿ ಹೇಳಿದರು.




ಇದೇ ಅವಧಿಯಲ್ಲಿ ಈಗಾಗಲೇ ಅವಳಿ ತಾಲೂಕಿನಲ್ಲಿ 14 ಪ್ರೌಢಶಾಲೆ, 6 ಪದವಿ ಪೂರ್ವ ಕಾಲೇಜು ಪ್ರಾರಂಭಿಸಲಾಗಿದೆ. ಅಗತ್ಯ ಪೀಠೋಪಕರಣಗಳನ್ನು ಒದಗಿಸಲಾಗುವುದು. ನೂತನವಾಗಿ 8 ಕಲ್ಯಾಣ ಮಂಟಪ ನಿರ್ಮಾಣ ಮಾಡಲು ಭೂಮಿ ಲಭ್ಯವಾಗಿದ್ದು ಹಂತ ಹಂತವಾಗಿ ಕಾಮಗಾರಿ ಕೈಗೆಟ್ಟಿಕೊಳ್ಳಗುವುದು. 11 ಕೆರೆಗಳ ನಿರ್ಮಾಣಕ್ಕೆ ಈಗಾಗಲೇ 50 ಕೋಟಿ ರೂ ಸಿಕ್ಕಿದೆ, ಕಾಮಗಾರಿ ಕೆಲಸಗಳು ಪ್ರಗತಿಯಲ್ಲಿವೆ ಎಂದು ಶಾಸಕ ರಾಯರಡ್ಡಿ ಹೇಳಿದರು.

ಚುನಾವಣೆ ಬರುತ್ತವೆ ಹೋಗುತ್ತವೆ, ಆದರೆ ಅಭಿವೃದ್ಧಿಯೇ ಮಾನದಂಡ ಆಗಬೇಕೇ ಹೊರತು ಜನಸಾಮಾನ್ಯರು ಐದುನೂರು ರೂಪಾಯಿ ಕೂಲಿ ಕಾಸಿನ ಆಶೆಗೆ ಬೀಳಬಾರದು. ಅಭಿವೃದ್ಧಿ ಮಾಡುವವರನ್ನು ನೋಡಬೇಕು ಎಂದು ರಾಯರಡ್ಡಿ ಹೇಳಿದರು.


ಈ ಸಂದರ್ಭದಲ್ಲಿ ಮಸಬಹಂಚಿನಾಳ ಗ್ರಾಮ ಪಂಚಾಯತ್ ಅಧ್ಯಕ್ಷ ಹಮುಮಂತಪ್ಪ ಬನ್ನಿಕೊಪ್ಪ, ತಹಸೀಲ್ದಾರ್ ಎಚ್ ಪ್ರಾಣೇಶ್, ಎ ಇ ಇ ಜಗನ್ನಾಥ, ಮುಖಂಡರಾದ ಅಶೋಕ್ ತೋಟದ್, ಮಂಜುನಾಥ್ ಸೋಂಪುರ್, ಆನಂದ್ ಉಳ್ಳಾಗಡ್ಡಿ, ಶಿವನಗೌಡ ದಾನರಡ್ಡಿ, ಸಂಗಮೇಶ್ ಗುತ್ತಿ, ಮಂಜುನಾಥ್ ಕಡೇಮನಿ ಇತರರು ಉಪಸ್ಥಿತರಿದ್ದರು.

# ಶಿವಪುರ ಸಂಘದಿಂದ ಕಣ್ಣಿನ ತಪಾಸಣೆ ಶಿಬಿರ

**ಹನೂರು:** ತಾಲೂಕಿನ ಕಣ್ಣೂರು ಗ್ರಾಮ ಪಂಚಾಯತ್ ವ್ಯಾಪ್ತಿಯ ಶಿವಪುರ ಗ್ರಾಮದ ಹಾಲು ಉತ್ಪಾದಕರ ಸಹಕಾರ ಸಂಘದ ಆವರಣದಲ್ಲಿ ಹಮ್ಮಿಕೊಂಡಿದ್ದ ಉಚಿತ ಕಣ್ಣಿನ ಆರೋಗ್ಯ ತಪಾಸಣೆ ಮತ್ತು ಬಿ.ಪಿ ಶುಗರ್ ತಪಾಸಣಾ ಕಾರ್ಯಕ್ರಮವು ಹಾಲು ಉತ್ಪಾದಕರ ಸಂಘದ ಅಧ್ಯಕ್ಷರು ಎಂ.ಮಹದೇವ ಪ್ರಭು ಅವರ ನೇತೃತ್ವದಲ್ಲಿ ಯಶಸ್ವಿಯಾಗಿ ನಡೆಯಿತು.

ಶಿವಪುರ ಹಾಲು ಉತ್ಪಾದಕರ ಸಹಕಾರ ಸಂಘದ ವತಿಯಿಂದ ಕೊಳ್ಳೇಗಾಲ ಅನ್ನಪೂರ್ಣ ಕಣ್ಣಿನ ಆಸ್ಪತ್ರೆ ಸಹಯೋಗದೊಂದಿಗೆ ಶ್ರೀ ಮಂಜುನಾಥ ಸ್ವಾಮಿ ಗ್ರಾಮೀಣಾಭಿವೃದ್ಧಿ ಸಂಸ್ಥೆ ಧರ್ಮಸ್ಥಳ ಕಾರ್ಡ್ ಮತ್ತು ಯಶಸ್ವಿನಿ ಯೋಜನೆ ಫಲಾನುಭವಿಗಳಿಗೆ ಹಾಗೂ ಗ್ರಾಮಸ್ಥರಿಗೆ ತಪಾಸಣೆ ಶಿಬಿರವನ್ನು ಏರ್ಪಡಿಸಲಾಗಿತ್ತು.

ಕೊಳ್ಳೇಗಾಲ ಅನ್ನಪೂರ್ಣ ಕಣ್ಣಿನ ಆಸ್ಪತ್ರೆ ಡಾ.ಉದಯ್ ಅವರು ತಪಾಸಣೆ ಮಾಡಿದರು. ತಪಾಸಣೆ ಶಿಬಿರದಲ್ಲಿ ಸುಮಾರು ಐವತ್ತಕ್ಕೂ ಹೆಚ್ಚು ಜನರಿಗೆ ಕಣ್ಣಿನ ಆರೋಗ್ಯ ತಪಾಸಣೆ. ಬಿಪಿ ಶುಗರ್ ತಪಾಸಣಾ ಮಾಡಿ ಸಲಹೆ ಸೂಚನೆಗಳನ್ನು ನೀಡಿದರು.



ಕಣ್ಣಿನ ಪರೀಕ್ಷಕರ ತಂಡ ಕಣ್ಣಿನ ಪರೀಕ್ಷೆ ಮಾಡಿ ತೊಂದರೆ ಇರುವ ರೋಗಿಗಳಿಗೆ ರಿಯಾಯಿತಿ ದರದಲ್ಲಿ ಕನ್ನಡಕವನ್ನು ನೀಡಲಾಯಿತು. ಹಾಗೂ ಸಾರ್ವಜನಿಕರು ಗ್ರಾಮಸ್ಥರು ಆಗಮಿಸಿ ತಪಾಸಣೆಗೆ ಒಳಪಟ್ಟು ಉಚಿತ ತಪಾಸಣಾ ಶಿಬಿರ ಶಿಬಿರದ ಸದುಪಯೋಗವನ್ನು ಪಡೆದುಕೊಂಡರು.

ಈ ಸಂದರ್ಭದಲ್ಲಿ ಹಾಲು ಉತ್ಪಾದಕರ ಸಂಘದ ಅಧ್ಯಕ್ಷರು ಎಂ.ಮಹದೇವ ಪ್ರಭು, ಉಪಾಧ್ಯಕ್ಷೆ ರತ್ನಮ್ಮ, ನಿರ್ದೇಶಕರಾದ ರೇವಣ್ಣ, ನಾಗಮಣಿ, ಪ್ರಭುಸ್ವಾಮಿ, ಜಗದೀಶ್, ಯೋಗೇಶ್, ಸಿದ್ದಪ್ಪ, ಮಹದೇವಪ್ಪ, ಜಡೆಸ್ವಾಮಿ, ಪುಟ್ಟಚೆನ್ನಪ್ಪ, ಶಿವಮೂರ್ತಿ, ಮುಖಂಡರು ರಾಜಪ್ಪ ಹಾಗೂ ಆಸ್ಪತ್ರೆ ಸಿಬ್ಬಂದಿ ಪವನ್, ಸೈಯದ್ ಜಾಕೀರ್ ಸೇರಿದಂತೆ ಇನ್ನಿತರರು ಇದ್ದರು.

# ಅಮಿತ್ ಶಾ ಹೇಳಿಕೆ ಖಂಡಿಸಿ ಇಂದು ಬೆಂಗಳೂರು ಚಲೋ

**ಚಿಕ್ಕಬಳ್ಳಾಪುರ:** ಸಂಸತ್ ಅಧಿವೇಶನದಲ್ಲಿ ಗೃಹ ಸಚಿವ ಅಮಿತ್ ಶಾ ಅವರ ಅಂಬೇಡ್ಕರ್ ಹೆಸರು ವ್ಯಸನ ಆಗಿದೆ.ಅದರ ಬದಲು ದೇವರ ನಾಮಸ್ಮರಣೆ ಮಾಡಿದರೆ ಸ್ವರ್ಗ ಪ್ರಾಪ್ತಿಯಾಗುತ್ತಿತ್ತು ಎಂಬ ಹೇಳಿಕೆಯನ್ನು ಖಂಡಿಸಿ ಇಂದು ಗುರುವಾರ ಬೆಂಗಳೂರು ಚಲೋ ಹಮ್ಮಿಕೊಳ್ಳಲಾಗಿದೆ ಎಂದು ದಸಂಸ ಸಾಂಸ್ಕೃತಿಕ ಸಂಚಾಲಕ ಬಿ.ವಿ ಆನಂದ್ ತಿಳಿಸಿದರು.

ಅಮಿತ್ ಶಾ ನಕಲಿ ಎನ್ ಕೌಂಟರ್ ಪ್ರಕರಣದಲ್ಲಿ ಗಡಿಪಾರಾದ ವ್ಯಕ್ತಿ. ಗೃಹ ಸಚಿವರು ಕೂಡಲೇ ರಾಜಿನಾಮೆ ಕೊಡಬೇಕು. ಅವರನ್ನು ಸಚಿವ ಸಂಪುಟ ಸ್ಥಾನದಿಂದ ವಜಾಗೊಳಿಸುವಂತೆ ಆಗ್ರಹಿಸಿ ಬೆಂಗಳೂರಿನಲ್ಲಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ. ಜಿಲ್ಲೆಯಿಂದ ದಲಿತ ಸಂಘಟನೆಗಳಿಂದ ಎರಡು ಸಾವಿರಕ್ಕೂ ಹೆಚ್ಚು ಜನ ಪಾಲ್ಗೊಳ್ಳುತ್ತಿದ್ದಾರೆ ಎಂದರು.

ಜಿಲ್ಲಾ ಸಂಚಾಲಕ ಬಿವಿ ಆನಂದ್, ತಾಲ್ಲೂಕು ಸಂಚಾಲಕ ಪಿಳ್ಳಪ್ಪ, ಸಂಘಟನಾ ಸಂಚಾಲಕರಾದ ಜಯಕುಮಾರ್, ನಡಿಪನ್ನ, ವಿ. ಅಶ್ವಥ್, ಮಾಜಿ ಸಂಚಾಲಕ ಅಂದಾರ್ಲಹಳ್ಳಿ ವೆಂಕಟೇಶ್ , ಮುಖಂಡರಾದ ಬಾಲಪ್ಪ, ಆವುಲಪ್ಪ, ಮಣಿ ಶ್ರೀನಿವಾಸ್, ದೇವರಾಜ್ ನಂದಿ ಹೋಬಳಿ ಸಂಚಾಲಕ ಪುರುಷೋತ್ತಮ, ಬಿ.ವಿ. ಗೋವಿಂದಪ್ಪ ಕನಕದಾಸ್, ತಿಪ್ಪನ್ನ ಮತ್ತು ಇತರರು ಉಪಸ್ಥಿತರಿದ್ದರು.

# ಜೀವರರಕ್ಷಕ ವಾಹನಗಳಿಗೂ ಕಂಟಕವಾದ ಒಕ್ಕಣೆ!

**ಚಾಮರಾಜನಗರ;** ಅಪಾಯ ಲೆಕ್ಕಿಸದೆ ತಾಲ್ಲೂಕಿನ ನಾನಾ ರಸ್ತೆಗಳ ಮೇಲೆ ವಿವಿಧ ಬೆಳೆಗಳ ಒಕ್ಕಣೆ ನಡೆಯುತ್ತಿದ್ದು, ವಾಹನ ಚಾಲಕರು, ಪ್ರಯಾಣಿಕರ ಸಂಚಾರಕ್ಕೆ ಕಂಟಕವಾಗುವುದರ ಜೊತೆಗೆ ಜೀವರಕ್ಷಕ ವಾಹನಗಳಿಗೂ ಅಪಾಯ ಎದುರಾದಂತಾಗಿದೆ.

ಜಿಲ್ಲೆಯ ಹಲವು ತಾಲ್ಲೂಕಿನಾದ್ಯಂತ ಈಗ ಭತ್ತ, ಹುರುಳಿ, ರಾಗಿ ಒಕ್ಕಣೆ ಜೋರಾಗಿದೆ. ಜಮೀನಿನಲ್ಲಿ ಕಣ ನಿರ್ಮಿಸಿ ಬೆಳೆ ರಾಶಿ ಮಾಡಿ, ಒಕ್ಕಣೆ ಮಾಡುತ್ತಿದ್ದ ರೈತರು ಅಲ್ಲಿಂದ ಧಾನ್ಯಗಳನ್ನು ಮನೆಗೆ ತರುತ್ತಿದ್ದರು. ಆದರೆ, ಇತ್ತೀಚಿನ ದಿನಗಳಲ್ಲಿ ರಸ್ತೆಗಳಲ್ಲೇ ಒಕ್ಕಣೆ ಮಾಡುವ ಸುಲಭ ಮಾರ್ಗ ಕಂಡುಕೊಂಡಿದ್ದಾರೆ.

ಕೆಲವು ಕಡೆಗಳಲ್ಲಿ ರೈತರು ಯಂತ್ರಗಳನ್ನು ಬಳಸಿಕೊಂಡು ಒಕ್ಕಣೆ ಮಾಡಿದರೆ, ಇನ್ನು ಕೆಲವು ಕಡೆಗಳಲ್ಲಿ ದೊಡ್ಡದಾದ ಟಾರ್ಪಲ್‌ಗಳಲ್ಲಿ ಒಕ್ಕಣೆ ಮಾಡುತ್ತಾರೆ. ಇನ್ನು ಕೆಲವರು ರಸ್ತೆಯ ಮಧ್ಯ ಭಾಗದಲ್ಲಿಯೇ ಭತ್ತ, ರಾಗಿ, ಹುರುಳಿ ಹಾಕಿ ವಾಹನಗಳು ಅದರ ಮೇಲೆ ಚಲಾಯಿಸುತ್ತಾರೆ. ಜನರು ಓಡಾಡುವ, ವಾಹನ ದಟ್ಟಣೆ ಇರುವ ರಸ್ತೆ ಮಧ್ಯದಲ್ಲೇ ಧಾನ್ಯ ಹಾಕಿ ಟ್ರಾಕ್ಟರ್ ನೆರವು ಬಳಸಿಕೊಳ್ಳುತ್ತಿದ್ದಾರೆ. ಇದರಿಂದಾಗಿ ರಸ್ತೆ ಅಪಘಾತಗಳೂ ಹೆಚ್ಚುತ್ತಿವೆ.

'ಯಂತ್ರೋಪಕರಣ ಅವಲಂಬಿಸಿದ ಮೇಲೆ ಕೆಲ ರೈತರು ಹೊಲದಲ್ಲಿ ಒಕ್ಕಣೆ ಕಣ ಮಾಡುವುದನ್ನು ಬಿಟ್ಟಿದ್ದಾರೆ. ಇದಲ್ಲದೆ ಉಳುಮೆ ಮಾಡಲು ಈಗ ಎತ್ತು, ದನ-ಕರು ಸಾಕುತ್ತಿಲ್ಲ. ಹೀಗಾಗಿ, ರಸ್ತೆಯ ಮೇಲೆ ಒಕ್ಕಣೆ ಮಾಡುತ್ತಿದ್ದಾರೆ' ಎಂದು ಊರಿನ ಕೆಲ ಹಿರಿಯರು ಹೇಳುತ್ತಾರೆ.

ಒಕ್ಕಣೆ ಮಾಡುವ ರೈತರು ಭತ್ತ, ರಾಗಿ ಹಾಗೂ ಹುರುಳಿಯಂಥ ಬೆಳೆಗಳನ್ನು ರಸ್ತೆಯಲ್ಲಿ ಎತ್ತರವಾಗಿ ಹಾಕುತ್ತಾರೆ. ಇವು ವಾಹನಗಳ ಚಕ್ರಕ್ಕೆ ಸಿಲುಕಿಕೊಳ್ಳುತ್ತವೆ. ಆಗ ಸವಾರರ ಗೋಳು ಕೇಳುವುದೇ ಬೇಡ. ಇನ್ನು ದ್ವಿಚಕ್ರ ವಾಹನಗಳಂತೂ ಮುಂದೆ ಸಾಗುವುದೇ ಕಷ್ಟ. ಧೈರ್ಯವಾಗಿ ಮುನ್ನುಗ್ಗಿದರೆ ಒಕ್ಕಣೆಯಿಂದ ಏಳುವ ದೂಳು ಕಣ್ಣಿಗೆ ಬೀಳುತ್ತದೆ. ದೂಳಿನಿಂದಾಗಿ ಮುಂದಿನ ಹಾದಿಯೂ ಸರಿಯಾಗಿ ಕಾಣುವುದಿಲ್ಲ ಎನ್ನುತ್ತಾರೆ ವಾಹನ ಸವಾರರು.





ಗ್ರಾಮಾಂತರದಲ್ಲೇ ಹೆಚ್ಚು: ಒಕ್ಕಣೆ ಮಾಡಲು ರೈತರು ಗ್ರಾಮಾಂತರ ಪ್ರದೇಶ ಹಾಗೂ ಹೆಚ್ಚು ಜನನಿಬಿಡ ಪ್ರದೇಶವಲ್ಲದ ರಸ್ತೆಗಳನ್ನೇ ಹೆಚ್ಚಾಗಿ ಬಳಸಿಕೊಳ್ಳುತ್ತಾರೆ. ತಾಲ್ಲೂಕಿನ ದಾಸನೂರು, ಮೇಲಾಜಿಪುರ, ಅಮಚವಾಡಿ ಅರಕಲವಾಡಿ ಸೇರಿದಂತೆ ವಿವಿಧ ಗ್ರಾಮಗಳ ರಸ್ತೆಗಳ ಮೇಲೆ ರಾಗಿ, ಭತ್ತ ಹಾಗೂ ಹುರುಳಿ ಸೇರಿದಂತೆ ಇತರ ಆಹಾರ ಧಾನ್ಯಗಳನ್ನು ಒಕ್ಕಣೆ ಮಾಡುತ್ತಿದ್ದಾರೆ.

ಕೆಲ ದಿನಗಳ ಹಿಂದೆ ಹುರುಳಿ ಸೆತ್ತೆಯ ಮೇಲೆ ತ್ರಿಚಕ್ರ ವಾಹನ ಚಲಿಸುತ್ತಿರುವಾಗ ಎಂಜಿನ್‌ಗೆ ಸಿಲುಕಿಕೊಂಡು ಬೆಂಕಿ ಕಾಣಿಸಿಕೊಂಡ ಉದಾಹರಣೆಗಳೂ ಇತ್ತೀಚಿಗೆ ಇದೆ. ಜೊತೆಗೆ ರಾತ್ರಿ ವೇಳೆಯಲ್ಲಿ ಒಕ್ಕಣೆ ಮಾಡಿ ಟಾರ್ಪಲ್ ಹಾಗೆ ರಸ್ತೆಯಲ್ಲಿಯೂ,ರಸ್ತೆ ಬದುವಿನಲ್ಲೂ ಮುಚ್ಚಿ ಹೋಗಿ ಅದರ ಮೇಲೆ ದ್ವಿಚಕ್ರ ವಾಹನ ಸವಾರನೊಬ್ಬ ಬಿದ್ದು ಗಾಯಗೊಂಡ ಘಟನೆಯೂ ವರದಿಯಾಗಿದೆ.

ತುರ್ತು ವಾಹನಕ್ಕೂ ಕಂಟಕ: ಗಾಯಾಳುಗಳು ಹಾಗೂ ಇತರ ಸಂದರ್ಭದಲ್ಲಿ ಆಸ್ಪತ್ರೆಗೆ ಕರೆ ತರುವಾಗ ರಸ್ತೆ ಒಕ್ಕಣೆಯಿಂದ ಪರದಾಡಬೇಕಾದ ಉದಾಹರಣೆ ಇದೆ. ಕೆಲವೊಮ್ಮೆ ಇತರ ಕಡೆಗಳಲ್ಲಿ ಬೆಂಕಿ ಕಾಣಿಸಿಕೊಂಡ ಉದಾಹರಣೆಯೂ ಇದೆ. ಹುರುಳಿ ಸತ್ತೆಯಿಂದ ಆಕ್ಸೆಲ್ ಸುತ್ತಿಕೊಂಡಾಗ ಇದನ್ನ ಬಿಡಿಸಲು ಗಂಟೆಗಟ್ಟಲೆ ಪರದಾಡಬೇಕಾದ ಸ್ಥಿತಿ ಎದುರಾಗುತ್ತದೆ.. ಆವಾಗ ವಾಹನದಲ್ಲಿ ಇರುವ ರೋಗಿಗಳ ಜೀವಕ್ಕೆ ಮಾರಕವಾದರೆ ಹೊಣೆಗಾರರು ಯಾರು? ಇದರಿಂದ ಕೆಟ್ಟ ಹೆಸರು ನಮಗೂ ಬರದೆ ಇರಲಾರದು ಎನ್ನುತ್ತಾರೆ ಚಾಲಕರು.

ಕೇವಲ ಒಂದು ಜಿಲ್ಲೆಯಲ್ಲಷ್ಟೆ ಅಲ್ಲ ಹಲವು ಜಿಲ್ಲೆಗಳಲ್ಲಿಯೂ ಇದೆ ಸಮಸ್ಯೆ ಇದೆ. ದಯಮಾಡಿ ಆಯಾಯ ಜಿಲ್ಲಾಡಳಿತ ಎಚ್ಚೆತ್ತರೆ ಅನಾಹುತವಾಗುವುದನ್ನ ತಪ್ಪಿಸಿ ಜನರ ಪ್ರಾಣ ರಕ್ಷಣೆಗೆ ಮುಂದಾಗಬೇಕಾಗಿದೆ. ಎಂದು ವಾಹನ ಸವಾರರು ಆಗ್ರಹಿಸಿದ್ದಾರೆ.

'ಕಣ ನಿರ್ಮಾಣಕ್ಕೆಂದು ಗ್ರಾಮೀಣಾಭಿವೃದ್ಧಿ ಇಲಾಖೆಯು ಸಹಾಯ ಧನ ಘೋಷಿಸಿದೆ. ಆದರೂ ಅದನ್ನು ಸರಿಯಾಗಿ ಬಳಕೆ ಮಾಡಿಕೊಳ್ಳುತ್ತಿಲ್ಲ. ಈಗಾಗಲೇ ನಿರ್ಮಿಸಿಕೊಂಡಿರುವ ಕಣಗಳೂ ಸದ್ಬಳಕೆಯಾಗುತ್ತಿಲ್ಲ. ಈ ಕುರಿತು ಅಧಿಕಾರಿಗಳು ಜಾಗೃತಿ ಮೂಡಿಸಬೇಕು. ಈ ಸಂಬಂಧ ಪೊಲೀಸರು ಸೂಕ್ತ ಕ್ರಮ ವಹಿಸಬೇಕಾಗಿದೆ.



# ಲಕ್ಕೂರು ಶಾಲೆಯಲ್ಲಿ ಮಕ್ಕಳ ವಿಶೇಷ ಗ್ರಾಮ ಸಭೆ



**ಮಾಲೂರು:** ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಸಾಧ್ಯವಾಗುವ ಕಾರ್ಯಗಳನ್ನು ಪಂಚಾಯಿತಿ ಮಟ್ಟದಲ್ಲಿ ಬಗೆಹರಿಸಲು ಸಾಧ್ಯ ಎಂದು ಗ್ರಾ.ಪಂ.ಅಭಿವೃದ್ಧಿ ಅಧಿಕಾರಿ ಅಮರೇಶ್ ಬಾಬು ಹೇಳಿದರು.

ತಾಲ್ಲೂಕಿನ ಲಕ್ಕೂರಿನ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಆವರಣದಲ್ಲಿ ಲಕ್ಕೂರು ಗ್ರಾಮ ಪಂಚಾಯಿತಿ ವತಿಯಿಂದ ಮಕ್ಕಳ ವಿಶೇಷ ಗ್ರಾಮ ಸಭೆಯಲ್ಲಿ ಮಾತನಾಡಿದರು. .

ಈ ವಿಶೇಷ ಗ್ರಾಮ ಸಭೆಯಲ್ಲಿ ಶಾಲೆಯ ಆವರಣದಲ್ಲಿ ವಿದ್ಯುತ್ ದೀಪಗಳ ಗಳ ಅಳವಡಿಕೆ, ಶಾಲೆಯ ವಿದ್ಯಾರ್ಥಿಗಳಿಗೆ ಡೈನಿಂಗ್ ಹಾಲ್, ಶಾಲೆಯ ಆವರಣದಲ್ಲಿ ಬೆಳೆದಿರುವ ಗಿಡಗಳನ್ನು ತೆರವುಗೊಳಿಸಲು ಕ್ರಮ ಹಾಗೂ ಶಾಲೆಗೆ ಇಂಗು ಗುಂಡಿ ನಿರ್ಮಿಸಲು ಮತ್ತು ಶಾಲೆಗೆ ಸಮರ್ಪಕ ನೀರು ಸರಬರಾಜು ಮಾಡಲು ಇನ್ನಿತರ ಕುಂದು ಕೊರತೆಗಳ ಬಗ್ಗೆ ಕ್ರಮ ವಹಿಸುವಂತೆ ವಿದ್ಯಾರ್ಥಿಗಳು ಮಾಹಿತಿಯನ್ನು ಒದಗಿಸಿದರು.

ಕಾರ್ಯಕ್ರಮದಲ್ಲಿ ಶಾಲೆಯ ಕುಂದು - ಕೊರತೆಗಳ ಬಗ್ಗೆ ವಿದ್ಯಾರ್ಥಿಗಳೊಂದಿಗೆ, ಸಂವಾದವನ್ನು ನಡೆಸಿ,

ವಿದ್ಯಾರ್ಥಿಗಳಿಂದ, ಶಾಲೆಯ ಕುಂದು ಕೊರತೆಗಳ ಬಗ್ಗೆ ಮಾಹಿತಿಯನ್ನು ಪಡೆದು ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಸಾಧ್ಯವಾಗುವ ಕಾರ್ಯಗಳನ್ನು ಪಂಚಾಯಿತಿ ಮಟ್ಟದಲ್ಲಿ ಬಗೆಹರಿಸುತ್ತೇವೆ. ಹಾಗೂ ಇನ್ನುಳಿದ ಕಾರ್ಯಗಳ ಬಗ್ಗೆ ಉನ್ನತ ಮಟ್ಟದ ಪ್ರಾಧಿಕಾರದೊಂದಿಗೆ ಅಂದರೆ ಕ್ಷೇತ್ರ ಶಿಕ್ಷಣಾಧಿಕಾರಿಯವರ ಕಡೆಯಿಂದಾಗಲಿ, ಜಿಲ್ಲಾ ಪಂಚಾಯಿತಿ ಕಡೆಯಿಂದಾಗಲಿ, ಸಮನ್ವಯ ಸಾಧಿಸಿ ಕುಂದು ಕೊರತೆಗಳನ್ನು ಬಗೆಹರಿಸಲಾಗುವುದು ಎಂದರು.

ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಎ. ಚೈತ್ರ, ಕಾರ್ಯದರ್ಶಿ ತ್ಯಾಗರಾಜ್, ಬಿಲ್ ಕಲೆಕ್ಟರ್ ಪಿ. ಶ್ರೀನಾಥ್, ಹಾಗೂ ಲಕ್ಕೂರು ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯರಾದವೇಣು ಗೋಪಾಲ್, ಶಿಕ್ಷಕರಾದ ಸರಳ, ಲಕ್ಷ್ಮೀದೇವಮ್ಮ, ನಾಗಮಣಿ, ಚಂದ್ರಮ್ಮ,ಭಾಗ್ಯಲತಾ,ಜ್ಯೋತಿ,ಸೋಮಶೇಖರ್, ರಾಜೇಶ್ವರಿ, ಮಂಜುಳಾ. ಹಾಗೂ ಉರ್ದು ಶಾಲೆಯ ಮುಖ್ಯ ಶಿಕ್ಷಕರಾದ ಯಾಸ್ಮೀನ್ ಸುಲ್ತಾನ್, ಅಂಗನವಾಡಿ ಕಾರ್ಯಕರ್ತರಾದ ಹೇಮಲತಾ,ಗುರುಮೂರ್ತಮ್ಮ, ಹೇಮಾ. ಸೇರಿದಂತೆ ಶಾಲೆಯ ವಿದ್ಯಾರ್ಥಿಗಳು, ಉಪಸ್ಥಿತರಿದ್ದರು.

# ಶ್ರೀಶಿವಕುಮಾರ ಮಹಾಸ್ವಾಮಿಗಳ ಪುಣ್ಯಸ್ಮರಣೆ

**ಶಿಡ್ಲಘಟ್ಟ:** ತಾಲ್ಲೂಕಿನ ಕೊತ್ತನೂರಿನಲ್ಲಿ ವೀರಶೈವ ಲಿಂಗಾಯತ ಬಳಗದ ಆಶ್ರಯದಲ್ಲಿ ಶ್ರೀ ಶಿವಕುಮಾರ ಮಹಾಸ್ವಾಮಿಗಳ ದಾಸೋಹ ದಿನ ಹಾಗೂ ಪುಣ್ಯಸ್ಮರಣೆಯನ್ನು ಶ್ರದ್ಧಾಭಕ್ತಿಯಿಂದ ಆಚರಿಸಲಾಯಿತು.

ಶ್ರೀಶಿವಲಿಂಗೇಶ್ವರ ಸ್ವಾಮಿ ದೇವಾಲಯದಲ್ಲಿ ಮಹಾಸ್ವಾಮಿಗಳಿಗೆ ರುದ್ರಾಭಿಷೇಕ ಸೇವೆ ಸಲ್ಲಿಸಿದ ನಂತರ, ಅವರ ಭಾವಚಿತ್ರದೊಂದಿಗೆ ಜಾನಪದ ತಂಡದ ವೀರಗಾಸೆ ಸಹಿತ ಶರಣ ಭಕ್ತಾದಿಗಳು ಭಾವಪೂರ್ಣ ಮೆರವಣಿಗೆ ನಡೆಸಿದರು.

ಈ ಮೆರವಣಿಗೆಯು ದೇವಾಲಯದಿಂದ ಊರಿನ ಪ್ರಮುಖ ಬೀದಿಗಳ ಮೂಲಕ ಸಾಗಿತು.

ಕಾರ್ಯಕ್ರಮದ ಅಂಗವಾಗಿ ಶ್ರೀಮಹಾಸ್ವಾಮಿಗಳ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ, ಭಕ್ತಾದಿಗಳಿಗಾಗಿ ಅನ್ನದಾಸೋಹವನ್ನು ಆಯೋಜಿಸಲಾಯಿತು.

ಗ್ರಾಮಸ್ಥರು, ವೀರಶೈವ ಲಿಂಗಾಯತ ಸಮುದಾಯದ ಸದಸ್ಯರು ಹಾಗೂ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

# ಸಿಇಐಆರ್ ಪೋರ್ಟಲ್‌ನಿಂದ ಫೋನ್‌ಗಳ ಪತ್ತೆ



**ಮಾಲೂರು:** ರಾಜ್ಯದಲ್ಲಿ ಹೊಸದಾಗಿ ಜಾರಿ ಮಾಡಿರುವ ಸಿಇಐಆರ್ ಪೋರ್ಟಲ್‌ನಿಂದ ಕಳೆದು ಹೋದ ಹಾಗೂ ಕಳ್ಳತನವಾಗಿರುವ ಮೊಬೈಲ್ ಫೋನ್‌ಗಳ ಪತ್ತೆ ಕಾರ್ಯಕ್ಕೆ ಅನುಕೂಲವಾಗುತ್ತಿದ್ದು, ಫೋನ್ ಕಳೆದುಕೊಂಡವರಿಗೆ ಹುಡುಕಿ ವಾಪಸ್ ಕೊಡುವ ಕೆಲಸ ಮಾಲೂರು ಪೊಲೀಸರು ಮಾಡಿದ್ದು ಫೋನ್ ಹುಡುಕಿ ಕೊಟ್ಟಿದ್ದಕ್ಕೆ ಜನತೆ ಹರ್ಷ ವ್ಯಕ್ತಪಡಿಸುತ್ತಿದ್ದಾರೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ನಿಖಿಲ್ ಹೇಳಿದರು.

ಕೋಲಾರ ಜಿಲ್ಲೆ ಮಾಲೂರು ತಾಲ್ಲೂಕಿನ ಕಳೆದ ಎರಡು ವರ್ಷಗಳಿಂದ ಕಳೆದುಕೊಂಡಿದ್ದ ಅಥವಾ ಕಳ್ಳತನವಾಗಿದ್ದ ಫೋನ್ ಗಳನ್ನು ಠಾಣೆಯ ಸಿಇಐಆರ್ ಪೋರ್ಟಲ್ ಸಹಾಯದಿಂದ ಸುಮಾರು 7 ಲಕ್ಷ ಬೆಲೆ ಬಾಳುವ 40 ಕ್ಕೂ ಹೆಚ್ಚು ಫೋನ್‌ಗಳನ್ನ ಮಾಲೂರು ಇನ್ಸ್‌ಪೆಕ್ಟರ್ ವಸಂತ್ ರವರ ನೇತೃತ್ವದಲ್ಲಿ ಪತ್ತೆ ಹಚ್ಚಿದ್ದು ಕಳೆದುಕೊಂಡ ಫೋನ್ ಸಿಗೋದೆ ಇಲ್ಲ ಅಂತ ಅಂದುಕೊಂಡಿದ್ದ ಜನರಿಗೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ನಿಖಿಲ್ ರವರು ಫೋನ್ ಕಳೆದುಕೊಂಡವರಿಗೆ ಹಸ್ತಾಂತರ ಮಾಡಿದರು,

ಪ್ರತಿ ನಿತ್ಯ ಸಾರ್ವಜನಿಕರು ಜಾಸ್ತಿ ಬಳಸುವಂತ ವಸ್ತು ಮೊಬೈಲ್ ಫೋನ್ ನಿಮ್ಮ ಫೋನ್ ಎನಾದ್ರು ಕಳೆದೋದಾಗ ಸಾರ್ವಜನಿಕರು ಸಿಇಐಆರ್ ಪೋರ್ಟಲ್ ಸಮರ್ಪಕವಾಗಿ ಉಪಯೋಗ ಮಾಡಿದಾಗ ಪೋಲಿಸರು ನಿಮ್ಮ ಫೋನ್ ಯಾವ ರಾಜ್ಯದಲ್ಲಿದ್ರೂ ನಮ್ಮ ಸಿಬ್ಬಂದಿಯನ್ನು ಕಳುಹಿಸಿ ನಾವು ಪತ್ತೆ ಹಚ್ಚಿ ನಿಮಗೆ ಹಿಂದಿರುಗಿಸುತ್ತೇವೆ,

ಇತ್ತೀಚೆಗೆ ದಿನಗಳಲ್ಲಿ ಮೊಬೈಲ್ ಫೋನ್ ನಿಂದಲೇ ಕಳ್ಳತನಗಳ ಹೆಚ್ಚಾಗಿದ್ದು ಆಪ್ ವೆಬ್ಸೈಟ್ ವಾಟ್ಸಾಪ್ ಟೆಲಿಗ್ರಾಮ್ ನಲ್ಲಿ ಮೇಸೆಜ್ ಬಂದಾಗ ಡೌನ್‌ಲೋಡ್ ಮತ್ತು ಇನ್ಸಾಲ್ ಮಾಡಬೇಡಿ ಇಂತಹ ಆಪ್ ಗಳಿಂದ ಹಣ ಕಳೆದುಕೊಳ್ಳುತ್ತಿರುವ ಬಗ್ಗೆ ಸೈಬರ್ ಕ್ರೈಂ ನಲ್ಲಿ ಪ್ರಕರಣ ದಾಖಲಾಗುತ್ತಿದ್ದು ಸಾರ್ವಜನಿಕರು ಎಚ್ಚರ ವಹಿಸಿ ದೂರವಿರಿ ಎಂದು ಸೂಚನೆ ನೀಡಿದರು.

ಇನ್ನೂ ಜಿಲ್ಲೆಯಲ್ಲಿ ಬೆಟ್ಟಿಂಗ್ ದಂಧೆಗೆ ಕಡಿವಾಣ ಹಾಕಲು ಬೆಟ್ಟಿಂಗ್ ಆಪ್ ನಿಷ್ಕ್ರಿಯಗೊಳಿಸಿ ಬುಕ್ಕಿಗಳ ಮೇಲೆ ಕಾನೂನು ಕ್ರಮ ಜರುಗಿಸುತ್ತೇವೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಪೋಲೀಸ್ ಇನ್ಸ್‌ಪೆಕ್ಟರ್ ವಸಂತ್, ಸಬ್ ಇನ್ಸ್‌ಪೆಕ್ಟರ್ ವರಲಕ್ಷ್ಮಮ್ಮ, ಮುನೇಗೌಡ, ಮುಖ್ಯ ಪೇದೆ ಅಶೋಕ್, ಸಿಬ್ಬಂದಿ ಮೋಹನ್, ಯಶವಂತರಾವ್ ಹಾಗೂ ಇನ್ನೂ ಸಿಬ್ಬಂದಿಗಳು ಹಾಜರಿದ್ದರು,

# ಕಬಡ್ಡಿ ಚಾಂಪಿಯನ್ಸ್; ವಿಜೇತರಿಗೆ ಅಭಿನಂದನೆ

**ಕೆ.ಆರ್.ಪೇಟೆ:** 2024-25ನೇ ಸಾಲಿನಲ್ಲಿ ಏಷ್ಯನ್ ಫೆಡರೇಷನ್ ಗೇಮ್ಸ್‌ನಲ್ಲಿ ಚಿನ್ನದ ಪದಕ ಪಡೆದ ತಾಲ್ಲೂಕಿನ ಮೂವರು ವಿದ್ಯಾರ್ಥಿಗಳನ್ನು ಶಾಸಕ ಹೆಚ್.ಟಿ.ಮಂಜು ಅಭಿನಂದಿಸಿದರು.

ನಂತರ ಮಾತನಾಡಿದ ಅವರು ಕಿರಿಯ ವಯಸ್ಸಿನಲ್ಲಿಯೇ ತಾಲ್ಲೂಕಿನ ಕೀರ್ತಿಪತಾಕೆಯನ್ನು ಮುಗಿಲೆತ್ತರಕ್ಕೆ ಹಾರಿಸಿ ನೇಪಾಳದ ಕಠ್ಮಂಡುವಿನಲ್ಲಿ ದಿನಾಂಕ 09-01-2025 ರಿಂದ 11-01-2025 ರವರೆಗೆ ನಡೆದ 55 ಕೆ.ಜಿ ವಿಭಾಗದ ಕಬ್ಬಡ್ಡಿ ಚಾಂಪಿಯನ್ ಶಿಫ್‌ನಲ್ಲಿ ಸರ್ಕಾರಿ ಪದವಿಪೂರ್ವ ಕಾಲೇಜಿನ ವಿದ್ಯಾರ್ಥಿ ಎಸ್.ವಿ.ದಿನೇಶ್, ಆಶೀರ್ವಾದ್ ಶಾಲೆಯ ಆರ್.ರಾಕೇಶ್ ಹಾಗೂ ಬೂಕನಕೆರೆ ಶಾಲೆಯ ಡಿ.ಆರ್.ವರ್ಷ ಇವರುಗಳು ರಾಜ್ಯವನ್ನು ಪ್ರತಿನಿಧಿಸಿ ಚಿನ್ನದ ಪದಕಗಳಿಸಿರುವುದು ಸಂತಸ ತಂದಿದೆ. ಸತತ ಪರಿಶ್ರಮ ಮತ್ತು ನಿರಂತರ ಅಭ್ಯಾಸದಿಂದಾಗಿ ಈ ಸಾಧನೆ ಮಾಡಿದ್ದು ಇವರಿಗೆ ಉತ್ತಮವಾಗಿ ತರಬೇತಿ ನೀಡಿದ ರವಿಕಿರಣ್ ಈ ಪ್ರತಿಭೆಗಳು ಅನಾವರಣಗೊಳ್ಳಲು ಸಹಕಾರ ನೀಡಿದ್ದಾರೆ.

ಕ್ರೀಡೆ ಮಾನವನಿಗೆ ದೈಹಿಕ ಬೆಳವಣಿಗೆಯ ಜೊತೆಗೆ ಬೌದ್ಧಿಕ ಬೆಳವಣಿಗೆಗೂ ಸಹಕಾರಿಯಾಗಲಿದ್ದು ಮುಂದಿನ ವಿದ್ಯಾಭ್ಯಾಸಕ್ಕೂ ಕ್ರೀಡಾ ಕೋಟಾದ ಅಢಿಯಲ್ಲಿ ಉನ್ನತ ವ್ಯಾಸಂಗಕ್ಕೆ ಅವಕಾಶ ನೀಡಲಾಗಿದೆ. ಮಕ್ಕಳು ಇದನ್ನು ಉಪಯೋಗಿಸಿಕೊಂಡು ಉತ್ತಮ ಸಾಧನೆ ಮಾಡುವ ಮೂಲಕ ತಾಲ್ಲೂಕು, ಜಿಲ್ಲೆಗೆ ಕೀರ್ತಿ ತರಬೇಕು ಎಂದು ಮನವಿ ಮಾಡಿದರು.



# ದಾಸೋಹದ ಪರಿಕಲ್ಪನೆ ಭಾರತದ ಸಂಸ್ಕೃತಿಯ ಪರಂಪರೆ

ಚಾಮರಾಜನಗರ: ದಾಸೋಹದ ಪರಿಕಲ್ಪನೆ ಭಾರತದ ಸಂಸ್ಕೃತಿ ಪರಂಪರೆಯ ವಿಶೇಷ ಗುಣ. ಮಾನವೀಯ ಮೌಲ್ಯದ ಶ್ರೇಷ್ಠತೆಯ ಸಂಕೇತವಾಗಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ತಾಲೂಕು ಅಧ್ಯಕ್ಷರು, ಸಂಸ್ಕೃತಿ ಚಿಂತಕರಾದ ಸುರೇಶ್ ಎನ್.ಋಗ್ವೇದಿ ತಿಳಿಸಿದರು.

ಅವರು ಕನ್ನಡ ಸಾಹಿತ್ಯ ಪರಿಷತ್ತಿನ ಸಭಾಂಗಣದಲ್ಲಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ಹಮ್ಮಿಕೊಂಡಿದ್ದ ದಾಸೋಹ ದಿನ ಹಾಗೂ ಡಾ. ಶ್ರೀ ಶಿವಕುಮಾರ ಸ್ವಾಮೀಜಿಯವರ ಆರನೇ ಪುಣ್ಯಸ್ಮರಣೆಯ ಕಾರ್ಯಕ್ರಮದಲ್ಲಿ ಮಾತನಾಡುತ್ತ ಸಿದ್ದಗಂಗಾ ಮಠದ ಶಿವಕುಮಾರ ಸ್ವಾಮೀಜಿಯವರ ಸುಧೀರ್ಘ ಜೀವನ, ಬದುಕು ಅವರ ಮೌಲ್ಯಗಳು ವಿಶ್ವದ ಮಾನವೀಯ ಜನಾಂಗಕ್ಕೆ ಸದಾ ಕಾಲ ಮಾದರಿ ಹಾಗೂ ಸ್ಫೂರ್ತಿ ಆಗಿದೆ. ಸ್ವಾಮೀಜಿಯವರ ಶೈಕ್ಷಣಿಕ, ಆಧ್ಯಾತ್ಮಿಕ, ಸಾಮಾಜಿಕ ಸಾಂಸ್ಕೃತಿಕ ಮತ್ತು ವಿಚಾರಪೂರಿತ ಚಿಂತನೆಗಳು ಕೋಟಿ ಕೋಟಿ ಭಾರತೀಯರಿಗೆ ಸದಾ ಕಾಲ ಮಾರ್ಗದರ್ಶನವನ್ನು ನೀಡಿದೆ. ಮನುಷ್ಯ ಹೇಗೆ ಬದುಕಬೇಕು ಸಮಾಜಕ್ಕೆ ಸ್ಪಂದಿಸುವ ಗುಣ ಮತ್ತು ಹಸಿದ ಜೀವಿಗಳಿಗೆ ಆಹಾರ ನೀಡಿ ಎಲ್ಲ ಕ್ಷೇತ್ರಗಳಲ್ಲೂ ಮಾನವನ ಬದುಕು ಹಸನಾಗಿ ಸಮಾಜಕ್ಕೆ ಆತ ಉತ್ತಮ ಮೌಲ್ಯಗಳ ಸದ್ಗುಣವಂತನಾಗಿ ಬೆಳೆಯಲು ಅವಕಾಶ ನೀಡಿ ಜೀವಂತಿಕೆಯನ್ನು ತಂದುಕೊಟ್ಟ ಮಹಾ ಗುರುಗಳು. ದಾಸೋಹ ದಿನದಂದು ಅವರ ಸ್ಮರಣೆ ಆಗುತ್ತಿರುವುದು ಹೆಮ್ಮೆಯ ವಿಷಯ. ವಿಶ್ವಕ್ಕೆ ಭಾರತೀಯ ಮಹಾನ್ ದಾರ್ಶನಿಕರು, ಚಿಂತಕರು, ಯೋಗಿಗಳು ,ಋಷಿ ಪರಂಪರೆಯ ಸಾತ್ವಿಕ ಮನಸ್ಥಿತಿಯ ಗುರುಗಳ ಬಹುದೊಡ್ಡ ಪರಂಪರೆ ಇದೆ .ಅವರೆಲ್ಲರ ಮಾರ್ಗದರ್ಶನವೇ ನಮ್ಮೆಲ್ಲರಿಗೂ ದಾರಿದೀಪವಾಗಿದೆ .ಲಕ್ಷಾಂತರ ಮಕ್ಕಳ ಶಿಕ್ಷಣಕ್ಕೆ ಭದ್ರಬುನಾದಿ ಹಾಕಿ ,ಆಧ್ಯಾತ್ಮಿಕ ಮೌಲ್ಯಗಳನ್ನು ಸದೃಢವಾಗಿ ಸಮಾಜಕ್ಕೆ ಅರ್ಪಿಸಿದ ಮಹಾಯೋಗಿ ಎಂದು ತಿಳಿಸಿ ಅವರ ಕಾಲಘಟ್ಟದಲ್ಲಿ ನಾವೆಲ್ಲರೂ ಅವರ ಆಶೀರ್ವಾದ ಪಡೆದಿರುವುದೇ ನಮ್ಮ ಸಂತೋಷಕ್ಕೆ ಕಾರಣವಾಗಿದೆ ಎಂದು ತಿಳಿಸಿದರು .ಕನ್ನಡ ಸಾಹಿತ್ಯ ಪರಿಷತ್ತು ಅವರ ಕೊಡುಗೆಗಳನ್ನು ಸದಾ ಕಾಲ ಸ್ಮರಿಸುವ ಮೂಲಕ ಸಮಾಜಕ್ಕೆ ತಿಳಿಸುವ ಕಾರ್ಯವನ್ನು ಮಾಡುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದು ತಿಳಿಸಿದರು.

ತಮಿಳು ಸಂಘದ ಅಧ್ಯಕ್ಷರಾದ ಜಗದೀಶನ್ ಮಾತನಾಡಿ ಸಿದ್ದಗಂಗಾ ಮಠದ ಸ್ವಾಮೀಜಿಯವರು ಚಾಮರಾಜನಗರಕ್ಕೆ ಹಲವಾರು ಭಾರಿ ಭೇಟಿ ನೀಡಿ ಶಿಷ್ಯ ಪರಂಪರೆಯನ್ನು ಆಶೀರ್ವದಿಸಿರುವುದು ನಮ್ಮೆಲ್ಲರ ಪುಣ್ಯ. ಅವರ ದಾಸೋಹ ಮರೆಯಲಾಗದು .ಅವರನ್ನು ಸ್ಮರಿಸುವ ಮೂಲಕ ಕನ್ನಡ ಸಾಹಿತ್ಯ ಪರಿಷತ್ತು ಉತ್ತಮ ಸಂದೇಶವನ್ನು ಸಮಾಜಕ್ಕೆ ನೀಡಿದೆ ಎಂದು ತಿಳಿಸಿದರು.

ಬರಹಗಾರ ಎಸ್ ಲಕ್ಷ್ಮೀನರಸಿಂಹ ಮಾತನಾಡಿ ಸಿದ್ದಗಂಗಾ ಶ್ರೀಗಳು ಹಲವು ದೃಢ ನಿರ್ಧಾರದ ಮೂಲಕ ಶ್ರೀಮಠವನ್ನು ಬೆಳೆಸಿ, ಲಕ್ಷಾಂತರ ವಿದ್ಯಾರ್ಥಿಗಳ ಬದುಕಿಗೆ ದಾರಿದೀಪವಾದವರು. ವ್ಯಕ್ತಿಯ ವ್ಯಕ್ತಿತ್ವ, ಜೀವನದ ಹಾದಿ ಪ್ರತಿಯೊಬ್ಬರಲ್ಲಿಯೂ ಪ್ರೇರಣೆಯನ್ನು ನೀಡುತ್ತದೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಶ್ರೀಮತಿ ಸರಸ್ವತಿ, ರವಿಚಂದ್ರ ಪ್ರಸಾದ್ , ಬಿಕೆ ಆರಾಧ್ಯ, ಶಿವಲಿಂಗ ಮೂರ್ತಿ, ಲೋಕೇಶ್, ಕಾರ್ ಕುಮಾರ್ ಉಪಸ್ಥಿತರಿದ್ದರು.

# ಸಹಕಾರ ಸಂಘಕ್ಕೆ ಅಧ್ಯಕ್ಷ-ಉಪಾಧ್ಯಕ್ಷರ ಆಯ್ಕೆ



**ಶಿಡ್ಲಘಟ್ಟ:** ತಾಲ್ಲೂಕಿನ ತಿಮ್ಮನಾಯಕನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹಲಗುರ್ಕಿ ಗ್ರಾಮದ ಹಾಲು ಉತ್ಪಾದಕರ ಸಹಕಾರ ಸಂಘಕ್ಕೆ ನಡೆದ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಚುನಾವಣೆಯಲ್ಲಿ ಜೆಡಿಎಸ್ ಬೆಂಬಲಿತ ಅಧ್ಯಕ್ಷರಾಗಿ ಮಾರಪ್ಪರೆಡ್ಡಿ ಮತ್ತು ಉಪಾಧ್ಯಕ್ಷರಾಗಿ ಬೈರಾರೆಡ್ಡಿ ಆಯ್ಕೆಯಾದರು.

ಆಯ್ಕೆಯಾದ ನೂತನ ಅಧ್ಯಕ್ಷ, ಉಪಾಧ್ಯಕ್ಷ ಮತ್ತು ನಿರ್ದೇಶಕರನ್ನು ಶಾಸಕರಾದ ಬಿ.ಎನ್. ರವಿಕುಮಾರ್ ಅವರ ಸ್ವಗೃಹದಲ್ಲಿ ಸನ್ಮಾನಿಸಿ ಮಾತನಾಡಿ

ಸಹಕಾರ ಸಂಘವನ್ನು ಪಕ್ಷಾತೀತವಾಗಿ ಸಹಕಾರ ಸಂಘವನ್ನು ಉತ್ತಮ ರೀತಿಯಲ್ಲಿ ನಡೆಸಿ ರೈತರಿಗೆ ನೆರವಾಗುವಂತೆ ತಿಳಿಸಿದರು.

ಈ ಸಂದರ್ಭದಲ್ಲಿ ನಿರ್ದೇಶಕರುಗಳಾದ ಮಂಜುಳಮ್ಮ, ಲಲಿತಮ್ಮ,ಚಿಕ್ಕನಾರಾಯಣಪ್ಪ, ಕೃಷ್ಣರಾವ್,ಚಿಕ್ಕಪ್ಪ, ನಾರಾಯಣಸ್ವಾಮಿ, ಹಾಗೂ ಮುಖಂಡರಾದ ಜಯರಾಮರೆಡ್ಡಿ,ಜೀವಿಕಾ ಮುನಿಯಪ್ಪ,

ಶಿವಕುಮಾರ್ ಬಾವರೆಡ್ಡಿ,ಸುಬ್ಬಾರೆಡ್ಡಿ, ಮುನಿಕೃಷ್ಣ,ಈರಪ್ಪ, ಶ್ರೀರಾಮರೆಡ್ಡಿ,ಶ್ರೀಕಾಂತ್, ನವೀನ್ ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು.

# ಅಕ್ರಮವಾಗಿ ಪಡಿತರ ಅಕ್ಕಿ ಸಾಗಣೆ: ಇಬ್ಬರ ಬಂಧನ

**ಕೊಳ್ಳೇಗಾಲ:** ತಾಲ್ಲೂಕಿನ ಕಿಂಕಳ್ಳಿ - ಕ್ರಾಸ್ ಬಳಿ ಅಕ್ರಮವಾಗಿ ಪಡಿತರ ಅಕ್ಕಿ ಸಾಗಿಸುತ್ತಿದ್ದ ಇಬ್ಬರು ವ್ಯಕ್ತಿಗಳನ್ನು ಮಾಲು ಸಮೇತ ಪೊಲೀಸರು ಬಂಧಿಸಿದ್ದಾರೆ.

ಯಳಂದೂರು ತಾಲೂಕಿನ ಮದ್ದೂರು ಗ್ರಾಮದ ಅಸ್ಲಾಂ ಪಾಷಾ ಹಾಗೂ ಕೊಳ್ಳೇಗಾಲ ತಾಲೂಕಿನ ಮುಳ್ಳೂರು ಗ್ರಾಮದ ನಿವಾಸಿ ಸುದೀಪ್ ಬಂಧಿತ ಆರೋಪಿಗಳು. ಬಂಧಿತರಿಂದ ಏಳು ಚೀಲಗಳಲ್ಲಿ ತುಂಬಲಾಗಿದ್ದ 444 ಕೆ.ಜಿ ಅಕ್ಕಿಯನ್ನು ವಶಪಡಿಸಿಕೊಳ್ಳಲಾಗಿದೆ.

ಆರೋಪಿಗಳು ಅಕ್ರಮ ಪಡಿತರ ಸಾಗಿಸುತ್ತಿದ್ದು ಆಟೋ ಒಂದರಲ್ಲಿ ಅಕ್ರಮವಗಿ ಪಡಿತರ ತುಂಬಿಕೊಂಡು ಅಕ್ಕಿಯನ್ನು ಯಳಂದೂರು ತಾಲೂಕಿನ ಅಗರ ಮತ್ತು ಕಿಂಕಳ್ಳಿ ಗ್ರಾಮಗಳ ನಡುವೆ ಹಾದು ಹೋಗುವ ಬೈಪಾಸ್ ರಸ್ತೆಯ ಕ್ರಾಸ್ ಬಳಿ ದಾಳಿ ನಡೆಸಿದ್ದಾರೆ.

ಪಿಎಸ್ಐ ಕರಿಬಸಪ್ಪ ಮತ್ತು ಆಹಾರ ನಿರೀಕ್ಷಕರಾದ ಬಿಸಲಯ್ಯ, ಡಿವೈಎಸ್ಪಿ ಅಪರಾಧ ಪತ್ತೆ ದಳದ ಕಿಶೋರ್, ರವಿ, ಶಿವಕುಮಾರ್, ವೆಂಕಟೇಶ್, ಅಗರ ಮಾಂಬಳ್ಳಿ ಪೊಲೀಸ್ ಠಾಣೆಯ ಸಿಬ್ಬಂದಿ ಎಸ್.ಪಿ ಡ್ಯೂಟಿ ಶಿವಕುಮಾರ್, ಪರಶಿವಮೂರ್ತಿ, ಬಸವರಾಜ್ ಗುತ್ತಲ್ ಇವರ ತಂಡ ದಾಳಿ ಮಾಡಿ ಮಾಲು ಸಮೇತ ಆರೋಪಿಗಳನ್ನು ವಶಕ್ಕೆ ಪಡೆದಿದ್ದಾರೆ.ಯಳಂದೂರು ತಾಲೂಕಿನ ನ್ಯಾಯಾಲಯದ ಮುಂದೆ ಹಾಜರುಪಡಿಸಿದಾಗ ನ್ಯಾಯಾಧೀಶರು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ ಎಂದು ಅಗರ-ಮಾಂಬಳ್ಳಿ ಠಾಣೆಯ ಅಧಿಕಾರಿಗಳು ತಿಳಿಸಿದ್ದಾರೆ.

# ಜ.26ರಂದು ನಗರದಲ್ಲಿ 76ನೇ ಗಣರಾಜ್ಯೋತ್ಸವ ಕಾರ್ಯಕ್ರಮ

**ಚಾಮರಾಜನಗರ:** ಜಿಲ್ಲಾಡಳಿತದ ವತಿಯಿಂದ 76ನೇ ಗಣರಾಜ್ಯೋತ್ಸವ ಕಾರ್ಯಕ್ರಮವನ್ನು ಜನವರಿ 26ರಂದು ಬೆಳಿಗ್ಗೆ 9 ಗಂಟೆಗೆ ನಗರದ ಡಾ. ಬಿ.ಆರ್ ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಪಶುಸಂಗೋಪನೆ, ರೇಷ್ಮೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ. ವೆಂಕಟೇಶ್ ಅವರು ಧ್ವಜಾರೋಹಣ ನೆರವೇರಿಸುವರು. ಎಂ.ಎಸ್.ಐ.ಎಲ್ ಅಧ್ಯಕ್ಷರು ಹಾಗೂ ಶಾಸಕರಾದ ಸಿ. ಪುಟ್ಟರಂಗಶೆಟ್ಟಿ ಅವರು ಅಧ್ಯಕ್ಷತೆ ವಹಿಸುವರು. ಲೋಕಸಭಾ ಸದಸ್ಯರಾದ ಸುನೀಲ್ ಬೋಸ್ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಶಾಸಕರಾದ ಎ.ಆರ್. ಕೃಷ್ಣಮೂರ್ತಿ, ಹೆಚ್.ಎಂ. ಗಣೇಶ್ ಪ್ರಸಾದ್, ಎಂ.ಆರ್. ಮಂಜುನಾಥ, ಡಾ. ಡಿ. ತಿಮ್ಮಯ್ಯ, ಸಿ.ಎನ್. ಮಂಜೇಗೌಡ, ಮಧು ಜಿ. ಮಾದೇಗೌಡ, ಕೆ. ವಿವೇಕಾನಂದ, ಕಾವೇರಿ ಜಲಾನಯನ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಪಿ. ಮರಿಸ್ವಾಮಿ, ನಗರಸಭೆ ಅಧ್ಯಕ್ಷರಾದ ಎಸ್. ಸುರೇಶ್, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಹೆಚ್.ವಿ. ಚಂದ್ರು, ಚಾಮರಾಜನಗರ-ರಾಮಸಮುದ್ರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಮಹಮದ್ ಅಸ್ಗರ್, ನಗರಸಭೆ ಉಪಾಧ್ಯಕ್ಷರಾದ ಮಮತ, ಸದಸ್ಯರಾದ ಚಂದ್ರಶೇಖರ್ ಅವರು ಅತಿಥಿಗಳಾಗಿ ಪಾಲ್ಗೊಳ್ಳುವರು ಎಂದು ಪ್ರಕಟಣೆ ತಿಳಿಸಿದೆ.

# ಕ.ರಾ.ಮು.ವಿ.ವಿ:ಪರೀಕ್ಷಾ ಶುಲ್ಕ ಪಾವತಿಸಲು ಅರ್ಜಿ ಆಹ್ವಾನ

**ಚಾಮರಾಜನಗರ:** ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದಲ್ಲಿ 2021-22ನೇ ಶೈಕ್ಷಣಿಕ ಸಾಲಿನಿಂದ (ಜುಲೈ/ಜನವರಿ ಆವೃತ್ತಿ) 2023-24ನೇ ಶೈಕ್ಷಣಿಕ ಸಾಲಿನ (ಜುಲೈ/ಜನವರಿ ಆವೃತ್ತಿ) ಪ್ರವೇಶಾತಿ ಪಡೆದು ಸ್ನಾತಕ/ಸ್ನಾತಕೋತ್ತರ ಶೈಕ್ಷಣಿಕ ಕಾರ್ಯಕ್ರಮಗಳಲ್ಲಿ ಅನುತ್ತೀರ್ಣರಾಗಿರುವ, ಪರೀಕ್ಷೆ ತೆಗೆದುಕೊಂಡಿಲ್ಲದ ಹಾಗೂ 2022-23 (ಜುಲೈ/ಜನವರಿ ಆವೃತ್ತಿ) ರಿಂದ 2024-25ನೇ ಶೈಕ್ಷಣಿಕ ಸಾಲಿನವರೆಗೆ (ಜುಲೈ/ಜನವರಿ ಆವೃತ್ತಿ) ಹೊಸ ವಿದ್ಯಾರ್ಥಿಗಳಿಗೆ ಪರೀಕ್ಷಾ ಶುಲ್ಕ ಪಾವತಿಸಲು ಅರ್ಜಿ ಅಹ್ವಾನಿಸಲಾಗಿದೆ.

ದಂಡ ಶುಲ್ಕವಿಲ್ಲದೆ ಪಾವತಿಗೆ ಫೆಬ್ರವರಿ 7 ಕಡೆಯ ದಿನವಾಗಿದೆ. 200 ರೂ. ದಂಡ ಶುಲ್ಕದೊಂದಿಗೆ ಪಾವತಿಸಲು ಫೆ.17 ಕೊನೆಯ ದಿನವಾಗಿದೆ. ವಿದ್ಯಾರ್ಥಿಗಳು ಅಧಿಕೃತ ವೆಬ್‌ಸೈಟ್ www.ksoumysuru.ac.in ನಲ್ಲಿ ಪರೀಕ್ಷಾ ಅರ್ಜಿ ಮತ್ತು ಪರೀಕ್ಷಾ ಶುಲ್ಕವನ್ನು ಎಲ್ಲಾ ಅಗತ್ಯ ವಿವರಗಳೊಂದಿಗೆ ಭರ್ತಿ ಮಾಡಿ ಕಡ್ಡಾಯವಾಗಿ ಆನ್‌ಲೈನ್ ಮೂಲಕವೇ ಸಲ್ಲಿಸಬೇಕು. ಸದರಿ ಪರೀಕ್ಷೆಗಳನ್ನು ಮಾರ್ಚ್ ಮತ್ತು ಏಪ್ರಿಲ್ ತಿಂಗಳಲ್ಲಿ ನಡೆಸಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಅಧಿಕೃತ ವೆಬ್ ಸೈಟ್ www.ksoumysuru.ac.in £ÀÄß online examination portal ನಲ್ಲಿ ಮಾಹಿತಿ ಪಡೆಯಬಹುದು ಎಂದು ಕ.ರಾ.ಮು.ವಿ.ವಿ ಪ್ರಾದೇಶಿಕ ಕೇಂದ್ರದ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದೆಹಲಿ ಗಣರಾಜ್ಯೋತ್ಸವ ಸ್ತಬ್ಧಚಿತ್ರ, ಲಕ್ಕುಂಡಿ ಕಲ್ಲಿನಲ್ಲಿ ಅರಳಿದ ಶಿಲ್ಪಕಲೆಯ ಅನಾವರಣ

ನವದೆಹಲಿ:ಸರ್ವಜನಾಂಗದ ಶಾಂತಿಯ ತೋಟದಂತೆ ಕಂಗೊಳಿಸುತ್ತಿರುವ ಲಕ್ಕುಂಡಿ : ಶಿಲ್ಪಕಲೆಯ ತೊಟ್ಟಿಲು ಸ್ತಬ್ಧಚಿತ್ರವು ಗಣರಾಜ್ಯೋತ್ಸವದ ಪಥಸಂಚಲನದಲ್ಲಿ ಭಾಗವಹಿಸಲು ಸಂಪೂರ್ಣವಾಗಿ ಸಿದ್ಧಗೊಂಡಿದೆ. ರಾಜಧಾನಿಯ ಕರ್ತವ್ಯ ಪಥದಲ್ಲಿ (ರಾಜ್‌ಪಥ್) ಇದೇ ಜ.26ರಂದು ಸಾಗುವುದರೊಂದಿಗೆ ಕರ್ನಾಟಕ ರಾಜ್ಯದ ಹಿರಿಮೆ. ಸರ್ವಧರ್ಮ ಸಮನ್ವಯ, ಶಾಂತಿ, ಸಹಬಾಳ್ವೆಯನ್ನು ಪ್ರತಿಪಾದಿಸಲಿದೆ.


ಕರ್ನಾಟಕ ರಾಜ್ಯದ ಪರವಾಗಿ ಗಣರಾಜ್ಯೋತ್ಸವದ ಪಥಸಂಚಲನದಲ್ಲಿ ಪಾಲ್ಗೊಳ್ಳುವ ವಾರ್ತಾ ಮತ್ತು ಸಾರ್ವಜನಿಕಸಂಪರ್ಕ ಇಲಾಖೆಯು ಪ್ರತಿ ವರ್ಷ ತನ್ನ ವೈಶಿಷ್ಟಪೂರ್ಣ ಸ್ತಬ್ಧಚಿತ್ರಗಳ ಮೂಲಕವೇ ದೇಶದ ಗಮನ ಸೆಳೆಯುತ್ತಿದೆ. ನಮ್ಮ ರಾಜ್ಯವು ವರ್ಷದಿಂದ ವರ್ಷಕ್ಕೆ ಹೊಸ ಮೈಲಿಗಲ್ಲನ್ನು ಸ್ಥಾಪಿಸುತ್ತಲೇ ಸಾಗಿದೆ. ಈ ಬಾರಿ ಲಕ್ಕುಂಡಿಯ ಶಿಲ್ಪಕಲೆಯಿಂದ ಕೂಡಿರುವ ಐತಿಹಾಸಿಕ ದೇವಾಲಯಗಳು ಎಲ್ಲರನ್ನು ಮಂತ್ರಮುಗ್ಧರನ್ನಾಗಿಸಲು ಹೊರಟಿದೆ ಎಂದು ಇಂದು ಇಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಇಲಾಖೆಯ ಆಯುಕ್ತರಾದ ಹೇಮಂತ್ ಎಂ ನಿಂಬಾಳ್ಕರ್, ಐಪಿಎಸ್ ಅವರು ನುಡಿದರು.

ಕರ್ನಾಟಕಕ್ಕೆ ಈ ಬಾರಿಯ ಗಣರಾಜ್ಯೋತ್ಸವದ ಸ್ತಬ್ಧಚಿತ್ರವು ಅತ್ಯಂತ ಸ್ಮರಣೀಯವಾದುದು. ಎಲ್ಲಾ ಧರ್ಮಗಳನ್ನು ಸಮಾನವಾಗಿ ಕಾಣುವ ನಮ್ಮ ರಾಜ್ಯದಲ್ಲಿ ಎಲ್ಲಾ ಧರ್ಮಗಳ ದೇವಾಲಯಗಳಿವೆ. ಈ ಪೈಕಿ ಐತಿಹಾಸಿಕ ಪಟ್ಟಣವಾದ ಗದಗದ ಲಕ್ಕುಂಡಿಯು ಒಂದಾಗಿದೆ. ಅಹಿಂಸಾವಾದಿಯ ನೆಲೆಬೀಡು. ಶಿಲ್ಪಕಲೆಯ ತೊಟ್ಟಿಲಾದ ಲಕ್ಕುಂಡಿಯಲ್ಲಿ ಶೈವ, ಜೈನ ಮತ್ತು ವೈಷ್ಣವ ದೇವಾಲಯಗಳಿವೆ. ಕಲಾತ್ಮಕತೆಯಿಂದ ಕಂಗೊಳಿಸುವ ಇಲ್ಲಿನ ದೇವಾಲಯಗಳು ಈ ಬಾರಿಯ ಸ್ತಬ್ಧಚಿತ್ರದಲ್ಲಿ ಅವುಗಳ ಪಡಿಯಚ್ಚಿನಂತೆ ಮೂಡಿಬಂದಿವೆ. ಜೊತೆಗೆ, ದೇವಾಲಯವೇ ಮರುಜೀವ ತಳೆದಂತಿದೆ. ರಾಜ್ಯವು ಪ್ರಸ್ತುತ ಪಡಿಸುತ್ತಿರುವ ಈ ಸ್ತಬ್ಧಚಿತ್ರವು ಇದೇ ಜನವರಿ 26ರಂದು ಎಲ್ಲರ ಮನಸೂರೆಗೊಳ್ಳಲಿದೆ ಎನ್ನುವ ವಿಶ್ವಾಸ ಹೊಂದಿರುವುದಾಗಿ ವಾರ್ತಾ ಇಲಾಖೆಯ ಆಯುಕ್ತರು ತಿಳಿಸಿದರು.

ದೆಹಲಿಯ ಗಣರಾಜ್ಯೋತ್ಸವದ ಸ್ತಬ್ಧಚಿತ್ರದ ವಿಷಯದ ಆಯ್ಕೆ, ವಿನ್ಯಾಸ, ಕೇಂದ್ರ ಸರ್ಕಾರ ರಕ್ಷಣಾ ಇಲಾಖೆಯಲ್ಲಿ ಅದರ ಅನುಮೋದನೆ, ನಿರ್ಮಾಣ, ಪಾಲ್ಗೊಳ್ಳುವಿಕೆ ಹೀಗೆ ಎಲ್ಲಾ ಹಂತಗಳಲ್ಲೂ ‘ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯೇ ಸಕ್ರಿಯವಾಗಿ ಪಾಲ್ಗೊಳ್ಳುತ್ತದೆ. ಅಲ್ಲದೆ, ಇಲಾಖೆಯು ಕಳೆದ 15 ವರ್ಷಗಳಿಂದ ನಿರಂತರವಾಗಿ ಗಣರಾಜ್ಯೋತ್ಸವದ ಪಥಸಂಚಲನ ಮತ್ತು ಪ್ರದರ್ಶನದಲ್ಲಿ ಪಾಲ್ಗೊಳ್ಳುತ್ತಿದೆ. ಇದು ಕನ್ನಡಿಗರೆಲ್ಲರೂ ಹೆಮ್ಮೆ ಪಡುವ ಸಂಗತಿ ಎಂದು ಆಯುಕ್ತರಾದ ಹೇಮಂತ್ ಎಂ. ನಿಂಬಾಳ್ಕರ್ ಅವರು ತಮ್ಮ ಸಂತಸವನ್ನು ಹಂಚಿಕೊಂಡರು.

,2025ರ ಜನವರಿ 26ರಂದು ನಡೆಯುವ ದಹೆಲಿ ಗಣರಾಜ್ಯೋತ್ಸವದ ಪಥಸಂಚಲನದಲ್ಲಿ ಭಾಗವಹಿಸುವ ಸ್ತಬ್ಧಚಿತ್ರಕ್ಕಾಗಿ ಇಲಾಖೆಯು
1. ಲಕ್ಕುಂಡಿ : ಶಿಲ್ಪಕಲೆಯ ತೊಟ್ಟಿಲು 2. ಮೆಕ್ಕೆಕಟ್ಟು : ಮರಕೆತ್ತನೆಯ ದೈವ ನಿಧಿ 3. ಕರ್ನಾಟಕದ ಸಮೃದ್ಧಿಯ ಆಚರಣೆಗಳು ಮತ್ತು 4. ಕರ್ನಾಟಕ ಒಂದು ರಾಜ್ಯ ಹಲವು ಜಗತ್ತು ಎಂಬ ನಾಲ್ಕು ವಿಷಯಗಳನ್ನು ಆಯ್ಕೆ ಮಾಡಿಕಳುಹಿಸಿತ್ತು. ಮೊದಲ ಸಭೆಯಲ್ಲಿಯೇ ಲಕ್ಕುಂಡಿ: ಶಿಲ್ಪಕಲೆಯ ತೊಟ್ಟಿಲು ಎಂಬ ವಿಷಯವನ್ನು ಪರಿಣತರ ಸಮಿತಿಯು ಒಮ್ಮತದಿಂದ ಅಂತಿಮಗೊಳಿಸಿತ್ತು. ಅದಕ್ಕನುಗಣವಾಗಿ ಈ ಬಾರಿಯ ಸ್ತಬ್ಧಚಿತ್ರದಲ್ಲಿ ಲಕ್ಕುಂಡಿಯ ದೇವಾಲಯಗಳು ಕರ್ನಾಟಕದ ಶ್ರೀಮಂತ ಸಾಂಸ್ಕೃತಿಕ ಪರಂಪರೆಯನ್ನು ಪ್ರತಿಬಿಂಬಿಸುತ್ತಿವೆ ಎಂದು ನಿಂಬಾಳ್ಕರ್ ಅವರು ತಿಳಿಸಿದರು.

ವಿಷಯ ಆಯ್ಕೆಯ ಬಳಿಕ ಲಕ್ಕುಂಡಿಯ ಶಿಲ್ಪಕಲೆಯ ವೈಭವವನ್ನು ಅದರ ಪ್ರತಿರೂಪದಂತೆ ‘ಕೆತ್ತುವ’ ಬೃಹತ್ ಸವಾಲು ಎದುರಾಗಿತ್ತು. ಕರ್ನಾಟಕದ ಬಗೆಗಿನ ಅಭಿಮಾನ, ನಾಡಿನ ಹಿರಿಮೆ ಹಾಗೂ ಸಂಸ್ಕೃತಿಯ ಮಹತ್ವವನ್ನು ಎತ್ತಿಹಿಡಿಯುವ



ಸನ್ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರ ಪ್ರೋತ್ಸಾಹದ ನುಡಿಗಳೇ ಈ ಸವಾಲಿನ ಕೆಲಸಕ್ಕೆ ಮುನ್ನುಡಿ ಬರೆದಿತ್ತು. ಪ್ರವಾಸೋದ್ಯಮ ಮತ್ತು ಗದುಗಿನ ಉಸ್ತುವಾರಿ ಸಚಿವರಾದ ಹೆಚ್.ಕೆ. ಪಾಟೀಲ್ ಅವರ ಮಾರ್ಗದರ್ಶನ ಹಾಗೂ





ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕಾರ್ಯದರ್ಶಿಗಳಾದ ಬಿ.ಬಿ. ಕಾವೇರಿ ಅವರ ಸಲಹೆ-ಸೂಚನೆಗಳು ಸ್ತಬ್ಧಚಿತ್ರದ ಕೆಲಸವನ್ನು ಸುಗಮವಾಗಿಸಿತ್ತು ಎಂದು ವಾರ್ತಾ ಇಲಾಖೆಯ ಆಯುಕ್ತರು ಹೇಳಿದರು.

ಗದಗದ ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಆಯುಕ್ತರಾದ ಡಾ. ಶರಣು ಗೋಗೇರಿ ಅವರು ಒದಗಿಸಿದ ಛಾಯಾಚಿತ್ರಗಳು ಮತ್ತು ಮಾಹಿತಿ ಸೇರಿದಂತೆ ವಿಷಯ ಪರಿಣತರು - ತಜ್ಞರು, ಕಲಾನಿರ್ದೇಶಕರು ಮತ್ತು ಕಲಾವಿದರೊಂದಿಗೆ ಪರಾಮರ್ಶಿಸಿಕೊಂಡು ಇಲಾಖೆಯು ಈ ಕೆಲಸವನ್ನು ಕೈಗೆತ್ತಿಕೊಂಡಿತ್ತು. ಹಾಕಿಕೊಂಡ ಕಾರ್ಯತಂತ್ರದ ರೂಪು ರೇಷೆಗಳಂತೆ ಈ ಸ್ತಬ್ಧಚಿತ್ರ ದಿನಗಳ ಲೆಕ್ಕದಲ್ಲಿ ಮೈದಳೆದಿದೆ. ಕಡಿಮೆ ಅವಧಿಯಲ್ಲಿ ಅತ್ಯಂತ ಅಚ್ಚುಕಟ್ಟಾಗಿ ಸ್ತಬ್ಧಚಿತ್ರ ಕಣ್ಣಿಗೆ ಕಟ್ಟುವ ರೀತಿಯಲ್ಲಿ ಮೂಡಿ ಬಂದಿದೆ. ಇದಕ್ಕಾಗಿ ಪ್ರತ್ಯಕ್ಷವಾಗಿ ಮತ್ತು ಪರೋಕ್ಷವಾಗಿ ಕೈಜೋಡಿಸಿದ ಎಲ್ಲರನ್ನೂ ಈ ಸಂದರ್ಭದಲ್ಲಿ ಸ್ಮರಿಸುತ್ತೇನೆ. ಆರಂಭದಲ್ಲಿ ದೆಹಲಿಯಲ್ಲಿ ಕವಿದಿದ್ದ ದಟ್ಟ ಮಂಜು, ಹೊಂಜು ಮತ್ತು ಮಳೆ ಎಲ್ಲವೂ ಸವಾಲುಗಳು ಕಂಡಿದ್ದವು. ಇಂದು ಅವುಗಳೆಲ್ಲವೂ ಈ ನಮ್ಮ ಸ್ತಬ್ಧಚಿತ್ರದಲ್ಲಿ ಕರಗಿ ಹೋಗಿವೆ. ಜೀವಕಳೆಯಿಂದ ಕೂಡಿರುವ ಸ್ತಬ್ಧಚಿತ್ರವನ್ನು ರಾಜ್ಯದ ಪರವಾಗಿ ಪ್ರದರ್ಶಿಸುತ್ತಿರುವುದಕ್ಕೆ ಹೆಮ್ಮೆ ಎನಿಸುತ್ತದೆ ಎಂದು ಆಯುಕ್ತರಾದ ಹೇಮಂತ್ ಎಂ. ನಿಂಬಾಳ್ಕರ್ ಅವರು ತಮ್ಮ ಸಂತಸವನ್ನು ಹಂಚಿಕೊಂಡರು.

ವಿಷಯ ಆಯ್ಕೆಯ ಬಳಿಕ, ಸ್ತಬ್ಧಚಿತ್ರದ ಮಾದರಿ (ಕೀ ಮಾಡಲ್) ಮತ್ತು ಸಂಗೀತದ ಹಂತವನ್ನು ದಾಟಬೇಕಾಗಿತ್ತು. ಅಂತರರಾಷ್ಟ್ರೀಯ ಖ್ಯಾತಿಯ ಕಲಾನಿರ್ದೇಶಕ ಶಶಿಧರ ಅಡಪ ಅವರು



ವಿನ್ಯಾಸ ಮಾಡಿಕೊಟ್ಟ ಮಾದರಿಗೆ ಆಯ್ಕೆ ಸಮಿತಿ ಮೊದಲ ಹಂತದಲ್ಲೇ ಅನುಮೋದನೆ ನೀಡಿತ್ತು. ಸಂಗೀತ ನಿರ್ದೇಶಕ ಪ್ರವೀಣ್ ಡಿ. ರಾವ್ ಅವರ ಕನ್ನಡ ಸಂಗೀತವನ್ನು ಹಾಗೆಯೇ ಉಳಿಸಿಕೊಂಡಿದೆ. ಮೈಸೂರು, ಬೆಂಗಳೂರು, ಗದಗ ಮತ್ತು ಧಾರವಾಡದ ಕಲಾವಿದರಿಂದ ಕೂಡಿರುವ 18 ಮಂದಿ ತಂಡವನ್ನು ಜಗ್ಗಲಿಗೆ ಕಲಾವಿದರಾದ ಲಿಂಗಯ್ಯ ಅವರು ಮುನ್ನಡೆಸುತ್ತಾರೆ. ಸ್ತಬ್ಧಚಿತ್ರದ ಇಕ್ಕೆಲಗಳಲ್ಲಿ ತಲಾ ನಾಲ್ಕು ಮಂದಿ ಮಹಿಳೆಯರು ಮತ್ತು ಪುರುಷರು ಜಗ್ಗಲಿಗೆ ಬಾರಿಸುತ್ತಾ ಮುನ್ನಡೆಯಲಿದ್ದಾರೆ. ಇನ್ನುಳಿದ 10 ಮಂದಿ ಸ್ತಬ್ಧಚಿತ್ರದ ಮೇಲುಭಾಗದಲ್ಲಿ ಪ್ರವಾಸಿಗರಾಗಿ ಕಾಣಿಸಿಕೊಳ್ಳಲಿದ್ದಾರೆ.

ಸ್ತಬ್ಧಚಿತ್ರದಲ್ಲಿ ಏನಿರಲಿದೆ: ಕರ್ನಾಟಕದ ಗದಗ ಜಿಲ್ಲೆಯಲ್ಲಿರುವ ಲಕ್ಕುಂಡಿಯನ್ನು ಅದರ ಅದ್ಭುತ ಕಲ್ಲಿನ ವಾಸ್ತುಶಿಲ್ಪಕ್ಕಾಗಿ ಶಿಲ್ಪಕಲೆಯ ತೊಟ್ಟಿಲು ಎಂದು ಕರೆಯಲಾಗುತ್ತದೆ. ಇಲ್ಲಿನ ಸುಂದರವಾದ ದೇವಾಲಯಗಳು, ಮೆಟ್ಟಿಲು ಬಾವಿಗಳು ಮತ್ತು ಚಾಲುಕ್ಯ ರಾಜವಂಶದ ಶಾಸನಗಳಿಗೆ ನೆಲೆಯಾಗಿದೆ. ಸಾಂಸ್ಕೃತಿಕ ಶಕ್ತಿ ಕೇಂದ್ರವಾಗಿರುವುದರ ಜೊತೆಗೆ, 10 ರಿಂದ 12 ನೇ ಶತಮಾನದ ನಡುವೆ ಲಕ್ಕುಂಡಿ ಒಂದು ದೊಡ್ಡ ವಾಣಿಜ್ಯ ಕೇಂದ್ರವಾಗಿತ್ತು. ಈ ನಗರವು ಹಲವಾರು ರಾಜವಂಶಗಳಿಂದ ಆಳಲ್ಪಟ್ಟಿತ್ತಾದರೂ ಅವುಗಳಲ್ಲಿ ಅತ್ಯಂತ ಪ್ರಮುಖವಾದದ್ದು ಚಾಲುಕ್ಯರ ರಾಜವಂಶ.

ಲಕ್ಕುಂಡಿಯು ಪ್ರಾಚೀನಾನ್ವೇಷಕರು ಮತ್ತು ವಾಸ್ತುಶಿಲ್ಪ ಪ್ರಿಯರ ಸ್ವರ್ಗವಾಗಿದೆ. ಇದು 50 ದೇವಾಲಯಗಳನ್ನು ಹೊಂದಿದ್ದು, ಅವುಗಳಲ್ಲಿ ಹೆಚ್ಚಿನವು ಶಿವನಿಗೆ ಸಮರ್ಪಿತವಾಗಿವೆ; 101 ಮೆಟ್ಟಿಲು ಬಾವಿಗಳು (ಕಲ್ಯಾಣಿ / ಪುಷ್ಕರಣಿ); ಮತ್ತು 29 ಶಾಸನಗಳು ಇಲ್ಲಿವೆ. ಇವುಗಳು ಕಲ್ಯಾಣಿ ಚಾಲುಕ್ಯರ ಕಲೆ, ಸಂಸ್ಕೃತಿ ಮತ್ತು ವಾಸ್ತುಶಿಲ್ಪದ ಶ್ರೇಷ್ಠತೆಯ ಸಂಕೇತವಾಗಿದೆ. ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆ ನಿರ್ವಹಿಸುತ್ತಿರುವ ವಸ್ತುಸಂಗ್ರಹಾಲಯವು ಲಕ್ಕುಂಡಿಯ ಶ್ರೀಮಂತ ಶಿಲ್ಪಕಲೆಯನ್ನು ಪ್ರದರ್ಶಿಸುತ್ತಿದೆ.

ಸ್ತಬ್ಧಚಿತ್ರದ ಮುಂಭಾಗವು ಬ್ರಹ್ಮ ಜಿನಾಲಯ ದೇವಸ್ಥಾನದ ಬ್ರಹ್ಮನ ಪ್ರತಿಮೆಯನ್ನು ಹೊಂದಿದೆ. ಇದು ಲಕ್ಕುಂಡಿಯಲ್ಲಿರುವ ಅತ್ಯಂತ ಹಳೆಯ ಜೈನ ದೇವಾಲಯವಾಗಿದ್ದು ಭಗವಾನ್ ಮಹಾವೀರನಿಗೆ ಸಮರ್ಪಿತವಾಗಿದೆ. ಅದರ ನಂತರ ಬ್ರಹ್ಮ ಜಿನಾಲಯ ದೇವಸ್ಥಾನದ ತೆರೆದ ಕಂಬದ ಮಂಟಪವಿದೆ. ಸ್ತಬ್ಧಚಿತ್ರದ ಮುಖ್ಯ ವಿಭಾಗವು ಭವ್ಯವಾದ ಮತ್ತು ಅಲಂಕೃತವಾದ ಕಾಶಿ ವಿಶ್ವೇಶ್ವರ ದೇವಸ್ಥಾನ ಮತ್ತು ಶಿವನಿಗೆ ಸಮರ್ಪಿತವಾದ ನನ್ನೇಶ್ವರ ದೇವಸ್ಥಾನವನ್ನು ಪ್ರದರ್ಶಿಸುತ್ತದೆ.

ತೀವ್ರ ಪೈಪೋಟಿ : ಗಣರಾಜ್ಯೋತ್ಸವದ ಪಥಸಂಚಲನದಲ್ಲಿ ಸ್ತಬ್ಧಚಿತ್ರದೊಂದಿಗೆ ಭಾಗವಹಿಸುವುದು ಪ್ರತಿ ರಾಜ್ಯಕ್ಕೂ ಹೆಮ್ಮೆಯ ಮತ್ತು ಪ್ರತಿಷ್ಠೆಯ ಸಂಕೇತ. ಹಿಂದೆ ಎಲ್ಲಾ ರಾಜ್ಯಗಳಿಗೂ ಪಥಸಂಚಲನದಲ್ಲಿ ಭಾಗವಹಿಸಲು ಅವಕಾಶವಿತ್ತು. ಭದ್ರತೆ ಮತ್ತು ಗಣರಾಜ್ಯೋತ್ಸವದ ಅವಧಿಯಲ್ಲಿ ಮಾಡಿದ ಇಳಿಕೆ, ಪ್ರಾತಿನಿಧ್ಯತೆಯಿಂದಾಗಿ ಸ್ತಬ್ಧಚಿತ್ರಕ್ಕಾಗಿ ಪ್ರತಿನಿಧಿಸುವ ರಾಜ್ಯ ಮತ್ತು ಕೇಂದ್ರಾಡಳಿತ ಪ್ರದೇಶಗಳ ಸಂಖ್ಯೆಯನ್ನು ರಕ್ಷಣಾ ಸಚಿವಾಲಯ 15ಕ್ಕೆ ಇಳಿಸಿದೆ. ಇದು ತೀವ್ರ ಪೈಪೋಟಿಗೆ ಕಾರಣವಾಗಿದೆ. ಅಷ್ಟೇ ಅಲ್ಲದೆ ಗುಣಮಟ್ಟಕ್ಕೆ, ವಿನ್ಯಾಸಕ್ಕೆ ಹೆಚ್ಚಿನ ಒತ್ತು ನೀಡಲಾಗುತ್ತಿದೆ. ಸ್ತಬ್ಧಚಿತ್ರಕ್ಕಾಗಿ



ಪ್ರಶಸ್ತಿ ಪಡೆದುಕೊಳ್ಳುವುದಕ್ಕಿಂತಲೂ ಪಥಸಂಚಲನದಲ್ಲಿ ಭಾಗವಹಿಸುವುದೇ ಪ್ರತಿಷ್ಠೆಯ ಸಂಕೇತವಾಗಿದೆ. ಇಂತಹ ಕಠಿಣ ಪರೀಕ್ಷೆಯಲ್ಲಿ ಕರ್ನಾಟಕವು 15 ಬಾರಿ ಭಾಗವಹಿಸಿ, ಹಲವು ಪ್ರಶಸ್ತಿಗಳನ್ನು ಮುಡಿಗೇರಿಸಿಕೊಂಡಿದೆ.

ಪ್ರಶಸ್ತಿಗಳ ಸರಮಾಲೆ: 2022ರಲ್ಲಿ ಇಲಾಖೆಯು ಪ್ರದರ್ಶಿಸಿದ್ದ ‘ಸಾಂಪ್ರದಾಯಿಕ ಕಸೂತಿ ತೊಟ್ಟಿಲು’ಗೆ ದ್ವಿತೀಯ ಪ್ರಶಸ್ತಿ, 2015ರಲ್ಲಿ ರಾಜ್ಯವು ಚನ್ನಪಟ್ಟಣದ ಗೊಂಬೆಗಳಿಗೆ ತೃತೀಯ, 2012ರಲ್ಲಿ ದಕ್ಷಿಣ ಕನ್ನಡ ಭೂತಾರಾಧನೆಗೆ ತೃತೀಯ, 2011ರಲ್ಲಿ ಬೀದರ್‌ನ ಪಾರಂಪರಿಕ ಕಲೆಯಾದ ‘ಬಿದರಿ’ ಸ್ತಬ್ಧಚಿತ್ರಕ್ಕೆ ದ್ವಿತೀಯ ಮತ್ತು 2008ರಲ್ಲಿ ಹೋಯ್ಸಳ ವಾಸ್ತುಶಿಲ್ಪಕ್ಕೆ ದ್ವಿತೀಯ ಪ್ರಶಸ್ತಿ ಸಂದಿತ್ತು. 2005ರಲ್ಲಿ ವೈರಾಗ್ಯ ಮೂರ್ತಿ ಬಾಹುಬಲಿಯ ಮಹಾಮಸ್ತಕಾಭಿಷೇಕದ ಸ್ತಬ್ಧಚಿತ್ರಕ್ಕೆ ಪ್ರಥಮ ಪ್ರಶಸ್ತಿ ದೊರೆತಿತ್ತು. 2008ರಲ್ಲಿ ಹೊಯ್ಸಳ ಕಲೆಯ ಸ್ತಬ್ಧಚಿತ್ರವು ದ್ವಿತೀಯ ಪ್ರಶಸ್ತಿಯ ಜೊತೆಗೆ ಅತ್ಯುತ್ತಮ ನಿರೂಪಣೆ ಮತ್ತು ಅತ್ಯುತ್ತಮ ಫ್ಯಾಬ್ರಿಕೇಷನ್‌ಗಾಗಿ ಪ್ರಶಸ್ತಿ ಲಭಿಸಿತ್ತು. ಒಂದೇ ಸ್ತಬ್ಧಚಿತ್ರಕ್ಕಾಗಿ ಮೂರು ಪ್ರಶಸ್ತಿಗಳನ್ನು ಪಡೆದಂತಹ ಅಪರೂಪದ ಸಾಧನೆಯನ್ನು ನಮ್ಮ ರಾಜ್ಯವು ಮಾಡಿದೆ ಎನ್ನುವುದು ಹೆಮ್ಮೆಯ ಸಂಗತಿ.

ಹೆಚ್ಚಿನ ಮತ್ತು ಪೂರಕ ಮಾಹಿತಿಗಾಗಿ ಹೇಮಂತ್ ಎಂ ನಿಂಬಾಳ್ಕರ್, ಐಪಿಎಸ್, ಆಯುಕ್ತರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ (ಮೊ.ಸಂ 9448110100), ಸಿ. ಆರ್. ನವೀನ್, ಸ್ತಬ್ಧಚಿತ್ರದ ನೋಡಲ್ ಅಧಿಕಾರಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ (ಮೊ.ಸಂ 9448058775), ಶಶಿಧರ ಅಡಪ, ಅಂತರರಾಷ್ಟ್ರೀಯ ಕಲಾನಿರ್ದೇಶಕ, ಸತೀಶ್ ರೈ, ಪ್ರತಿರೂಪಿ ಸಂಸ್ಥೆ (ಮೊ.ಸಂ 9448497073, 9448497076)

# ಬಿಲ್‌ಗೇಟ್ಸ್ ಭೇಟಿಯಾದ ಆಂಧ್ರ ಸಿಎಂ

ಅಮರಾವತಿ: ದಾವೋಸ್ ವಿಶ್ವ ಆರ್ಥಿಕ ವೇದಿಕೆಯಲ್ಲಿ ಮೈಕ್ರೋಸಾಫ್ಟ್ ಸಂಸ್ಥಾಪಕ ಬಿಲ್ ಗೇಟ್ಸ್ ಅವರನ್ನು ಆಂಧ್ರ ಪ್ರದೇಶ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಭೇಟಿ ಮಾಡಿದ್ದಾರೆ. ಈ ವೇಳೆ ರಾಜ್ಯವನ್ನು ಜಾಗತಿಕ ಆರೋಗ್ಯ ಸೇವೆ, ಶಿಕ್ಷಣ ಮತ್ತು ಅವಿಷ್ಕಾರದ ಕೇಂದ್ರವಾಗಿ ರೂಪಿಸುವಲ್ಲಿನ ಸಹಭಾಗಿತ್ವ ಕುರಿತು ಚರ್ಚೆ ನಡೆಸಲಾಗಿದೆ ಎಂದು ರಾಜ್ಯ ಸರ್ಕಾರ ತಿಳಿಸಿದೆ.

ದಕ್ಷಿಣ ರಾಜ್ಯದಲ್ಲಿ ಅತ್ಯುತ್ತಮ ಆರೋಗ್ಯ ಅವಿಷ್ಕಾರ ಮತ್ತು ರೋಗಪತ್ತೆ ಕೇಂದ್ರವಾಗಿ ರೂಪಿಸುವ ಕುರಿತು ಇಬ್ಬರು ಚರ್ಚೆ ನಡೆಸಿದರು ಎಂದು ಅಧಿಕೃತ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ದೀರ್ಘ ಸಮಯದ ಬಳಿಕ ಬಿಲ್‌ಗೇಟ್ಸ್ ಅವರನ್ನು ಭೇಟಿ ಮಾಡಿದ್ದು ಸಂತಸ ತಂದೆ. ತಂತ್ರಜ್ಞಾನ ಮತ್ತು ಅವಿಷ್ಕಾರದಲ್ಲಿನ ಅವರ ಗಮನವು ನಮ್ಮೆಲ್ಲರಿಗೂ ಸ್ಫೂರ್ತಿಯಾಗಿದೆ. ಆರೋಗ್ಯ ಮತ್ತು ಎಐ ಅವಿಷ್ಕಾರದ ಸಹಭಾಗಿತ್ವದ ಅವಕಾಶಗಳ ಕುರಿತು ನಾವು ಚರ್ಚಿಸಿದೆವು. ಆಂಧ್ರ ಪ್ರದೇಶದ ಪ್ರಗತಿಯಲ್ಲಿ ಬಿಎಂಜಿಎಫ್ ಸಹಭಾಗಿತ್ವ ಎದುರು ನೋಡುತ್ತಿರುವುದಾಗಿ ಅವರು ಸಿಎಂ ನಾಯ್ಡು ತಿಳಿಸಿದ್ದಾರೆ.

ಅವಿಷ್ಕಾರ ಮತ್ತು ಸಾರ್ವಜನಿಕ ಆರೋಗ್ಯ ಸುಧಾರಣೆಗೆ ಆಂಧ್ರಪ್ರದೇಶವು ಬದ್ಧವಾಗಿದೆ ಒತ್ತಿ ಹೇಳುತ್ತದೆ. ರಾಜ್ಯದಲ್ಲಿನ ಕೃತಕ ಬುದ್ಧಿಮತ್ತೆ ವಿಶ್ವವಿದ್ಯಾಲದಯ ಪ್ರಸ್ತಾವನೆಯ ಸಲಹಾ ಮಂಡಳಿಗೆ ಸೇರುವಂತೆ ಕೂಡ ಗೇಟ್ಸ್‌ಗೆ ಸಿಎಂ ಆಹ್ವಾನಿಸಿದ್ದಾರೆ.

ದಕ್ಷಿಣ ಭಾರತದಲ್ಲಿ ಬಿಲ್ ಮತ್ತು



ಮಿಲಿಂದಾ ಗೇಟ್ಸ್ ಫೌಂಡೇಶನ್‌ನ ಉಪಕ್ರಮಗಳು ಆಂಧ್ರ ಪ್ರದೇಶದ ಗೇಟ್‌ವೇ ಆಗಿ ಕಾರ್ಯ ನಿರ್ವಹಿಸುತ್ತಿವೆ. ಇದು ಮತ್ತಷ್ಟು ಪರಿಣಾಮಕಾರಿಯಾಗಿ ಕಾರ್ಯ ನಿರ್ವಹಿಸಲು ವೇದಿಕೆಯಾಗುವ ಭರವಸೆ ನೀಡಲಾಗುವುದು ಎಂದು ಸಿಎಂ ತಿಳಿಸಿದರು.

ಇದಕ್ಕೆ ಮುನ್ನ ಆಂಧ್ರ ಸಿಎಂ ವಿಶಾಖಪಟ್ಟಣಂಅನ್ನು ಚಿಪ್ ವಿನ್ಯಾಸ ಮತ್ತು ಉತ್ಪಾದನಾ ಕೇಂದ್ರಕ್ಕೆ ಗಮನ ಹರಿಸುವಂತೆ ಟೆಕ್ ದೈತ್ಯ ಗೂಗಲ್‌ಗೆ ಮನವಿ ಮಾಡಿದರು. ಗೂಗಲ್ ಕ್ಲೌಡ್ ಸಿಇಒ ಥಾಮಸ್ ಕುರಿಯನ್ ಅವರನ್ನು ಭೇಟಿ ಮಾಡಿ, ಗೂಗಲ್ ಈಗಾಗಲೇ ತನ್ನ ಚಿಪ್ ಅನ್ನು ಅನೇಕ ಕಾರ್ಯಾಚರಣೆಯಲ್ಲಿ ಉತ್ಪಾದನೆ ಮಾಡುತ್ತಿದೆ. ಇದಕ್ಕಾಗಿ ವಿಶಾಖಪಟ್ಟಣದಲ್ಲಿ ಚಿಪ್ ವಿನ್ಯಾಸ ಕೇಂದ್ರ ಸ್ಥಾಪಿಸುವ ಕುರಿತು ಆಲೋಚಿಸುವಂತೆ ತಿಳಿಸಿದ್ದರು.

ಆಂಧ್ರಪ್ರದೇಶದಲ್ಲಿ ಜಾಗತಿಕ ಸಾಮರ್ಥ್ಯ ಕೇಂದ್ರವನ್ನು ಸ್ಥಾಪಿಸಲು ಪರಿಗಣಿಸುವಂತೆ ಅವರು ಪೆಟ್ರೋನಾಸ್‌ಗೆ ಕೂಡ ವಿನಂತಿಸಿದರು. 2030ರ ಹೊತ್ತಿಗೆ ಹಸಿರು ಅಮೋನಿಯಂಅನ್ನು 5 ಮಿಲಿಯನ್ ಟನ್ ಉತ್ಪಾದಿಸುವ ಗುರಿಯನ್ನು ಪೆಟ್ರೋನಾಸ್ ಹೊಂದಿದ್ದು, ಅವರು ಭಾರತದಲ್ಲಿ ಗ್ರೀನ್ ಹೈಡ್ರೋಜನ್, ಗ್ರೀನ್ ಅಮೋನಿಯಮ್ ಮತ್ತು ಗ್ರೀನ್ ಮೊಲೆಕ್ಯೂಲಸ್‌ಗೆ ಹೂಡಿಗೆಗೆ ಎದುರು ನೋಡುತ್ತಿದ್ದಾರೆ. ಇದರ ಭಾಗವಾಗಿ ಅವರು, ಆಂಧ್ರಪ್ರದೇಶದ ಕಾಕಿನಾಡದಲ್ಲಿ 15,000 ಕೋಟಿ ರೂಪಾಯಿ ಹೂಡಿಕೆ ಮಾಡುವ ನಿರೀಕ್ಷೆಯನ್ನು ಹೊಂದಿದ್ದಾರೆ ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದೆ.

ವಿಶಾಖಪಟ್ಟಣಂನಲ್ಲಿ ಪೆಪ್ಸಿಕೊ ಜಾಗತಿಕ ವಿತರಣಾ ಕೇಂದ್ರ ಮತ್ತು ಪೆಪ್ಸಿಕೊ ಡಿಜಿಟ್ ಹಬ್ ಸ್ಥಾಪಿಸಲು ಪೆಪ್ಸಿ ಇಂಟರ್‌ನ್ಯಾಶನಲ್ ಫ್ರ್ಯಾಂಚೈಸ್ ಬೆವರೇಜಸ್‌ನ ಸಿಇಒ ಯುಜೀನ್ ವಿಲ್ಲೆಮ್‌ಸೆನ್ ಹಾಗೂ ಪೆಪ್ಸಿಕೋ ಫೌಂಡೇಶನ್‌ನ ಅಧ್ಯಕ್ಷ ಸ್ಟೀಫನ್ ಕೆಹೋ ಭೇಟಿಯಾಗಿ ಮನವಿ ಮಾಡಿದರು.

# ವಿಶ್ವಸಂಸ್ಥೆಯಿಂದ ನೆರವು ಕಾರ್ಯ ಪುನಾರಂಭ

**ವಿಶ್ವಸಂಸ್ಥೆ:** ಇಸ್ರೇಲ್ ಮತ್ತು ಹಮಾಸ್ ಮಧ್ಯೆ ಕದನ ವಿರಾಮ ಜಾರಿಯಾದ ನಂತರ ಈಗ ವಿಶ್ವಸಂಸ್ಥೆ ಮತ್ತು ಅದರ ಸಹವರ್ತಿ ಸಂಘಟನೆಗಳ ಕಾರ್ಯಕರ್ತರು ಗಾಜಾ ಜನರಿಗೆ ಅಗತ್ಯ ಪರಿಹಾರ ಸಾಮಗ್ರಿಗಳನ್ನು ತಲುಪಿಸಲು ಯುದ್ಧೋಪಾದಿಯಲ್ಲಿ ಪ್ರಯತ್ನಿಸುತ್ತಿದ್ದಾರೆ. ಇದಲ್ಲದೆ ಮನೆ ಮಠ ಕಳೆದುಕೊಂಡ ನಿರಾಶ್ರಿತರಾಗಿರುವ ಗಾಜಾ ಜನತೆಗಾಗಿರುವ ಹಾನಿಯ ಬಗ್ಗೆಯೂ ಕಾರ್ಯಕರ್ತರು ಲೆಕ್ಕ ಹಾಕುತ್ತಿದ್ದಾರೆ.

ಗಾಜಾ ಪಟ್ಟಿಯಾದ್ಯಂತದ ಜನರಿಗೆ ನೀಡಲಾಗುತ್ತಿರುವ ಪರಿಹಾರ ಸಾಮಗ್ರಿಗಳ ಪ್ರಮಾಣವನ್ನು ಹೆಚ್ಚಿಸುತ್ತಿದ್ದೇವೆ. ಸರಕು ಶೇಖರಣಾ ಸಾಮರ್ಥ್ಯಗಳನ್ನು ಕೂಡ ಹೆಚ್ಚಿಸಲಾಗುತ್ತಿದ್ದು, ಅಗತ್ಯ ದುರಸ್ತಿ ಕಾರ್ಯಗಳನ್ನು ಕೈಗೊಳ್ಳಲಾಗುತ್ತಿದೆ. ಆರೋಗ್ಯ ಸೇವೆಗಳನ್ನು ಸಹ ಸುಧಾರಿಸಲಾಗುತ್ತಿದೆ ಎಂದು ವಿಶ್ವಸಂಸ್ಥೆಯ ಮಾನವೀಯ ವ್ಯವಹಾರಗಳ ಸಮನ್ವಯ ಕಚೇರಿ ತಿಳಿಸಿದೆ. ವಿಶ್ವಸಂಸ್ಥೆಯ ಕಾರ್ಯಕರ್ತರು ಆಹಾರದ ಪಾರ್ಸೆಲ್?ಗಳು ಮತ್ತು ಹಿಟ್ಟನ್ನು ವಿತರಿಸುತ್ತಿದ್ದಾರೆ ಹಾಗೂ ಬೇಕರಿಗಳನ್ನು ಪುನಾರಂಭಿಸಲು ಕೆಲಸ ಮಾಡುತ್ತಿದ್ದಾರೆ ಎಂದು ಕ್ಸಿನ್ಹುವಾ ಸುದ್ದಿ ಸಂಸ್ಥೆ ವರದಿ ಮಾಡಿದೆ.

ಗಾಜಾ ಜನತೆಗೆ ಸಹಾಯ ಮಾಡುವ ವಿಶ್ವಸಂಸ್ಥೆಯ ಪ್ರಯತ್ನಗಳ ಬಗ್ಗೆ ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಆಂಟೋನಿಯೊ ಗುಟೆರೆಸ್ ಅವರ ಉಪ ವಕ್ತಾರ ಫರ್ಹಾನ್ ಹಕ್ ಅವರು ದಿನನಿತ್ಯದ ಪತ್ರಿಕಾಗೋಷ್ಠಿಯಲ್ಲಿ ಸುದ್ದಿಗಾರರಿಗೆ ಮಾಹಿತಿ ನೀಡಿದರು.



"ಯುದ್ಧ ಪೀಡಿತ ಹಾಗೂ ಯುದ್ಧ ಮುಗಿದ ಸಂದರ್ಭಗಳಲ್ಲಿ ಆ ಪ್ರದೇಶಗಳಲ್ಲಿನ ಕಟ್ಟಡದ ಅವಶೇಷಗಳನ್ನು ತೆರವುಗೊಳಿಸುವುದು, ನೆಲಬಾಂಬ್?ಗಳನ್ನು ತೆಗೆದು ಹಾಕುವುದು, ಇನ್ನೂ ಸ್ಫೋಟಗೊಳ್ಳದ ಶಸ್ತ್ರಾಸ್ತ್ರಗಳನ್ನು ಪತ್ತೆ ಮಾಡಿ ಅವುಗಳನ್ನು ತೆರವುಗೊಳಿಸುವುದು ಮತ್ತು ಪುನರ್ ನಿರ್ಮಾಣ ಕಾರ್ಯದಲ್ಲಿ ಸಹಕರಿಸುವುದು ವಿಶ್ವಸಂಸ್ಥೆಯು ಸಾಮಾನ್ಯವಾಗಿ ಮಾಡುವ ಕೆಲಸಗಳಾಗಿವೆ" ಎಂದು ಹಕ್ ತಿಳಿಸಿದರು.

"ಅವುಗಳನ್ನು ಮೈನ್ ಆಕ್ಷನ್ ಸರ್ವಿಸ್, ಯುಎನ್ ಆಫೀಸ್ ಫಾರ್ ಪ್ರಾಜೆಕ್ಟ್ ಸರ್ವೀಸಸ್ ಮತ್ತು ಯುಎನ್ ಡೆವಲಪ್ ಮೆಂಟ್ ಪ್ರೋಗ್ರಾಂ ಸೇರಿದಂತೆ ವಿವಿಧ ಸಂಘಟನೆಗಳು ಈ ಎಲ್ಲ ಕೆಲಸಗಳನ್ನು ನೋಡಿಕೊಳ್ಳುತ್ತವೆ" ಎಂದು ಅವರು ಮಾಹಿತಿ ನೀಡಿದರು.

ಕದನ ವಿರಾಮದ ಎರಡನೇ ದಿನದಂದು ಸುಮಾರು 1,000 ಟ್ರಕ್‌ಗಳು ಗಾಜಾವನ್ನು ಪ್ರವೇಶಿಸಿವೆ ಎಂದು ಪ್ಯಾಲೆಸ್ಟೈನ್ ನಿರಾಶ್ರಿತರ ವಿಶ್ವಸಂಸ್ಥೆಯ ಪರಿಹಾರ ಸಂಸ್ಥೆ ವರದಿ ಮಾಡಿದೆ. ಪರಿಹಾರ ಸಾಮಗ್ರಿ ತುಂಬಿದ ಸುಮಾರು 118 ಟ್ರಕ್?ಗಳು ಖಾನ್ ಯೂನಿಸ್?ನ ಸಮುದಾಯಗಳಿಗೆ ಮತ್ತು ದೇರ್ ಅಲ್ ಬಾಲಾಹ್?ನಲ್ಲಿರುವ ಯುಎನ್‌ಆರ್?ಡಬ್ಲ್ಯೂಎ ಆಶ್ರಯ ಶಿಬಿರಗಳಿಗೆ 53,000 ಕ್ಕೂ ಹೆಚ್ಚು ಆಹಾರದ ಪೊಟ್ಟಣಗಳನ್ನು ತಲುಪಿಸಿವೆ.

ಸುರಕ್ಷಿತ ಜನನ, ತುರ್ತು ಪ್ರಸೂತಿ ಆರೈಕೆ, ಪ್ರಸವಾನಂತರದ ಕಿಟ್‌ಗಳು, ಗರ್ಭನಿರೋಧಕಗಳು ಮತ್ತು ಚಳಿಗಾಲದ ವಸ್ತುಗಳು ಸೇರಿದಂತೆ ಇತರ ಅಗತ್ಯ ವಸ್ತುಗಳನ್ನು 20 ಟ್ರಕ್‌ಗಳು ದೇರ್ ಅಲ್ ಬಾಲಾಹ್‌ಗೆ ತಲುಪಿಸಿವೆ ಮತ್ತು ಯುಎನ್‌ಎಫ್‌ಪಿಎ ಸಹಾಯವನ್ನು ಹೊತ್ತ ಇನ್ನೂ 20 ಟ್ರಕ್?ಗಳು ಬುಧವಾರ ಉತ್ತರ ಗಾಜಾವನ್ನು ಪ್ರವೇಶಿಸಿವೆ ಎಂದು ಯುಎನ್ ಜನಸಂಖ್ಯಾ ನಿಧಿ ವರದಿ ಮಾಡಿದೆ.

# ಬಾಳಾಸಾಹೇಬ್ ಠಾಕ್ರೆಯವರಿಗೆ ಪಿಎಂ ಮೋದಿ ಗೌರವ ನಮನ

**ನವದೆಹಲಿ:** ಶಿವಸೇನಾ ಸಂಸ್ಥಾಪಕ ಬಾಳಾಸಾಹೇಬ ಠಾಕ್ರೆ ತಮ್ಮ ಮೂಲ ಸಿದ್ಧಾಂತಗಳೊಂದಿಗೆ ಎಂದಿಗೂ ರಾಜಿ ಮಾಡಿಕೊಳ್ಳಲಿಲ್ಲ ಮತ್ತು ಭಾರತೀಯ ಸಂಸ್ಕೃತಿಯ ಹೆಮ್ಮೆಯನ್ನು ಹೆಚ್ಚಿಸಲು ಬಹಳ ದೊಡ್ಡ ಕೊಡುಗೆ ನೀಡಿದ್ದಾರೆ ಎಂದು ಪ್ರಧಾನಿ ನರೇಂದ್ರ ಮೋದಿ ಗುರುವಾರ ಹೇಳಿದ್ದಾರೆ. ಠಾಕ್ರೆ ಅವರ ಜನ್ಮದಿನಾಚರಣೆಯಂದು ಪ್ರಧಾನಿ ಮೋದಿ ಅವರಿಗೆ ಗೌರವ ನಮನ ಸಲ್ಲಿಸಿ ಸಾಮಾಜಿಕ ಮಾಧ್ಯಮ ಎಕ್ಸ್?ನಲ್ಲಿ ಪೋಸ್ಟ್ ಮಾಡಿದ್ದಾರೆ.

"ಬಾಳಾಸಾಹೇಬ್ ಠಾಕ್ರೆ ಅವರ ಜನ್ಮ ದಿನಾಚರಣೆಯಂದು ನಾನು ಅವರಿಗೆ ಗೌರವ ಸಲ್ಲಿಸುತ್ತೇನೆ. ಜನರ ಕಲ್ಯಾಣ ಮತ್ತು ಮಹಾರಾಷ್ಟ್ರದ ಅಭಿವೃದ್ಧಿಗೆ ಅವರ ಬದ್ಧತೆಗಾಗಿ ಅವರನ್ನು ಗೌರವಿಸಲಾಗುತ್ತದೆ



ಮತ್ತು ನೆನಪಿಸಿಕೊಳ್ಳಲಾಗುತ್ತದೆ. ಅವರು ತಮ್ಮ ಮೂಲ ನಂಬಿಕೆಗಳ ವಿಷಯಕ್ಕೆ ಬಂದಾಗ ಎಂದಿಗೂ ರಾಜಿ ಮಾಡಿಕೊಳ್ಳಲಿಲ್ಲ ಮತ್ತು ಭಾರತೀಯ ಸಂಸ್ಕೃತಿಯ ಹೆಮ್ಮೆಯನ್ನು ಹೆಚ್ಚಿಸಲು ನಿರಂತರವಾಗಿ ಕೊಡುಗೆ ನೀಡಿದರು." ಎಂದು ಮೋದಿ ಪೋಸ್ಟ್ ಮಾಡಿದ್ದಾರೆ.

ಬಾಳಾಸಾಹೇಬ್ ಠಾಕ್ರೆ ಅವರ ಶಿವಸೇನೆಯು ಆರಂಭದಲ್ಲಿ ಮರಾಠಿ ಮಾಣೂಸ್ ಅಥವಾ ಮರಾಠಿ ಭಾಷಿಕರ ಶ್ರೇಯೋಭಿವೃದ್ಧಿಗಾಗಿ ಹೋರಾಡುವ ಪಕ್ಷವಾಗಿತ್ತು. ಆದರೆ ನಂತರದ ವರ್ಷಗಳಲ್ಲಿ ಇದು ಉಗ್ರ ಹಿಂದೂ ಪರ ಸಂಘಟನೆಯಾಗಿ ಬೆಳೆಯಿತು. ಮಹಾರಾಷ್ಟ್ರದಲ್ಲಿ ದೊಡ್ಡ ಪ್ರಮಾಣದಲ್ಲಿ ಅನುಯಾಯಿಗಳನ್ನು ಹೊಂದಿದ್ದ ಬಾಳಾಸಾಹೇಬ್ ಠಾಕ್ರೆ ಅವರ ವರ್ಚಸ್ಸು ನಂತರದ ದಿನಗಳಲ್ಲಿ ದೇಶಾದ್ಯಂತ ಬೆಳೆಯಿತು.

ಬಾಳಾಸಾಹೇಬ್ ಜನವರಿ 23, 1926 ರಂದು ಪುಣೆಯಲ್ಲಿ ಜನಿಸಿದರು ಮತ್ತು ನವೆಂಬರ್ 17, 2012 ರಂದು ಮುಂಬೈನಲ್ಲಿ ತಮ್ಮ 86 ನೇ ವಯಸ್ಸಿನಲ್ಲಿ ನಿಧನರಾದರು.

ಉಪಮುಖ್ಯಮಂತ್ರಿ ಏಕನಾಥ್ ಶಿಂಧೆ ಕೂಡ ಠಾಕ್ರೆ ಅವರಿಗೆ ಗೌರವ ನಮನ ಸಲ್ಲಿಸಿದ್ದಾರೆ. "ಪೂಜ್ಯ ಹಿಂದೂ ಹೃದಯ ಸಾಮ್ರಾಟ್, ಶಿವಸೇನೆ ಮುಖ್ಯಸ್ಥ ಬಾಳಾಸಾಹೇಬ್ ಠಾಕ್ರೆ ಅವರ ಜನ್ಮ ದಿನಾಚರಣೆಯಂದು ಅವರಿಗೆ ವಿನಮ್ರ ಗೌರವಗಳು" ಎಂದು ಅವರು ಎಕ್ಸ್‌ನಲ್ಲಿ ಮರಾಠಿಯಲ್ಲಿ ಪೋಸ್ಟ್ ಮಾಡಿದ್ದಾರೆ.

ಠಾಕ್ರೆ ನಿಧನದ ನಂತರ ಅವರು ಸ್ಥಾಪಿಸಿದ ಪಕ್ಷದಲ್ಲಿ ಸಾಕಷ್ಟು ಬದಲಾವಣೆಗಳಾಗಿವೆ. ಶಿಂಧೆ ಅಂದಿನ ಪಕ್ಷದ ನಾಯಕತ್ವದ ವಿರುದ್ಧ ದಂಗೆ ಎದ್ದ ನಂತರ 2022 ರಲ್ಲಿ ಶಿವಸೇನೆ ವಿಭಜನೆಯಾಯಿತು. ಇದು ಮಹಾ ವಿಕಾಸ್ ಅಘಾಡಿ (ಎಂವಿಎ) ಸರ್ಕಾರದ ಪತನಕ್ಕೆ ಕಾರಣವಾಯಿತು ಮತ್ತು ಉದ್ಧವ್ ಠಾಕ್ರೆ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಬೇಕಾಯಿತು. ನಂತರ ಶಿಂಧೆ ಅವರು ಮುಖ್ಯಮಂತ್ರಿಯಾಗಿ ಮಹಾರಾಷ್ಟ್ರದಲ್ಲಿ ಸರ್ಕಾರ ರಚಿಸಲು ಬಿಜೆಪಿಯೊಂದಿಗೆ ಕೈಜೋಡಿಸಿದರು. ನಂತರ, ಚುನಾವಣಾ ಆಯೋಗವು ಶಿಂಧೆ ನೇತೃತ್ವದ ಬಣವನ್ನು 'ನಿಜವಾದ' ಶಿವಸೇನೆ ಎಂದು ಗುರುತಿಸಿತು.

# ಗುತ್ತಿಗೆದಾರನಿಂದ ಕೆರೆಯ ಮಣ್ಣಿನ ಕಳ್ಳಸಾಗಾಣಿಕೆ

**ಕುಕನೂರು:** ತಾಲೂಕಿನ ಮಂಡಲಗೇರಿ ಗ್ರಾಮದ ಸರ್ಕಾರಿ ಪ್ರೌಢಶಾಲೆಯ ಹಿಂಬದಿಯ ಕೆರೆಯ ಮಣ್ಣನ್ನು ( ಗರಸು ಮಣ್ಣು ) ಖಾಸಗಿ ಲೇಔಟ್ ಗುತ್ತಿಗೆದಾರರೊಬ್ಬರು ರಾತ್ರೋ ರಾತ್ರಿ ಕಳ್ಳಸಾಗಾಣಿಕೆ ಮಾಡಿ ಗ್ರಾಮಸ್ಥರ ಕೈಗೆ ಸಿಕ್ಕಿಬಿದ್ದಿದ್ದಾನೆ.

ಈ ಗ್ರಾಮದ ಕೆರೆಯ ಪಕ್ಕದಲ್ಲಿಯೇ ಖಾಸಗಿ ಲೇಔಟ್ ನಿರ್ಮಾಣ ಕಕಾಮಗಾರಿ ನಡೆಯುತ್ತಿದ್ದು ಗುತ್ತಿಗೆದಾರ ಕುಷ್ಟಗಿ ಮೂಲದ ಶರಣಪ್ಪ ಕುಂಬಾರ ಎಂಬಾತನು ರಾತ್ರಿ ಹೊತ್ತಲ್ಲಿ ಒಂದು ಜೇಸಿಬಿ ಯಂತ್ರ ಸುಮಾರು 6 ಟ್ಯಾಕ್ಟರ್ ಬಳಸಿಕೊಂಡು ಕೆರೆಯ ಮಣ್ಣನ್ನು ಕಳ್ಳ ಸಾಗಾಣಿಕೆ ಮಾಡಿದ್ದಾನೆ.

ಬೆಳಿಗ್ಗೆ ಇದನ್ನು ಗಮನಿಸಿ ಪರಿಶೀಲಿಸಿದ ಗ್ರಾಮಸ್ಥರು ಗುತ್ತಿಗೆದಾರ ಶರಣಪ್ಪ ಕುಂಬಾರನನ್ನು ಕೇಳಿದಾಗ ಆತನು ತಾನೇ ಕೆರೆಯ ಮಣ್ಣನ್ನು ಲೇಔಟ್ ಕಾರ್ಯಕ್ಕೆ ರಾತ್ರಿ ವೇಳೆ ಸಾಗಾಣಿಕೆ ಮಾಡಿದ್ದು, ತಪ್ಪನ್ನು ಕ್ಷಮಿಸಿ ಎಂದು



**ಕೆರೆಯ ಮಣ್ಣನ್ನು ಅಕ್ರಮವಾಗಿ ಸಾಗಾಣಿಕೆ ಸಾಬೀತಾಗಿದ್ದು, ಗುತ್ತಿಗೆದಾರ ತಪ್ಪನ್ನು ಒಪ್ಪಿಕೊಂಡಿದ್ದಾನೆ. ಮುಂದಿನ ಕ್ರಮಕ್ಕೆ ಮೇಲಧಿಕಾರಿಗಳಿಗೆ ಮಾಹಿತಿ ನೀಡುವೆ.**
**ಮಹೇಶ್ ಗೌಡ** । ಗ್ರಾಮ ಆಡಳಿತ ಅಧಿಕಾರಿ.

ಕೇಳಿಕೊಂಡಿದ್ದಾನೆ. ಸ್ಥಳಕ್ಕೆ ಗ್ರಾಮ ಲೆಕ್ಕಧಿಕಾರಿ ಬಂದು ಪರಿಶೀಲನೆ ಮಾಡಿದ್ದು ಕೆರೆಯ ಗರಸು ಮಣ್ಣು ಅಕ್ರಮ ಸಾಗಾಣಿಕೆ ಆಗಿರುವುದು ಕಂಡು ಬಂದಿದೆ. ತಪ್ಪಿತಸ್ತರಿಗೆ ಸೂಕ್ತ ಕ್ರಮ ಜರುಗಿಸಲು ಗ್ರಾಮಸ್ಥರು ಒತ್ತಾಯಿಸಿದ್ದಾರೆ.



# ಬಾತ್ ರೂಮ್ ಫೋಟೋಸ್ ಹಂಚಿಕೊಂಡ ರಾಗಿಣಿ

ಸ್ಯಾಂಡಲ್‌ವುಡ್‌ನಲ್ಲಿ ಸಖತ್ ಆಗಿ ಮಿಂಚಿತ್ತಿರುವ ರಾಗಿಣಿ ದ್ವಿವೇದಿ ದಕ್ಷಿಣ ಭಾರತದ ಚಲನಚಿತ್ರ ನಟಿ ಮತ್ತು ರೂಪದರ್ಶಿ, ಇವರು ಕನ್ನಡ ಮತ್ತು ತಮಿಳು ಎರಡೂ ಚಲನಚಿತ್ರಗಳಲ್ಲಿ ಕೆಲಸ ಮಾಡುತ್ತಾರೆ.

ಇತ್ತೀಚೆಗಷ್ಟೇ ರಾಗಿಣಿ ದ್ವಿವೇದಿ ವಿರುದ್ಧದ ಮಾದಕವಸ್ತು ಸೇವನೆ ಹಾಗೂ ಮಾರಾಟಕ್ಕೆ ರೇವ್ ಪಾರ್ಟಿ ಆಯೋಜಿಸಿದ್ದರು ಎನ್ನಲಾಗಿದ್ದ ಪ್ರಕರಣವನ್ನು ಕರ್ನಾಟಕ ಹೈಕೋರ್ಟ್ ರದ್ದುಪಡಿಸಿತ್ತು.

ರಾಗಿಣಿ ಹೆಚ್ಚಾಗಿ ಮಾಡರ್ನ್ ಡ್ರೆಸ್‌ಗಳಲ್ಲಿ ಅದರಲ್ಲೂ ಹೆಚ್ಚಾಗಿ ಸ್ವಿಮ್ ಸೂಟ್, ತುಂಡುಡುಗೆಯಲ್ಲಿ ಕಾಣಿಸಿಕೊಂಡಿದ್ದೇ ಹೆಚ್ಚು. ಇದೀಗ ನಟಿ ಬಾತ್‌ರೂಮ್ ಫೋಟೋಸ್ ಹಂಚಿಕೊಂಡಿದ್ದಾರೆ.

ಹೌದು! ರಾಗಿಣಿ, ಮಾರ್ನಿಂಗ್ ಜಿಮ್ ವರ್ಕೌಟ್ ಮುಗಿಸಿ, ಜಿಮ್ ಡ್ರೆಸ್‌ನಲ್ಲಿ ಬಾತ್‌ರೂಮ್ ಕನ್ನಡಿ ಮುಂದೆ ನಿಂತು ಫೋಟೋ ಕ್ಲಿಕ್ಕಿಸಿಕೊಂಡಿದ್ದಾರೆ. ಜೊತೆಗೆ ಡಿಫರೆಂಟ್ ಪೋಸ್ ಸಹ ಕೊಟ್ಟಿದ್ದಾರೆ.

ರಾಗಿಣಿ ಫೋಟೋಸ್ ನೋಡಿ ನೆಟ್ಟಿಗರು ಫುಲ್ ಸುಸ್ತು ಆಗಿದ್ದಾರೆ. ಬ್ಯೂಟಿಫುಲ್ ಗರ್ಲ್, ಹಾಟ್‌ನೆಸ್ ತುಪ್ಪದ ಬೆಡಗಿ ಅಂತೆಲ್ಲಾ ಕಮೆಂಟ್ ಮಾಡಿದ್ದಾರೆ. ಸದ್ಯ ನಟಿ ರಾಗಿಣಿ ಇದೀಗ ಮಹಾರಾಷ್ಟ್ರದಲ್ಲಿದ್ದಾರೆ.

ರಾಗಿಣಿ ಕನ್ನಡ, ತಮಿಳು, ಮಲಯಾಲಂ ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ. ಕಳೆದ ವರ್ಷ ನಟಿ ತಮಿಳಿನ ಕಿಕ್ ಮತ್ತು ಇಮೇಲ್ ಎನ್ನುವ ಸಿನಿಮಾಗಳಲ್ಲಿ ನಟಿಸಿದ್ದರು.

ಇದೀಗ ಕನ್ನಡದಲ್ಲಿ ವೃಷಭ, ಸಾರಿ ಕರ್ಮ ರಿಟರ್ನ್ಸ್ ಎನ್ನುವ ಸಿನಿಮಾದಲ್ಲಿ ನಟಿಸುತ್ತಿದ್ದಾರೆ, ಜೊತೆಗೆ ಶ್ರೀನಗರ ಕಿಟ್ಟಿ ಮತ್ತು ರಚಿತಾ ರಾಮ್ ನಟನೆಯ ಸಂಜು ವೆಡ್ಸ್ ಗೀತಾ 2 ಸಿನಿಮಾದಲ್ಲಿ ವಿಲನ್ ಪಾತ್ರದಲ್ಲೂ ರಾಗಿಣಿ ಕಾಣಿಸಿಕೊಂಡಿದ್ದಾರೆ.

# ತೆಲುಗು ಚಿತ್ರರಂಗದ ಪಾಲಾದ ತನ್ವಿಯಾ ಬಾಲರಾಜ್



ಬದುಕಿನಲ್ಲಿ ಕಂಡ ಕನಸು ನನಸು ಮಾಡಿಕೊಳ್ಳಲು ಸಾಕಷ್ಟು ಪರಿಶ್ರಮವಿರಬೇಕು. ಜೊತೆಗೆ ಎಷ್ಟೇ ಕಷ್ಟಗಳು ಬಂದರೂ ಕುಗ್ಗದೇ ಎದುರಿಸುವ ಧೈರ್ಯವಿರಬೇಕು.ಕಷ್ಟಗಳು ಕಳೆಯುವ ಹೊತ್ತಿಗೆ ಗೆಲುವು ತಾನಾಗಿಯೇ ಹಿಂಬಾಲಿಸುತ್ತದೆ. ಒಮ್ಮೆ ಗೆದ್ದ ಮೇಲೆ ಮೇಲಿಂದ ಮೇಲೆ ಸಾಧನೆಗಳ ಸರಮಾಲೆಯನ್ನೇ ಪೋಣಿಸಿಕೊಳ್ಳವಷ್ಟು ಗೆಲ್ಲಬಹುದು.ಇದಕ್ಕೆ ನಿದರ್ಶನ ಎಂದರೆ ನಟಿ ತನ್ವಿಯಾ ಬಾಲರಾಜ್.

ಒಂದು ಸಮಯದಲ್ಲಿ ಕಷ್ಟಪಡುತ್ತಿದ್ದ ತನ್ವಿಯಾ ಇಂದು ಪರಭಾಷೆಯಲ್ಲೂ ಬೇಡಿಕೆಯ ನಟಿಯಾಗಿದ್ದಾರೆ. ಕಷ್ಟದ ಬದುಕಿನಲ್ಲಿ ನರಳಿದ್ದ ನಟಿ ಹೌದು, ನಟಿ ತನ್ವಿಯಾ ಬಾಲರಾಜ್ ಎಂದರೆ ಎಲ್ಲರಿಗೂ ಗುರುತು ಸಿಗಲಿಕ್ಕಿಲ್ಲ. ಅದೇ ಆರಾಧನಾ ಎಂದರೆ ಎಲ್ಲರೂ ತಿರುಗಿ ನೋಡುತ್ತಾರೆ. ಕಳೆದ ವರ್ಷವಷ್ಟೇ ಮುಕ್ತಾಯಗೊಂಡ ಅಂತರಪಟ ಧಾರಾವಾಹಿಯಲ್ಲಿ ನಾಯಕಿ ಪಾತ್ರದಲ್ಲಿ ನಟಿಸುತ್ತಿದ್ದ ಆರಾಧನಾಳೇ ತನ್ವಿಯಾ ಬಾಲರಾಜ್.

ಮಂಡ್ಯದ ಹುಡುಗಿಯಾಗಿರುವ ತನ್ವಿಯಾ ಅವರು ಮಿಡಲ್ ಕ್ಲಾಸ್ ಕುಟುಂಬದಿಂದ ಬಂದವರು. ಬಿಕಾಂ ಓದಿರುವ ತನ್ವಿಯಾ ಅವರಿಗೆ ನಟಿಯಾಗುವ ಆಸೆ ಇತ್ತಂತೆ. ಇವರ ತಂದೆ ಕಂಟ್ರ್ಯಾಕ್ಟರ್ ಆಗಿಯೂ, ತಾಯಿ ಹೂವು ಮಾರುತ್ತಲೂ ಬದುಕು ನಡೆಸುತ್ತಿದ್ದರಂತೆ. ನಟಿಯಾಗುವ ಕನಸನ್ನು ನನಸು ಮಾಡಿಕೊಳ್ಳುವ ಮುನ್ನ ಡ್ಯಾನ್ಸರ್ ಆಗಿದ್ದ ತನ್ವಿಯಾ ಅವರು ಕಲರ್ಸ್ ವಾಹಿನಿಯ ಕಾರ್ಯಕ್ರಮಗಳಿಗೆ ಬ್ಯಾಕ್ ಗ್ರೌಂಡ್ ಡ್ಯಾನ್ಸರ್ ಆಗಿ ಕೆಲಸ ಮಾಡುತ್ತಿದ್ದರು.

ಒಲಿದು ಬಂದ ಅದೃಷ್ಟ ಅದೊಂದು ದಿನ ಅಚಾನಕ್ ಆಗಿ ಗಿಣಿರಾಮ ಸೀರಿಯಲ್ ಸಂತೆಯ ಕಾರ್ಯಕ್ರಮಕ್ಕಾಗಿ ಡ್ಯಾನ್ಸ್ ಹೇಳಿಕೊಡುವಾಗ ಅದೃಷ್ಟದ ಬಾಗಿಲು ತೆರೆದಿತ್ತು. ಅಂತರಪಟ ಧಾರಾವಾಹಿಯ ಆಡಿಷನ್ ಗೆ ಬರುವಂತೆ ಕರೆಯೋಲೆ ಸಿಕ್ಕಿತ್ತು. ಅವಕಾಶವನ್ನು ಕೈ ಬಿಡದ ನಟಿ ತನ್ವಿಯಾ ಅವರು ಆಡಿಷನ್ ಕೊಟ್ಟು ಧಾರಾವಾಹಿಯ ನಾಯಕಿಯಾಗಿ ಸೆಲೆಕ್ಟ್ ಆಗಿಯೇ ಬಿಟ್ಟಿದ್ದರು. ಧಾರಾವಾಹಿ ಪ್ರಸಾರವಾದಾಗ ತನ್ವಿಯಾ ಅವರ ನಟನೆಯನ್ನು ಮೆಚ್ಚಿದ ವೀಕ್ಷಕರು ಬಾಚಿ ತಬ್ಬಿದ್ದರು. ಇಂದಿಗೂ ಕನ್ನಡಿಗರು ಆರಾಧನಾ ಪಾತ್ರವನ್ನು ಮಿಸ್ ಮಾಡಿಕೊಳ್ಳುತ್ತಿದ್ದಾರೆ. ಆಗಾಗ ಕಲರ್ಸ್ ವಾಹಿನಿಯ ಸೋಶಿಯಲ್ ಮೀಡಿಯಾ ಪೇಜ್ ನಲ್ಲಿ ಅಂತರಪಟ ಪಾರ್ಟ್–2 ಧಾರಾವಾಹಿಯನ್ನು ನಿರ್ದೇಶಿಸುವಂತೆ ಕೇಳುತ್ತಲೇ ಇರುತ್ತಾರೆ.

ನಟಿ ತನ್ವಿಯಾ ಅವರು ಈಗ ಮತ್ತೊಂದು ಹೆಜ್ಜೆ ಮುಂದೆ ಹೋಗಿದ್ದಾರೆ. ಹೌದು, ನಟಿ ತನ್ವಿಯಾ ಬಾಲರಾಜ್ ಅವರಿಗೆ ತೆಲುಗಿನ ಧಾರಾವಾಹಿಯಲ್ಲಿ ನಟಿಸುವ ಅವಕಾಶ ಒದಗಿ ಬಂದಿದೆ. ಎನ್ನೆಲ್ಲೋ ವೆಚ್ಚಿನ ಹೃದಯಂ ಎಂಬ ತೆಲುಗು ಧಾರಾವಾಹಿಯಲ್ಲಿ ನಟಿ ತನ್ವಿಯಾ ಅವರು ನಾಯಕಿಯಾಗಿ ಕಾಣಿಸಿಕೊಂಡಿದ್ದಾರೆ. ಈ ಧಾರಾವಾಹಿಗೆ ನಟ ಚಂದು ಗೌಡ ಅವರು ನಾಯಕನಾಗಿ ನಟಿಸಿದ್ದಾರೆ.

ನಾಯಕನಿಗೆ ವಯಸ್ಸಾಗಿದ್ದರೂ ಬುದ್ಧಿ ಮಾತ್ರ ಮಗುವಿನಂತೆ ಇದ್ದು, ಚಿಕ್ಕವರ ಜೊತೆಗೆ ಯೂನಿಫಾರ್ಮ್ ಧರಿಸಿ ಶಾಲೆಗೆ ತೆರಳುತ್ತಾನೆ. ಕಷ್ಟದ ಬದುಕು ನಡೆಸುತ್ತಿರುವ ನಾಯಕಿಗೆ ಹಣದ ಅವಶ್ಯಕತೆ ಇದ್ದು ನಾಯಕನನ್ನು ಮದುವೆಯಾಗುವ ಸಂದರ್ಭ ಒದಗಿ ಬಂದಿದೆ. ಜೊತೆಗೆ ನಾಯಕಿಯೇ ನಾಯಕನ ಶಾಲೆಯಲ್ಲಿ ಶಿಕ್ಷಕಿಯಾಗಿದ್ದು, ನಾಯಕ ಬದುಕನ್ನು ಹಸನಾಗಿಸುತ್ತಾಳಾ ಎಂಬುದನ್ನು ಕಾದು ನೋಡಬೇಕಿದೆ.

ಈ ಧಾರಾವಾಹಿಯು ಮುಂದಿನ ಸೋಮವಾರದಿಂದ ಜೀ ತೆಲುಗು ವಾಹಿನಿಯಲ್ಲಿ ಪ್ರಸಾರವಾಗಲಿದೆ. ಸಾಧನೆಯ ಹಾದಿಯಲ್ಲಿ ತನ್ವಿಯಾ ಇನ್ನು ನಟಿ ತನ್ವಿಯಾ ಅವರು ಒಂದು ಕಾಲದಲ್ಲಿ ಬೆಂಗಳೂರಿನಲ್ಲಿ ನೆಲೆಸಲು ಕಷ್ಟಪಡಬೇಕಿತ್ತು. ಚಿಕ್ಕ ಅಕ್ಕನ ಮನೆಯಲ್ಲಿ ನೆಲೆಸಿದ್ದಾಗ ಭಾವ ನಿತ್ಯ ಬೈಯುತ್ತಿದ್ದರಂತೆ. ಒಮ್ಮೆ ಬೈಗುಳ ಕೇಳಲಾರದೇ ಮಧ್ಯರಾತ್ರಿಯೇ ಮನೆ ಬಿಟ್ಟು ಬಂದಿದ್ದರಂತೆ.

ಮನೆಯಲ್ಲಿ ತನ್ವಿಯಾ ಅವರು ಡ್ಯಾನ್ಸ್ ಮಾಡುವುದನ್ನು ಇಷ್ಟಪಡುತ್ತಿರಲಿಲ್ಲವಂತೆ. ಮಧ್ಯರಾತ್ರಿ ಮನೆಗೆ ಬರುವುದಕ್ಕೆ ಬೈಗುಳ ಸಿಗುತ್ತಿತ್ತಂತೆ. ಆದರೆ ಈಗ ನಟಿ ತನ್ವಿಯಾ ಅವರು ಜನಿಸಿದ ಊರು ಬಿಟ್ಟು ದೂರದ ಊರಿನಲ್ಲೂ ತಮ್ಮ ನಟನಾ ಗಂಧವನ್ನು ಸೂಸಿದ್ದು, ಸದ್ಯ ದೊಡ್ಡ ಅಕ್ಕನ ಮನೆಯಲ್ಲಿ ನೆಲೆಸಿದ್ದಾರಂತೆ. ಕಷ್ಟದಲ್ಲಿದ್ದ ತನ್ವಿಯಾ ಅವರಿಗೆ ಗೆಲುವಿನ ಬಾಗಿಲು ತೆರೆದುಕೊಂಡಿದೆ. ಇನ್ನೇನಿದ್ದರೂ ಸಾಧನೆಯ ಮಾಲೆಯನ್ನು ಧರಿಸಿ ಕೊಳ್ಳುವುದಷ್ಟೇ ಬಾಕಿ ಇದೆ

# ‘ನನ್ನನ್ನು ತೆಗೆದು ಹಾಕಲಾಯಿತು’



ಅಕ್ಷಯ್ ಕುಮಾರ್ ಅವರು ಬಾಲಿವುಡ್‌ನ ಸ್ಟಾರ್ ಹೀರೋ. ಅವರಿಗೆ ಸಾಕಷ್ಟು ಬೇಡಿಕೆ ಇದೆ. ವರ್ಷಕ್ಕೆ ಮೂರರಿಂದ ನಾಲ್ಕು ಸಿನಿಮಾಗಳು ರಿಲೀಸ್ ಆಗುತ್ತವೆ. ಅವರ ಸಿನಿಮಾಗಳು ಸತತ ಸೋಲು ಕಂಡರೂ ಸಿನಿಮಾ ಮಡೋದನ್ನು ಮಾತ್ರ ಅವರು ನಿಲ್ಲಿಸಿಲ್ಲ.


ಅವರು ‘ಭೂಲ್ ಭುಲಯ್ಯ’ ಸಿನಿಮಾದಲ್ಲಿ ನಟಿಸಿದ್ದರು. ಆದರೆ, ‘ಭೂಲ್ ಭುಲಯ್ಯ’ ಎರಡು ಹಾಗೂ ಮೂರನೇ ಭಾಕ್ಕೆ ಅಕ್ಷಯ್ ಕುಮಾರ್ ಬದಲು ಕಾರ್ತಿಕ್ ಆರ್ಯನ್ ನಟಿಸಿದರು. ಈ ಬಗ್ಗೆ ಅಕ್ಷಯ್ ಉತ್ತರಿಸಿದ್ದಾರೆ. ಅಕ್ಷಯ್ ಕುಮಾರ್ ಅವರು ಬಾಲಿವುಡ್‌ನ ಸ್ಟಾರ್ ನಟ ಹೌದು. ಆದರೆ, ಅವರ ಸಿನಿಮಾಗಳು ಹೀನಾಯ ಕಲೆಕ್ಷನ್ ಮಾಡುತ್ತಿವೆ. ನಿರ್ಮಾಪಕರಿಗೆ ಅವರಿಂದ ನಷ್ಟವೇ ಹೆಚ್ಚು. ಅಲ್ಲದೆ ಅವರು ದೊಡ್ಡ ಮೊತ್ತದಲ್ಲಿ ಸಂಭಾವನೆ ಪಡೆಯುತ್ತಾರೆ. ಈ ಕಾರಣದಿಂದಲೇ ಅವರನ್ನು ‘ಭೂಲ್ ಭುಲಯ್ಯ 2’ ಚಿತ್ರದಿಂದ ಹೊರಕ್ಕೆ ಇಡಲಾಯಿತು ಎನ್ನುವ ಮಾತಿದೆ. ಈ ಬಗ್ಗೆ ಕೊನೆಗೂ ಅಕ್ಷಯ್ ಮೌನ ಮುರಿದಿದ್ದಾರೆ.

ಇತ್ತೀಚೆಗೆ ಅವರು ಸಂದರ್ಶನ ಒಂದರಲ್ಲಿ ಅಭಿಮಾನಿಗಳ ಜೊತೆ ಮಾತನಾಡುವ ಅವಕಾಶ ಪಡೆದರು. ಈ ವೇಳೆ ಓರ್ವ ಅಭಿಮಾನಿ, ‘ನೀವಿಲ್ಲ ಎಂಬ ಕಾರಣಕ್ಕೆ ಭೂಲ್ ಬುಲಯ್ಯ 2 ಹಾಗೂ ‘ಭೂಲ್ ಭುಲಯ್ಯ 3 ಚಿತ್ರವನ್ನು ವೀಕ್ಷಿಸಿಲ್ಲ’ ಎಂದರು. ಇದಕ್ಕೆ ಅಕ್ಷಯ್ ಉತ್ತರಿಸಿ, ‘ಅವರು ನನ್ನನ್ನು ತೆಗೆದು ಹಾಕಿದರು, ಅಷ್ಟೇ’ ಎಂದಿದ್ದಾರೆ. ಅಕ್ಷಯ್ ಕುಮಾರ್‌ಗೆ ಈ ಬಗ್ಗೆ ಬೇಸರ ಇದೆ ಎನ್ನಲಾಗಿದೆ.

1993ರಲ್ಲಿ ಬಂದ ಮಲಯಾಳಂನ ‘ಮಣಿಚಿತ್ರತಳು’ ಸಿನಿಮಾದ ರಿಮೇಕ್ ಆಗಿದೆ. ಇದನ್ನು ಹಿಂದಿಗೆ ‘ಭೂಲ್ ಭುಲಯ್ಯ’ ಹೆಸರಲ್ಲಿ ರಿಮೇಕ್ ಮಾಡಲಾಯಿತು. ಅಕ್ಷಯ್ ಕುಮಾರ್ ಅವರು ಡಾಕ್ಟರ್ ಆದಿತ್ಯ ಶ್ರೀವಾಸ್ತವ್ ಹೆಸರಿನ ಪಾತ್ರ ಮಾಡಿದ್ದರು. ಆದರೆ, ಎರಡನೇ ಪಾರ್ಟ್‌ನಲ್ಲಿ ಅವರ ಬದಲು ಕಾರ್ತಿಕ್ ಬಂದರು. ಈ ಚಿತ್ರ ಹಿಟ್ ಆಯಿತು. ಮೂರನೇ ಪಾರ್ಟ್ ವಿಮರ್ಶೆಯಲ್ಲಿ ಸೋತಿದೆ. ಆದರೆ, ಬಾಕ್ಸ್ ಆಫೀಸ್‌ನಲ್ಲಿ ಉತ್ತಮ ಕಲೆಕ್ಷನ್ ಮಾಡಿದೆ. ಈ ಚಿತ್ರದ ನಿರ್ದೇಶಕ ಅನೀಸ್ ಬಾಜ್ಮೆ ಅವರು ಅಕ್ಷಯ್ ಜೊತೆ ಒಳ್ಳೆಯ ಗೆಳೆತನ ಇದ್ದು ಮುಂದಿನ ದಿನಗಳಲ್ಲಿ ಸಿನಿಮಾ ಮಾಡೋದಾಗಿ ಹೇಳಿದ್ದಾರೆ.

# ಪ್ಲೀಸ್ ಯಾರಿಗೂ ಹೇಳ್ಬೇಡಿ ಆಯ್ತಾ

ಅದು ತೊಂಬತ್ತರ ದಶಕ. ಕನ್ನಡ ಸಿನಿಮಾರಂಗದಲ್ಲಿ ಹತ್ತುಹಲವು ಪ್ರಯೋಗಗಳಿಗೆ ದಾರಿ ಮಾಡಿಕೊಟ್ಟ ದಶಕವದು. ಹಲವು ಹಾಸ್ಯ ಉಕ್ಕಿಸುವ ಸಿನಿಮಾಗಳು ಈ ಕಾಲದಲ್ಲಿ ಬಂದಿದೆ. ಅವುಗಳಲ್ಲಿ ಮುಖ್ಯವಾದವು ನಟ ಅನಂತ್ ನಾಗ್ (ಓಟಿಚಿಟಿಣ ಓಚಿರ) ನಟನೆಯ ಕಾಮಿಡಿ ಸಿನಿಮಾಗಳು. ಅದರಲ್ಲೂ ಅನಂತ್ ನಾಗ್ ಹಾಗೂ ಫಣಿ ರಾಮಚಂದ್ರ ಜೋಡಿಯ ಚಿತ್ರಗಳು ಸಖತ್ ಸದ್ದು ಮಾಡಿದ್ದವು. ಅನಂತ್ ನಾಗ್, ವಿನಯಾ ಪ್ರಸಾದ್ ಜೋಡಿ, ಅನಂತ್‌ನಾಗ್–ವಿನಯಾ ಪ್ರಸಾದ್ ಜೋಡಿ ಹೀಗೆ ಬಂದ ಚಿತ್ರಗಳು ಶತದಿನೋತ್ಸವ ಆಚರಿಸಿ ಸೂಪರ್ ಹಿಟ್ ಎನಿಸಿದ್ದವು.



ನಟ ಅನಂತ್ ನಾಗ್ ಅವರ ನಟನೆಯಲ್ಲಿ ಗೌರಿ ಗಣೇಶ, ಗಣೇಶನ ಮದುವೆ, ಗಣೇಶ ಸುಬ್ರಹ್ಮಣ್ಯ ಹಾಗೂ ಯಾರಿಗೂ ಹೇಳ್ಬೇಡಿ ಮುಂತಾದ ಸಿನಿಮಾಗಳನ್ನು ಅಂದಿನ ಹುಡುಗರು ನೋಡಿ ಎಂಜಾಯ್ ಮಾಡಿದ್ದರು. ಕಾರಣ, ಅಂದು ಬಂದಿದ್ದ ಅನಂತ್ ನಾಗ್ ನಟನೆಯ ಆ ಎಲ್ಲ ಸಿನಿಮಾಗಳೂ ಮಕ್ಕಳಿಂದ ಮುದುಕರವರೆಗೆ ನೋಡುವಂಥ ಚಿತ್ರಗಳಾಗಿದ್ದವು. ಮನೆಮಂದಿಯೆಲ್ಲರೂ ಒಟ್ಟಿಗೇ ಕುಳಿತು ನೋಡುವಂಥ ಆ ಸಿನಿಮಾಗಳನ್ನು ಅಂದಿನ ಕಿಡ್‌ಗಳು ಎಂಜಾಯ್ ಮಾಡಿದ್ದರು.

ಇಂದಿಗೂ ಕೂಡ ಗಣೇಶನ ಮದುವೆ, ಗಣೇಶನ ಗಲಾಟೆ ಮುಂತಾದ ಸಿನಿಮಾಗಳನ್ನು ಜನರು ನೆನಪಿಸಿಕೊಳ್ಳುತ್ತಲೇ ಇರುತ್ತಾರೆ. 90ರಲ್ಲಿ ಹುಟ್ಟಿದ ಕಿಡ್ಸ್‌ಗಳು ಮಾತ್ರವಲ್ಲ, ಅವರನ್ನು ಚಿತ್ರಮಂದಿರಕ್ಕೆ ಕರೆದುಕೊಂಡು ಹೋಗ ಅಪ್ಪ–ಅಮ್ಮಂದಿರು, ಚಿಕ್ಕಪ್ಪ, ದೊಡ್ಡಪ್ಪ, ಮಾವಂದಿರು, ಜೊತೆಗಿದ್ದ ತಾತ–ಅಜ್ಜಿ ಎಲ್ಲರೂ ಆ ಸಿನಿಮಾಗಳನ್ನು ಖಂಡಿತ ಮರೆಯಲು ಸಾಧ್ಯವೇ ಇಲ್ಲ ಬಿಡಿ. ಸಿಂಗಲ್ ಮಿನಿಂಗ್ ಬೆರೆತ ಕಚಗುಳಿ ಇಡುವ ಆ ಸಂಭಾಷಣೆಗಳು, ನಗು ಉಕ್ಕಿಸುವ ಹಾಸ್ಯ ಸನ್ನಿವೇಶಗಳು ಅಂದಿನ ಅನಂತ್ ನಾಗ್ ಚಿತ್ರಗಳ ವಿಶೇಷತೆಗಳು ಎನ್ನಿಸಿದ್ದವು. ಅದರಲ್ಲೂ ಫಣಿ ರಾಮಚಂದ್ರ ಹಾಗೂ ಅನಂತ್ ನಾಗ್ ಜೋಡಿಯ ಚಿತ್ರಗಳನ್ನು ಜನರು ಅದೆಷ್ಟು ಇಷ್ಟಪಟ್ಟಿದ್ದರು ಎಂದರೆ, ಆ ಚಿತ್ರಗಳ ಸಂಭಾಷಣೆಗಳನ್ನು ಜನರು ಮನೆಮನೆಯಲ್ಲಿ ಹೇಳತೊಡಗಿದ್ದರು. ಆದರೆ ಇಂದು ಅವೆಲ್ಲವೂ ಮರೆತ ಮಾವಿನಕಾಯಿ ಆಗಿದೆ. ’ಕಾಲಾಯ ತಸ್ಮೈ ನಮಃ’ ಎನ್ನಲೇಬೇಕು. ಇಂದು ಬರುವ ಸಿನಿಮಾಗಳು ತಮ್ಮ ರೂಪವನ್ನು ಬದಲಿಸಿಕೊಂಡಿವೆ. ಇದು ಸರಿ–ತಪ್ಪು ಹುಡುಕುವ ಪ್ರಶ್ನೆಯಲ್ಲ, ಬದಲಿಗೆ ಬದಲಾವಣೆಯನ್ನು ಅರಿತು ಒಪ್ಪಿಕೊಂಡು ನಡೆಯಬೇಕಾದ ಕಾಲ ಎನ್ನಬೇಕಷ್ಟೇ!

# ‘ಕನ್ನಡ ಚಿತ್ರರಂಗ’ ಅಂದರೆ ‘ಪುನೀತ್ ಸರ್’



ಕನ್ನಡ ಚಿತ್ರರಂಗದ ಮೇಲೀಗ ಎಲ್ಲರ ಕಣ್ಣಿದೆ. ಮೊದಲೆಲ್ಲ ಕನ್ನಡ ಚಿತ್ರರಂಗದ ಕಡೆ ತಿರುಗಿ ನೋಡದವರೆಲ್ಲ ಈಗ ಕನ್ನಡ ಚಿತ್ರರಂಗ ಹಾಗೇ ಹೀಗೆ ಎಂದೆಲ್ಲ ಹೊಗಳಿ ಮಾತನಾಡುತ್ತಿದ್ದಾರೆ.

ಇನ್ನು ಐಶ್ವರ್ಯ ರೈ, ದೀಪಿಕಾ ಪಡುಕೋಣೆ, ಶಿಲ್ಪಾ ಶೆಟ್ಟಿ ಸೇರಿ ರಶ್ಮಿಕಾ ಮಂದಣ್ಣ ಮತ್ತು ಶ್ರೀಲೀಲಾವರೆಗೆ ಅನೇಕರು ಕರ್ನಾಟಕದಿಂದ ಬಾಲಿವುಡ್‌ಗೆ ವಲಸೆ ಹೋಗಿದ್ದಾರೆ. ಬದುಕು ರೂಪಿಸಿಕೊಂಡಿದ್ದಾರೆ. ಆದರೆ ಹೀಗೆ ಹೋದ ಅನೇಕರು ನಾನು ಕನ್ನಡದವಳು, ಕನ್ನಡ ಚಿತ್ರದಲ್ಲಿ ಅಭಿನಯಸಿದವಳು, ಕನ್ನಡ ಚಿತ್ರದಲ್ಲಿ ಅಭಿನಯಿಸುವ ಆಸೆಯನ್ನು ಹೊಂದಿರುವಳು ಎಂದು ಮೊದಲು ಹೇಳುತ್ತಿರಲಿಲ್ಲ. ಕನ್ನಡ ಬಂದರೂ ಮಾತನಾಡುತ್ತಿರಲಿಲ್ಲ. ಆದರೆ ಈಗೀಗ ರಿಬ್ಬನ್ ಕಟ್ ಮಾಡಲು ಬಂದರೂ ಕೂಡ ನಾನು ಕನ್ನಡದವಳು ಎನ್ನುತ್ತಿದ್ದಾರೆ. ತಮ್ಮ ಕನ್ನಡಾಭಿಮಾನದ ಪ್ರದರ್ಶನವನ್ನು ಮಾಡುತ್ತಿದ್ದಾರೆ. ಇದಕ್ಕೆ ಇನ್ನೊಂದು ಉದಾಹರಣೆ ಅಮೃತಾ ರಾವ್.

ಹೌದು, ಅಮೃತಾ ರಾವ್ ಒಂದು ಕಾಲದಲ್ಲಿ ಬಾಲಿವುಡ್‌ನಲ್ಲಿ ಸಂಚಲನ ಸೃಷ್ಟಿಸಿದ್ದ ನಾಯಕಿ. ಅಬ್ ಕೇ ಬರಸ್ ಚಿತ್ರದ ಮೂಲಕ ಚಿತ್ರರಂಗ ಪ್ರವೇಶಿಸಿದ ಅಮೃತಾ ಆ ನಂತರ ಅನೇಕ ಚಿತ್ರಗಳಲ್ಲಿ ಕಾಣಿಸಿಕೊಂಡರು. ತಮ್ಮ ಅಭಿನಯದ ಮೂಲಕ ಅಭಿಮಾನಿಗಳ ಹೃದಯವನ್ನು ಗೆದ್ದರು. ಅದರಲ್ಲಿಯೂ ಅಮೃತಾ ಅಭಿನಯದ ಇಶ್ಕ್ ವಿಷ್ಕ ಮತ್ತು ವಿವಾಹ್ ಚಿತ್ರವನ್ನು ಯಾರು ಮರೆಯಲಾರರು. ಅಮೃತಾಗೆ ಅಪಾರವಾದ ಕೀರ್ತಿಯನ್ನು ತಂದು ಕೊಟ್ಟ ಎರಡು ಚಿತ್ರಗಳಿವು.

ಇಂಥಾ ಅಮೃತಾ ರಾವ್ ಈಗ ಕನ್ನಡ ಚಿತ್ರರಂಗದ ಬಗ್ಗೆ ಮಾತನಾಡಿದ್ದಾರೆ. ಕರ್ನಾಟಕದ ಬಗ್ಗೆ ಮಾತನಾಡಿದ್ದಾರೆ. ಕರ್ನಾಟಕದ ಜೊತೆ ತಮಗೆ ಇರುವ ನಂಟನ್ನು ತಿಳಿಸಿದ್ದಾರೆ. ಹೌದು, ’ಹಲೋ ಹಿದ್ದು’ ಯೂಟ್ಯೂಬ್ ಚಾನೆಲ್‌ಗೆ ಸಂದರ್ಶನವನ್ನು ನೀಡಿರುವ ಅಮೃತಾ ರಾವ್ ಕನ್ನಡದಲ್ಲಿಯೇ ಮಾತು ಶುರುಮಾಡಿದ್ದಾರೆ. ಕನ್ನಡಿಗರಿಗೆ ನಾನು ಅಮೃತಾ ರಾವ್ ಮಾಡುವ ನಮಸ್ಕಾರಗಳು ಎಂದು ಹೇಳಿದ್ದಾರೆ.

ನನ್ನ ಅಪ್ಪ –ಅಮ್ಮ ಕಾರವಾರ ಕುಮಟಾ ಮೂಲದವರು ಹೀಗಾಗಿ ಕಾರವಾರ, ಕುಮಟಾ ಮತ್ತು ಮೈಸೂರಿನ ಅನೇಕ ಜಾಗಗಳ ಬಗ್ಗೆ ನನಗೆ ಗೊತ್ತಿದೆ ಎಂದು ಹೇಳಿದ್ದಾರೆ. ಕಾರವಾರ ನನಗೆ ತುಂಬಾ ಇಷ್ಟ ಅಲ್ಲಿನ ಪ್ರಕೃತಿ ಸೌಂದರ್ಯ ಸವಿಯಲು ನಾನು ಆಗಾಗ ಅಲ್ಲಿ ಹೋಗುತ್ತಿರುತ್ತೇನೆ ಎಂದಿರುವ ಅಮೃತಾ ನನ್ನ ಮಾತೃ ಭಾಷೆ ಕೊಂಕಣಿ ಎಂದು ಹೇಳಿದ್ದಾರೆ. ಕರ್ನಾಟಕ ನಮ್ಮ ಮನೆಯ ಇದ್ದಂತೆಯೇ ಎಂದು ಹೇಳಿದ್ದಾರೆ. ಇನ್ನು ಬೆಂಗಳೂರಿನಲ್ಲಿ ತಾವು ಕಳೆದ ದಿನಗಳನ್ನು ಮೆಲುಕು ಹಾಕಿರುವ ಅಮೃತಾ ರಾವ್ ನಾನು ಕಬ್ಬನ್ ಪಾರ್ಕ್‌ನಲ್ಲಿ ಎಲ್ಲ ಸುತ್ತಾಡಿದ್ದೇನೆ ಎಂದು ಹೇಳಿದ್ದಾರೆ.

ಮೈಸೂರು ಪಾಕ್ ಅಂದರೆ ನನಗೆ ಪಂಚ ಪ್ರಾಣ ಎಂದು ಹೇಳಿದ್ದಾರೆ. "’ಬಾಯ್ಸ್ ಗ್ಗಿ ಗರ್ಲ್ಸ್’ ರಿಯಾಲಿಟಿ ಶೋನಲ್ಲಿ ಬಿಗ್ ಬಾಸ್ ಖ್ಯಾತಿಯ ನಟಿ ಶೋಭಾ ಶೆಟ್ಟಿ " ಮುಂದುವರೆದು ಕನ್ನಡ ಚಿತ್ರರಂಗ ಅಂದರೆ ನನ್ನ ಪಾಲಿಗೆ ಅದು ಪುನೀತ್ ರಾಜ್ ಕುಮಾರ್ ಸರ್ ಎಂದಿರುವ ಅಮೃತಾ ರಾವ್ ನಾನು ಕನ್ನಡದಲ್ಲಿ ಚಿತ್ರ ಮಾಡಿದರೆ ಅದು ಪುನೀತ್ ಸರ್ ಜೊತೆಯೇ ಮಾಡಬೇಕು ಎಂದುಕೊಂಡಿದ್ದೆ ಎಂದು ಹೇಳಿದ್ದಾರೆ. ಆ ಅವಕಾಶ ಕೂಡ ಬಂದಿತ್ತು ಆದರೆ ಆಗ ನಾನು ಬೇರೆ ಚಿತ್ರವನ್ನು ಒಪ್ಪಿಕೊಂಡು ಬ್ಯುಸಿಯಾಗಿದ್ದೆ ಹೀಗಾಗಿ ಸಾಧ್ಯವಾಗಲಿಲ್ಲ, ಆದರೇನಂತೆ ಅವರ ಜೊತೆ ಆಕ್ಟ್ ಮಾಡಬೇಕು ಅಂದುಕೊಂಡಿದ್ದೆ ಅಲ್ವಾ ಅದೇ ಬೆಸ್ಟ್ ಕನಸು ಎಂದಿದ್ದಾರೆ.

ಅಂದ್ಹಾಗೇ 2019ರಿಂದ ಚಿತ್ರರಂಗದಿಂದ ದೂರ ಇರುವ ಅಮೃತಾ ರಾವ್ ಸದ್ಯ ಅಕ್ಷಯ್ ಕುಮಾರ್ ಅಭಿನಯದ ಜಾಲಿ ಎಲ್ ಎಲ್ ಬಿ 3 ಚಿತ್ರದ ಮೂಲಕ ಕಂ ಬ್ಯಾಕ್ ಮಾಡುತ್ತಿದ್ದಾರೆ. ಅಕ್ಷಯ್ ಕುಮಾರ್ ಮತ್ತು ಅರ್ಷದ್ ವಾರ್ಸಿ ಈ ಚಿತ್ರದಲ್ಲಿ ನಾಯಕನ ಪಾತ್ರಗಳನ್ನು ನಿರ್ವಹಿಸುತ್ತಿದ್ದಾರೆ.

ಪ್ರಕಾಶಕ– ಸಂಪಾದಕ ಹಾಗೂ ಮಾಲೀಕ ಲಕ್ಷ್ಮೀಪ್ರಸನ್ನ ಆರ್.ಹೆಚ್. ಅವರಿಂದ #1652/6, 20ನೇ ತಿರುವು, 8ನೇ ಮುಖ್ಯರಸ್ತೆ, ಸಿ ಬ್ಲಾಕ್, ಸಹಕಾರ ನಗರ, ಬೆಂಗಳೂರು–560092 ಇಲ್ಲಿ ಪ್ರಕಟಗೊಂಡು, ಮುದ್ರಣ: ಪಿ.ಎನ್.ಪ್ರಿಂಟರ್ಸ್, ನರಸಿಪಾಳ್ಯ, ಅರಿಶಿಣಕುಂಟೆ(ಪೋ.), ನೆಲಮಂಗಲ, ಬೆಂಗಳೂರು–562123 ಇಲ್ಲಿ ಮುದ್ರಿಸಲ್ಪಟ್ಟಿದೆ. RNI.KAR/KAN/2009/31934, ದೂರವಾಣಿ: 9448074878
Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
RNI.KAR/KAN/2009/31934.VOLUME-16/ISSUE-57 Email-mussanje2010@gmail.com, Phone: 9448074878